ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME-13 ಸಂಪುಟ:13 | ISSUE- ಸಂಚಿಕೆ: 18 | PAGE- ಪುಟ 8 | ಗುರುವಾರ 20.02.2025 | RS.ಬೆಲೆ 2/-

# ಮುಡಾ ಕೇಸ್: ಸಾಕ್ಷ್ಯಾಧಾರಗಳ ಕೊರತೆ
# ಸಿಎಂ ಸಿದ್ದರಾಮಯ್ಯಗೆ ಬಿಗ್ ರಿಲೀಫ್

ಮೈಸೂರು:ಫೆ.19: ರಾಜ್ಯ ರಾಜಕೀಯದಲ್ಲಿ ತೀವ್ರ ಬಿರುಗಾಳಿ ಎಬ್ಬಿಸಿದ್ದ ಮೈಸೂರು ನಗರಾಭಿವೃದ್ಧಿಪ್ರಾಧಿಕಾರ(ಮುಡಾ)ದ ನಿವೇಶನ ಹಂಚಿಕೆ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಅವರ ಪತ್ನಿ ಪಾರ್ವತಿ ಮತ್ತು ಇತರರ ವಿರುದ್ಧ ತನಿಖೆ ಪೂರ್ಣಗೊಳಿಸಿರುವ ಲೋಕಾಯುಕ್ತ ಪೊಲೀಸರು ನ್ಯಾಯಾಲಯಕ್ಕೆ ಬಿ ರಿಪೋರ್ಟ್ ಸಲ್ಲಿಸಲು ಸಿದ್ಧತೆ ನಡೆಸಿದ್ದಾರೆ.

ಈ ಸಂಬಂಧ ಲೋಕಾಯುಕ್ತ ಪೊಲೀಸರು ದೂರುದಾರ ಸ್ನೇಹಮಯಿ ಕೃಷ್ಣಗೆ ನೋಟಿಸ್ ನೀಡಿದ್ದು, ಅದರಲ್ಲಿ ಸಾಕ್ಷ್ಯಾಧಾರಗಳ ಕೊರತೆ ಇದೆ ಎಂದು ಹೇಳಿದ್ದು, ಎಲ್ಲ ಆರೋಪಗಳು ಸಾಕ್ಷ್ಯಾಧಾರಗಳ ಕೊರತೆಯಿಂದ ಸಾಬೀತಾಗಿಲ್ಲ ಎಂದು ತಿಳಿಸಿದೆ.

ಲೋಕಾಯುಕ್ತ ಎಸ್ಪಿ ಉದೇಶ್ ಅವರು, ಸ್ನೇಹಮಯಿ ಕೃಷ್ಣ ಅವರಿಗೆ ನೋಟಿಸ್ ನೀಡಿದ್ದು, ಇದರಲ್ಲಿ ನೀವು ನೀಡಿದ ದೂರಿನ ಸಂಬಂಧ ೦1 ಆರೋಪಿಯಿಂದ ೦ 4 ಆರೋಪಿವರೆಗೆ ವಿಚಾರಣೆ ನಡೆಸಲಾಗಿದೆ. ಇದು ಸಿವಿಲ್ ಸ್ವರೂಪದ್ದೂ, ತನಿಕೆ ನಡೆಸಲು ತಕ್ಕುದಲ್ಲ, ಕಾನೂನಿನ ತಪ್ಪು ತಿಳುವಳಿಕೆಯಿಂದ ಕೂಡಿದೆ. ಅಲ್ಲದೆ ದೂರಿನಲ್ಲಿ ವಜಾ ಮಾಡಿದ ಪ್ರಕರಣಗಳು ಸಹ ಇದೆ. ಸಾಕಷ್ಟು ಸಾಕ್ಷ್ಯಾಧಾರಗಳ ಕೊರೆತೆ ಇದೆ ಎಂದು ನೋಟಿಸ್ ನಲ್ಲಿ ತಿಳಿಸಲಾಗಿದೆ.

ಅಂತಿಮ ವರದಿ ನ್ಯಾಯಾಲಯಕ್ಕೆ ಸಲ್ಲಿಕೆಯಾಗುತ್ತಿದೆ. ಆದ್ದರಿಂದ ಇದಕ್ಕೆ ವಿರೋಧವಿದ್ದರೆ ನೋಟಿಸ್ ತಲುಪಿದ ಒಂದು ವಾರದೊಳಗೆ ನ್ಯಾಯಾಧೀಶರಿಗೆ ತಿಳಿಸಿ ಎಂದು ನೋಟಿಸ್



ನಲ್ಲಿ ಉಲ್ಲೇಖಿಸಲಾಗಿದೆ.

ಆರ್‌ಟಿಐ ಕಾರ್ಯಕರ್ತೆ ಸ್ನೇಹಮಯಿ ಕೃಷ್ಣ ಅವರ ದೂರಿನ ಮೇರೆಗೆ, ಬೆಂಗಳೂರಿನ ವಿಶೇಷ ನ್ಯಾಯಾಲಯವು ಸೆಪ್ಟೆಂಬರ್ 25 ರಂದು ಮೈಸೂರಿನ ಲೋಕಾಯುಕ್ತ ಪೊಲೀಸರಿಗೆ ತನಿಖೆ ನಡೆಸುವಂತೆ ನಿರ್ದೇಶಿಸಿತ್ತು.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ನಿವೇಶನ ಹಂಚಿಕೆ ವಿಚಾರದಲ್ಲಿ ಭಾರೀ ಅಕ್ರಮ ನಡೆದಿದೆ ಎಂದು ಆರೋಪಿಸಲಾಗಿದೆ. ಸಿದ್ದರಾಮಯ್ಯ ಪತ್ನಿ ಪಾರ್ವತಿ ಅವರ ಹೆಸರಿನಲ್ಲಿದ್ದ ಕೆಸರೆ ಗ್ರಾಮದ ಸರ್ವೆ ನಂಬರ್ 464ರಲ್ಲಿ 3.16 ಎಕರೆ ಜಮೀನನ್ನು ದೇವನೂರು ಬಡಾವಣೆ ನಿರ್ಮಾಣಕ್ಕೆ ಭೂಸ್ವಾಧೀನ ಮಾಡಿಕೊಳ್ಳಲಾಗಿತ್ತು. ಈ ಜಾಗವನ್ನು ಸಿದ್ದರಾಮಯ್ಯ ಪತ್ನಿ ಪಾರ್ವತಿ ಅವರಿಗೆ ದಾನ ಪತ್ರದ ಮೂಲಕ ಅವರ ಸಹೋದರ ಕೊಟ್ಟಿದ್ದರು. ಇದು ಒಟ್ಟು 1,48,104 ಚದರ ಅಡಿ ಜಾಗ ಇತ್ತು. ಅದರ ಬದಲಿಗೆ ಮುಡಾ 2021ರಲ್ಲಿ ಪಾರ್ವತಿ ಅವರಿಗೆ ಮೈಸೂರಿನ ವಿಜಯನಗರ ಬಡಾವಣೆಯಲ್ಲಿ 38,284 ಚದರ ಅಡಿ ಜಾಗ ಕೊಟ್ಟಿದ್ದಾರೆ ಇದು ಚರ್ಚೆಗೆ ಕಾರಣವಾಗಿದೆ. ಇದರ ಬೆನ್ನಲ್ಲೇ ಸಿದ್ದರಾಮಯ್ಯ ಬಾಮೈದ ಜಾಗ ಕೊಟ್ಟಿದ್ದ ಬಗ್ಗೆ ಸ್ಪಷ್ಟನೆಯನ್ನೂ ನೀಡಿದ್ದಾರೆ. ಆದರೂ ಸಿಎಂ ಪತ್ನಿಗೆ ವಿಜಯನಗರದಲ್ಲೇ ಏಕೆ ಸೈಟ್ ಕೊಟ್ಟರು ಎಂಬ ಪ್ರಶ್ನೆ ಮೂಡಿದೆ. ಇದೇ ಪ್ರಶ್ನೆ ಈಗ ಮುಡಾದ ನಡೆ ಮೇಲೆ ಅನುಮಾನ ಬರುವಂತೆ ಮಾಡಿತ್ತು.

## ಅನ್ನಭಾಗ್ಯ: ಇನ್ಮುಂದೆ ಹಣದ ಬದಲು
## 10 ಕೆಜಿ ಅಕ್ಕಿ: ಸಚಿವ ಮುನಿಯಪ್ಪ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಫೆ.19: ಅನ್ನಭಾಗ್ಯ ಯೋಜನೆ ಅಡಿ ಇನ್ನುಮುಂದೆ ಫಲಾನುಭವಿಗಳಿಗೆ 10 ಕೆಜಿ ಅಕ್ಕಿ ಸಿಗಲಿದೆ. ಇಷ್ಟು ದಿನ 5 ಕೆಜಿ ಅಕ್ಕಿ ಮತ್ತು ಉಳಿದ 5 ಕೆಜಿ ಅಕ್ಕಿ ಬದಲಿಗೆ 170 ರೂ. ಕೊಡ್ತಿದ್ದ ಸರ್ಕಾರ ಇನ್ನು ಮುಂದೆ ಹಣದ ಬದಲಾಗಿ 10 ಕೆಜಿ ಅಕ್ಕಿಯೇ ನೀಡಲಿದೆ ಅಂತ ಆಹಾರ ಸಚಿವ ಮುನಿಯಪ್ಪ ತಿಳಿಸಿದ್ದಾರೆ. ಈ ತಿಂಗಳಿಂದಲೇ 10 ಕೆಜಿ ಅಕ್ಕಿ ಹಂಚಿಕೆಯಾಗಲಿದೆ.



ವಿಧಾನಸೌಧದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಸಚಿವರು, ಇಷ್ಟು ದಿನ ಕೇಂದ್ರ ಸರ್ಕಾರ ಅಕ್ಕಿ ಕೊಡಲು ಒಪ್ಪದೇ ಇರೋದ್ರಿಂದ 5 ಕೆಜಿ ಅಕ್ಕಿ ಮತ್ತು 5 ಕೆಜಿಗೆ ಹಣ ಕೊಡ್ತಿದ್ವಿ. ಈಗ ಕೇಂದ್ರ ಸರ್ಕಾರ 22.50 ರೂಪಾಯಿ ಕಡಿಮೆ ಬೆಲೆಯಲ್ಲಿ ಅಕ್ಕಿ ಕೊಡಲು ಒಪ್ಪಿದೆ. ಹೀಗಾಗಿ ಇನ್ನುಮುಂದೆ 10 ಕೆಜಿ ಅಕ್ಕಿ ಕೊಡೋದಾಗಿ ಸ್ಪಷ್ಟಪಡಿಸಿದರು. ನಮಗೆ ಪ್ರತಿ ತಿಂಗಳು 2.10 ಲಕ್ಷ ಮೆಟ್ರಿಕ್ ಟನ್ ಅಕ್ಕಿ ಬೇಕಾಗಿದೆ. ಇದಕ್ಕಾಗಿ 536.71 ಕೋಟಿ ಹಣ ಖರ್ಚಾಗಲಿದೆ. ಈ ಹಣ ನಾವು ಕೇಂದ್ರಕ್ಕೆ ಕೊಡಲು ಒಪ್ಪಿದ್ದೇವೆ. ರಾಜ್ಯದಲ್ಲಿ ಸುಮಾರು 1.53 ಕೋಟಿಗೂ ಹೆಚ್ಚು ಬಿಪಿಎಲ್ ಕಾರ್ಡ್ ಇದ್ದು, 4.50 ಕೋಟಿ ಜನರಿಗೆ ಅಕ್ಕಿ ಕೊಡ್ತಿದ್ದೇವೆ. ಸಾಗಣೆ ವೆಚ್ಚವೂ ಸೇರಿ 25 ರೂ.ಗೆ ನಮಗೆ ಅಕ್ಕಿ ಸಿಗಲಿದೆ. ಹಣದ ಬದಲಾಗಿ ಅಕ್ಕಿ ಕೊಡೋದ್ರಿಂದ ಸರ್ಕಾರಕ್ಕೆ ಪ್ರತಿ ತಿಂಗಳು 150 ರಿಂದ 190 ಕೋಟಿ ರೂ. ಉಳಿತಾಯವಾಗಲಿದೆ ಅಂತ ಸಚಿವರು ತಿಳಿಸಿದರು. ಈಗಾಗಲೇ ಅಕ್ಟೋಬರ್ ವರೆಗೆ ಹಣ ಪಾವತಿ ಮಾಡಿದ್ದು ನವೆಂಬರ್, ಡಿಸೆಂಬರ್, ಜನವರಿ ಹಣ ಸಕಾಲಕ್ಕೆ ಫಲಾನುಭವಿಗಳಿಗೆ ಸೇರಲಿದೆ. ಅಲ್ಲದೇ ಈಗಾಗಲೇ ಫೆಬ್ರವರಿ ತಿಂಗಳ ಪಡಿತರ ಪಡೆದಿದ್ದರೆ ಹೆಚ್ಚುವರಿ ಅಕ್ಕಿಯನ್ನ ಮಾರ್ಚ್ ತಿಂಗಳು ಕೊಡಲಿದ್ದೇವೆ ಅಂತ ಸಚಿವರು ತಿಳಿಸಿದರು.

## ಸಾರ್ವಜನಿಕರಿಗೆ ತುರ್ತು ಔಷಧಿಗಳು
## ಲಭ್ಯವಾಗಲಿ:ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ

ಮಲ್ಲಮ್ಮ ನುಡಿ ವಾರ್ತೆ

ಬೀದರ : ಫೆ.19: ಆಸ್ಪತ್ರೆಗೆ ಬರುವ ಸಾಮಾನ್ಯ ಹಾಗೂ ಬಡ ರೋಗಿಗಳಿಗೆ ಅಗತ್ಯ ತುರ್ತು ಔಷಧಿಗಳು ಲಭ್ಯವಾಗುವಂತೆ ಆರೋಗ್ಯಾಧಿಕಾರಿಗಳು ನಿಗಾ ವಹಿಸುವಂತೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ತಿಳಿಸಿದರು.

ಅವರು ಇಂದು ಬೀದ್ರಿ ಕಾಲೋನಿ ನಗರ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಹೊರ ರೋಗಿಗಳೊಂದಿಗೆ ಚರ್ಚಿಸಿದರು.

ಹಾವು ಕಡಿತಕ್ಕೆ, ನಾಯಿ



ಕಡಿತಕ್ಕೆ ಸೇರಿದಂತೆ ತುರ್ತು ಔಷಧಿಗಳನ್ನು ಲಭ್ಯವಾಗುವಂತೆ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಶಿವಶಂಕರ ಟಿ. ಅವರಿಗೆ ಸೂಚಿಸಿದರು.

## ಸ್ವಾಭಿಮಾನದ ಸಂಕೇತ
## ಶಿವಾಜಿ ಮಹಾರಾಜ : ಗದ್ದಿಗೌಡರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ.ಫೆ.19–ಚಿಕ್ಕ ವಯಸ್ಸಿನಲ್ಲಿಯೇ ರಾಜ್ಯಭಾರ ವಹಿಸಿಕೊಂಡು ವೀರ, ಶೂರ, ತ್ಯಾಗಿಯಾಗಿ ವೈರಿಯ ಎದುರು ಶರಣಾಗದ ಸ್ವಾಭಿಮಾನಿಯಾದವರು ಛತ್ರಪತಿ ಶಿವಾಜಿ ಎಂದು ಸಂಸದ ಪಿ.ಸಿ.ಗದ್ದಿಗೌಡರ ಹೇಳಿದರು.

ನವನಗರದ ಡಾ.ಬಿ.ಆರ್. ಅಂಬೇಡ್ಕರ ಭವನದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಬಾಲ್ಯದಲ್ಲಿಯೇ ತಾಯಿ ಜೀಜಾಬಾಯಿ ಮಹಾಭಾರತ, ರಾಮಾಯಣಗಳಂತ ನೈತಿಕ ಶೌರ್ಯದ ಕಥೆಗಳನ್ನು ಹೇಳಿಕೊಟ್ಟಿದ್ದರ ಪ್ರಕಾರ, ದಾದಾ ಕೊಂಡದೇವ ಗುರುವಿನಿಂದ ಕುದುರೆ ಸವಾರಿ ಸೇರಿದಂತೆ ರಣನೀತಿ ಕಲಿತ. ಆಧ್ಯಾತ್ಮಿಕವಾಗಿ ಸಂತ ರಾಮದಾಸರನ್ನು ಗುರು ಮಾಡಿಕೊಂಡಿದ್ದರು ಎಂದರು.

ಆಳ್ವಿಕೆಯ ಪ್ರಥಮದಲ್ಲಿಯೇ ಸ್ಥಳೀಯ ಮಾವಳಿ ಸೈನ್ಯ ಕಟ್ಟಿಕೊಂಡು ತನೆಗೆ ಎದುರಾದ ಆದಿಲ್‌ಶಾಯಿ ಕುತುಬ್‌ಶಾಯಿ, ಡಚ್ಚರು ಮತ್ತು ಪೋರ್ಚಗೀಜರನ್ನು ಏಕಕಾಲಕ್ಕೆ ಎದುರಿಸಿ ವಿಜಯ ಸಾಧಿಸಿದವರು ಶಿವಾಜಿ. ಆದಿಲಶಾಯಿಗೆ ಶರಣಾಗುವ ಪ್ರಸಂಗ ಬಂದಾಗ ಸ್ವಾಭಿಮಾನದಿಂದ ಶರಣಾಗದೇ ಆದಿಲಶಾಯಿಯನ್ನು ಮಣಿಸಿದ ಶೂರ ಛತ್ರಪತಿ ಶಿವಾಜಿ ಎಂದು ಹೇಳಿದ ಗದ್ದಿಗೌಡರ, ತಂದೆ ತಾಯಿಗಳು ತಮ್ಮ ಮಕ್ಕಳಿಗೆ ಜೀಜಾಬಾಯಿಯಂತೆ ವೀರ ಶೂರರ ಕಥೆಗಳನ್ನು ಹೇಳಿ ಶೌರ್ಯವಂತರನ್ನಾಗಿಸುವ ಜೊತೆಗೆ ಶಿಕ್ಷಣವಂತರನ್ನಾಗಿ ಮಾಡಬೇಕೆಂದರು.

ಅಧ್ಯಕ್ಷತೆ ವಹಿಸಿದ್ದ ಶಾಸಕ ಎಚ್.ವಾಯ್.ಮೇಟಿ ಮಾತನಾಡಿ, ಶಿವಾಜಿ ಚಿಕ್ಕವನಾಗಿದ್ದಾಗ

(2ನೇ ಪುಟ ನೋಡಿ)

## ಕಲೆ ಮನಸ್ಸನ್ನುಅರಳಿಸುತ್ತದೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.19–ಕಲೆ ಮಕ್ಕಳಲ್ಲಿರುವ ಸೃಜನಶೀಲತೆಯನ್ನು ತೋರಿಸುತ್ತದೆಯಲ್ಲದೇ ಅದು ಮನಸ್ಸನ್ನು ಅರಳಿಸುವ ಸಾಧನ ಎಂದು ಶಾಸಕ ವಿಜಯಾನಂದ ಕಾಶಪ್ಪನವರ ಹೇಳಿದರು.

ಜಿಲ್ಲೆಯ ಹುನಗುಂದ ಪಟ್ಟಣದ ಸರ್ಕಾರಿ ಆದರ್ಶ ವಿದ್ಯಾಲಯದಲ್ಲಿ ಬುಧವಾರ ಕರ್ನಾಟಕ ಲಲಿತಕಲಾ ಅಕಾಡೆಮಿ ಸಹಯೋಗದಲ್ಲಿ ನಡೆದ 'ನಿಮ್ಮೊಂದಿಗೆ ನಾವು' ಚಿತ್ರಕಲಾ ಪ್ರದರ್ಶನ ಹಾಗೂ ಶಾಲಾ ಮಕ್ಕಳ ಕಲಾ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಲೆ ಮಕ್ಕಳಲ್ಲಿನ ಸೃಜನಶೀಲತೆಯನ್ನು ಪ್ರೋತ್ಸಾಹಿಸುತ್ತದೆ. ಕರ್ನಾಟಕ ಕಲಾವಿದರ ಬೀಡಾಗಿದೆ. ಕಲೆ ಮತ್ತು ಸಾಹಿತ್ಯ ಬದುಕಿಗೆ ನೆಮ್ಮದಿ ಕೊಡುತ್ತವೆ. ರಾಜ್ಯ ಸರ್ಕಾರ ವಿವಿಧ ಅಕಾಡೆಮಿಗಳ ಮೂಲಕ ಕಲಾವಿದರು ಮತ್ತು ಬರಹಗಾರರನ್ನು ಗುರುತಿಸಿ ಪ್ರೋತ್ಸಾಹಿಸುವ ಕಾರ್ಯ ಮಾಡುತ್ತಿದೆ ಎಂದು ಕಾಶಪ್ಪನವರ ಹೇಳಿದರು.

ಲಲಿತಕಲಾ ಅಕಾಡೆಮಿ ಸದಸ್ಯ ಚಂದ್ರಕಾಂತ ಸರೋದೆ ಪ್ರಾಸ್ತಾವಿಕವಾಗಿ ಮಾತನಾಡಿ, ಚಿತ್ರಕಲೆ ಎಂದರೆ ಮನಸ್ಸಿನಲ್ಲಿರುವುದನ್ನು ಅಭಿವ್ಯಕ್ತಗೊಳಿಸುವುದಾಗಿದೆ. ಕಲೆ ಮತ್ತು ಸಂಸ್ಕೃತಿಗೆ ಸಂಬಂಧಿಸಿದ ವಿಷಯಗಳನ್ನು ಹೆಚ್ಚಾಗಿ ಪಠ್ಯ ಪುಸ್ತಕಗಳಲ್ಲಿ ಅಳವಡಿಸಬೇಕಾಗಿದೆ. ಅಕಾಡೆಮಿಗಳು ನಶಿಸಿಹೋಗುತ್ತಿರುವ ಕಲೆಗಳನ್ನು ಗುರುತಿಸಿ ಉಳಿಸುವ ಕಾರ್ಯವನ್ನು ಮಾಡುತ್ತಿವೆ ಎಂದರು.

ಅತಿಥಿಗಳಾಗಿದ್ದ ಸಾಹಿತಿ ಸಿದ್ದಲಿಂಗಪ್ಪ ಬೀಳಗಿ, ಸರ್ಕಾರಿ ಪದವಿ ಪೂರ್ವ ಕಾಲೇಜಿನ

(2ನೇ ಪುಟ ನೋಡಿ)

## ಲೋಕಾಯುಕ್ತ ಕ್ಲೀನ್ ಚಿಟ್: ಕಾಂಗ್ರೆಸ್‌ನ
## ಕೆಲವು ನಾಯಕರಿಗೆ ಬೇಸರ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಫೆ.19 ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸಿದ ಲೋಕಾಯುಕ್ತ ಅಧಿಕಾರಿಗಳು ಸಿಎಂ ಸಿದ್ದರಾಮಯ್ಯನವರಿಗೆ ಕ್ಲೀನ್ ಚಿಟ್ ನೀಡಿದೆ. ಈ ಕುರಿತು ಪ್ರತಿಕ್ರಿಯೆ ನೀಡಿದ ವಿಪಕ್ಷ ನಾಯಕ ಆರ್ ಅಶೋಕ್ , ಸಿಎಂ ಸೈಟ್



ವಾಪಾಸ್ ಕೊಟ್ಟಿರುವುದು ನಮ್ಮ ಹೋರಾಟದಿಂದ. ಆದ್ರೂ ಲೋಕಾಯುಕ್ತ ಕ್ಲೀನ್ ಚಿಟ್ ನೀಡಿರುವುದಕ್ಕೆ ನಮಗೆ ಬೇಸರ ಇದೆ. ನಮಗಿಂತಲೂ ಹೆಚ್ಚು ಕಾಂಗ್ರೆಸ್‌ನ ಕೆಲವು ನಾಯಕರಿಗೆ ಬೇಸರ ತರಿಸಿದೆ ಎಂದು ವ್ಯಂಗ್ಯವಾಡಿದರು.

ಬಿಜೆಪಿ ಮತ್ತು ಜೆಡಿಎಸ್ ಮುಡಾ ವಿಚಾರದಲ್ಲಿ ಅಧಿವೇಶನದಲ್ಲಿ ಚರ್ಚೆ ಮಾಡಿದ್ದೇವೆ, ಪಾದಯಾತ್ರೆ

(2ನೇ ಪುಟ ನೋಡಿ)

## ಕೊಪ್ಪಳ ಮಾದರಿಯಲ್ಲಿ ಹುಮನಾಬಾದ್
## ಕೆಮಿಕಲ್ ಕಾರ್ಖಾನೆ ಗಳು ಬಂದ್ ಅಗಲಿ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್. ಕೊಪ್ಪಳ ಜಿಲ್ಲೆಯಲ್ಲಿ ಕೆಮಿಕಲ್ ಕಾರ್ಖಾನೆ ಹಟಾವೋ ಕೊಪ್ಪಳ ಬಚಾವೊ ಅಂದೋಲನ ಆರಂಭವಾಗುತ್ತಿದೆ. ಆ ಮಾದರಿಯಲ್ಲಿಯೇ ಹುಮನಾಬಾದ್ ಕೆಮಿಕಲ್ ಕಾರ್ಖಾನೆ ಬಂದ್ ಗೆ ಎಲ್ಲರು ಕೈ ಜೋಡಿಸಬೇಕು ಎಂಬ ಒತ್ತಾಯ ನಾಗರಿಕರದಾಗಿದೆ.

ಕಾರ್ಖಾನೆ ಬಂದ್ ಮಾಡಲು ಯಾರೊಬ್ಬರ ನೇತ್ರತ್ವ ಬೇಕಾಗಿಲ್ಲ ಎಲ್ಲರ ನೇತ್ರತ್ವದಲ್ಲಿ ಹೋರಾಟ ನಡೆಯಬೆಕು ಆವಾಗ ಮಾತ್ರ ಹೋರಾಟ ಯಶಸ್ವಿಯಾಗಲಿದೆ ಎಂಬ ಅನಿಸಿಕೆ ಜನರದಾಗಿದೆ. ಕೊಪ್ಪಳದ ಗವಿಸಿದ್ದೇಶ್ವರ ಗುರುಗಳು. ಅಲ್ಲಿನ ಶಾಸಕರು. ಹಾಗೂ ಇತರೆ ಸಂಘ ಸಂಸ್ಥೆಗಳು ಅವರಿಗೆ ಕೈ ಜೊಡಿಸಿದ್ದಾರೆ. ಅದೇ ಮಾದರಿಯಲ್ಲಿ ಹುಮನಾಬಾದ್ ಕೆಮಿಕಲ್ ಕಾರ್ಖಾನೆ ವಿರುದ್ಧ ಹೊರಾಟ ನಡೆಯಬೇಕು. ಕಾರ್ಖಾನೆಗಳಿಂದ ಈ ಭಾಗದ ಜನರ 10 ವರ್ಷ ಆಯಸ್ಸು ಕಮ್ಮಿ ಆಗುತ್ತಿದೆ. ಈ ಬಗ್ಗೆ ಚುನಾಯಿತ ಪ್ರತಿನಿಧಿಗಳು ಎಚ್ಚೆತ್ತುಕೊಳ್ಳಬೇಕು ಎಂದು ಸಾರ್ವಜನಿಕ ಕರ ಒತ್ತಾಯವಾಗಿದೆ.




ಹುಣಸಗಿ: ಮಾರ್ಚ್ 1 ರಂದು ನಡೆಯುವ ಕಾಗಿನೆಲೆ ಸಂಗಮೇಶ್ವರ ಜಾತ್ರೆಗೆ ಪಾದಯಾತ್ರೆ ಹೊರಟ ಕೊಡೇಕಲ್ಲ ಹಾಗೂ ಸುತ್ತಮುತ್ತಲಿನ ಪಾದಯಾತ್ರಿಗಳಿಗೆ ಕೊಡೇಕಲ್ಲ ಬಸವ ಪೀಠಾಧಿಪತಿಗಳಾದ ಶ್ರೀ ವೃಷಭೇಂದ್ರ ಅಪ್ಪನವರು ಪೂಜೆ ಸಲ್ಲಿಸುವದರೊಂದಿಗೆ ಚಾಲನೆ ನೀಡಿದರು. (ಮಲ್ಲಮ್ಮ ನುಡಿ ಚಿತ್ರ)



ಬಸವಕಲ್ಯಾಣ :- ನಗರದ ಬಸವ ಮಹಾಮನೆಯ ಸಂಸ್ಥೆಯಲ್ಲಿ ಫೇ. 21 ರಿಂದ 23 ರವರೆಗೆ ನಡೆಯವ ಅನುಭವ ಮಂಟಪ 7 ನೇ ಸಂಸತ್ತು ಮತ್ತು ಸಮಾನತ ಸಮಾವೇಶ ಕಾರ್ಯಕ್ರಮದ ಕರಪತ್ರಗಳನ್ನು ಪೂಜ್ಯ ಶ್ರೀ ಸಿದ್ದರಾಮ ಶರಣರು ಬೆಲ್ದಾಳ ಬಿಡುಗಡೆಗೊಳಿಸಿದರು. ಈ ಸಂದರ್ಭದಲ್ಲಿ ಕರ್ನಾಟಕ ಲಿಂಗಾಯತ ಸಮನ್ವಯ ಸಮಿತಿ ಸಂಚಾಲಕರಾದ ಶ್ರೀ ಕಾಂತ ಸ್ವಾಮಿ. ಮುಖಂಡರಾದ ಲಕ್ಷ್ಮಣ ದಸ್ತಿ. ಮನೋಹರ ಮೈಸೆ. ಶಾಮರಾವ್. ಪಿಂಟು ಕಾಂಬಳೆ. ಸಂಜು ಗಾಯಕವಾಡ. ದಿಗಂಬರ ಜಲದೆ. ಎಂ. ಬಿ. ನಿಂಗಪ್ಪ. ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

## ನೂತನವಾಗಿ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ ಸದ್ಯಸರಾಗಿ ಆಯ್ಕೆಯಾದ ಭೀಮರಾವ್ ಪಾಟೀಲ್ ಅವರಿಗೆ ಗಾದಾರವರಿಂದ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಹುಮ್ನಾಬಾದ: ಹುಮ್ನಾಬಾದನ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಗಳಲ್ಲಿ ಒಂದಾದ ವಿವೇಕಾನಂದ್ ಶಿಕ್ಷಣ ಸಂಸ್ಥೆಯಲ್ಲಿ ನೂತನವಾಗಿ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ ಸದ್ಯಸರಾದಂತಹ ಭೀಮರಾವ್ ಪಾಟೀಲ್ ಅವರಿಗೆ ಸನ್ಮಾನ ಕಾರ್ಯಕ್ರಮವನ್ನು ಮಾಡಲಾಯಿತು, ಕಾರ್ಯಕ್ರಮವನ್ನು ಉದ್ದೇಶಿಸಿ ಪಾಟೀಲರು ಮಾತನಾಡುತ್ತಾ ಈ ವಿವೇಕಾನಂದ ಶಿಕ್ಷಣ ಸಂಸ್ಥೆಯಲ್ಲಿ ನಾನು ಸಹ ವಿದ್ಯಾರ್ಥಿಯಾಗಿ ವ್ಯಾಸಂಗ ಮಾಡಿದ್ದೇನೆ ನನ್ನ ಮಕ್ಕಳು ಸಹ ಈ ಶಿಕ್ಷಣ ಸಂಸ್ಥೆಯಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದಾರೆ ಈ ಸಂಸ್ಥೆಯಲ್ಲಿ ಕಲಿತ ಮಕ್ಕಳು ಡಾಕ್ಟರ್ ಇಂಜಿನಿಯರ್ ಮುಂತಾದ ದೊಡ್ಡ ಹುದ್ದೆಗಳಲ್ಲಿ ಇದ್ದಾರೆ ಹಾಗಾಗಿ ಈ ಶಿಕ್ಷಣ ಸಂಸ್ಥೆಯ ಕೊಡುಗೆ ಅಪಾರ ಎಂದು ಹೇಳಿದರು, ನಂತರವಾಗಿ ಭೀಮರಾವ್ ಪಾಟೀಲ್ ಅವರ ಸುಪುತ್ರಿ ವೀರಾ ಬಿ ಪಾಟೀಲ್ ಮಾತನಾಡುತ್ತಾ ಶಿಕ್ಷಣದಿಂದ ಎಲ್ಲವನ್ನೂ ಸಾಧಿಸಲು ಸಾಧ್ಯ ಉತ್ತಮ ಶಿಕ್ಷಣವನ್ನು ಪಡೆಯಿರಿ ನಾನು ಈ ವೇದಿಕೆ ಮೇಲೆ ಮಾತನಾಡಲು ಕೂಡ ಶಿಕ್ಷಣದಿಂದಲೇ ಸಾಧ್ಯ ಎಂದು ಹೇಳಿದರು ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ರಮೇಶ್ ಎಂ ಗಾದಾ ಮಾತನಾಡುತ್ತಾ ಬರುವಂತ ದಿನಗಳಲ್ಲಿ ವಿದ್ಯಾರ್ಥಿಗಳಿಗೆ ಕ್ರೀಡಾ ಚಟುವಟಿಕೆಗಳಲ್ಲಿ ಉತ್ತಮ ಸಾಧನೆ ಮಾಡಲು ಪ್ರಯತ್ನ ಮಾಡುತ್ತೇವೆ ಹಾಗೂ ತಾವು ವಿಧಾನ ಪರಿಷತ್ ನ ಸದಸ್ಯರು ಈ ಭಾಗದ ಅಭಿವೃದ್ಧಿಗೆ ಇನ್ನಷ್ಟು ಸಹಕರಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ವಿಧಾನಪರಿಷತ್ ಸದಸ್ಯರು ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ ನೂತನ ಸದಸ್ಯರು ಭೀಮರಾವ್ ಪಾಟೀಲ್, ಈಶಾನ್ಯ ವಲಯ ಪದವೀಧರರ ಕ್ಷೇತ್ರದ ವಿಧಾನ ಪರಿಷತ್ ಸದಸ್ಯರಾದ ಡಾ ಚಂದ್ರಶೇಖರ ಪಾಟೀಲ್, ಮಾಜಿ ಸಚಿವರ ಧರ್ಮಪತ್ನಿಯಾದ ಪ್ರೇಮ ರಾಜಶೇಖರ ಪಾಟೀಲ, ವಿಧಾನ ಪರಿಷತ್ನ ಸದಸ್ಯರ ಧರ್ಮಪತ್ನಿಯಾದ ವಿದ್ಯಾ ಭೀಮರಾವ್ ಪಾಟೀಲ, ಡಿಸಿಸಿ ಬ್ಯಾಂಕ್ ನ ಉಪಾಧ್ಯಕ್ಷರಾದ ಅಭಿಷೇಕ್ ಪಾಟೀಲರ ಧರ್ಮಪತ್ನಿ ಮಹಾಲಕ್ಷ್ಮಿ ಆರ್ ಪಾಟೀಲ್, ಭೀಮರಾವ್ ಪಾಟೀಲರ ಸುಪುತ್ರಿಯಾದ ವೀರಾ ಬಿ ಪಾಟೀಲ್ ವಿವೇಕಾನಂದ್ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ರಮೇಶ್ ಎಂ ಗಾದಾ ಖಜಂಚಿಗಳಾದ ನಾರಾಯಣರಾವ್ ಜಾಜಿ ಜಂಟಿ ನಿರ್ದೇಶಕರಾದ ಅನಿಲ್ ಪಲ್ಲರಿ ಸದ್ಯಸರು ಹಾಗೂ ಧರ್ಮ ಗುರುಗಳಾದ ಸಿದ್ದಯ್ಯ ಆಧುನಿಕ ಒಡೆಯರ್, ಸದಸ್ಯರಾದ ನಾಗರಾಜ ವಾಸಗಿ ಎಲ್ಲ ವಿಭಾಗದ ಪ್ರಾಂಶುಪಾಲರು ಉಪ ಪ್ರಾಂಶುಪಾಲರು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಹೈ ಮಾಸ್ಕ ಕಾಮಗಾರಿಗೆ ಭಾಗ್ಯಶ್ರೀ ರೇವಡಿ ಭೂಮಿ ಪೂಜೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.19-ಜಿಲ್ಲೆಯ ಹುನಗುಂದ ಪಟ್ಟಣದಲ್ಲಿ ಲಕ್ಷ್ಮೀ ನಗರ ಸೇರಿದಂತೆ ವಿವಿಧ ಬಡಾವಣೆಗಳಿಗೆ 29 ಲಕ್ಷ ರೂಗಳ ಎಸ್ಸೆಪ್ಸಿ ವಿಶೇಷ ಅನುದಾನದಲ್ಲಿ ಹೈ ಮಾಸ್ಕ ಕಾಮಗಾರಿಗೆ ಪುರಸಭೆಯ ಅಧ್ಯಕ್ಷೆ ಭಾಗ್ಯಶ್ರೀ ರೇವಡಿ ಭೂಮಿ ಪೂಜೆ ನೆರವೇರಿಸಿದರು.

ಪೌರಾಡಳಿತ ಇಲಾಖೆ, ಜಿಲ್ಲಾ ಅಭಿವೃದ್ಧಿ ಕೋಶ ಬಾಗಲಕೋಟ ಹಾಗೂ ಪುರಸಭೆ ಕಾರ್ಯಾಲಯ ಹುನಗುಂದ ಸಹಯೋಗದಲ್ಲಿ 2022-23 ನೇ ಸಾಲಿನ ಎಸ್ಸೆಪ್ಸಿ ವಿಶೇಷ ಅನುದಾನದ ಅಡಿಯಲ್ಲಿ ಪುರಸಭೆ ವ್ಯಾಪ್ತಿಯ ಲಕ್ಷ್ಮಿ ನಗರ ಸೇರದಂತೆ ವಿವಿಧ ಬಡಾವಣೆಗಳಿಗೆ ಹೈ ಮಾಸ್ಕ ವ್ಯವಸ್ಥೆ ಮಾಡಲಾಗುತ್ತಿದೆ ಎಂದು ಭಾಗ್ಯಶ್ರೀ ರೇವಡಿ ತಿಳಿಸಿದರು.

ಕೆಲವೇ ದಿನಗಳಲ್ಲಿ ಕಾಮಗಾರಿ ಪೂರ್ಣಗೊಳ್ಳುತ್ತದೆ.ಪುರಸಭೆಯಿಂದ ಪ್ರತಿ ವಾರ್ಡಗಳಲ್ಲಿ ಸಾಕಷ್ಟು ಅಭಿವೃದ್ಧಿ ಕಾಮಗಾರಿಗಳನ್ನು ಮಾಡುವ ಗುರಿ ಹೊಂದಿದ್ದು, ಅಭಿವೃದ್ಧಿ ಕಾಮಗಾರಿಗಳಿಗೆ ಹೆಚ್ಚಿನ ಅನುದಾನ ನೀಡುವಂತೆ ಶಾಸಕ ವಿಜಯಾನಂದ ಕಾಶಪ್ಪನವರ ಅವರಿಗೆ ಮನವಿ ಕೂಡ ಮಾಡಲಾಗಿದೆ.ಅನುದಾನ ಬಂದ ನಂತರ ಹಂತ ಹಂತವಾಗಿ ಪಟ್ಟಣದ ಅಭಿವೃದ್ಧಿ ಕೆಲಸ ಕಾರ್ಯಗಳನ್ನು ಪ್ರಾಮಾಣಿಕವಾಗಿ ಮಾಡಲಾಗುವುದು ಎಂದು ಹೇಳಿದರು.

ಸದ್ಯ ಪಟ್ಟಣದಲ್ಲಿ 7 ಹೈಮಾಸ್ಕ ಕಾಮಗಾರಿ ಕೆಲಸ ಪ್ರಗತಿಯಲ್ಲಿದ್ದು ಕಾಮಗಾರಿ ಸಂಪೂರ್ಣವಾಗಿ ಮಗಿದ ನಂತರ ಶಾಸಕರು ಉದ್ಘಾಟಿಸಲಿದ್ದಾರೆ. ಪಟ್ಟಣದ ಅಭಿವೃದ್ಧಿ ವಿಷಯದಲ್ಲಿ ಎಲ್ಲ ಸದಸ್ಯರಗಳ ವಿಶ್ವಾಸ ಪಡೆದುಕೊಳ್ಳುವುದಾಗಿ ರೇವಡಿ ಹೇಳಿದರು.

ಈ ಸಂದರ್ಭದಲ್ಲಿ ಉಪಾಧ್ಯಕ್ಷೆ ರಾಜಮ್ಮ ಬದಾಮಿ, ಸದಸ್ಯರಾದ ಬಸವರಾಜ ಗೊಣ್ಣಾಗರ, ಮಹ್ಮದಲಿ ದೋಟಿಹಾಳ, ಮುಖಂಡರಾದ ಮಲ್ಲಿಕಾರ್ಜುನ ಹೂಗಾರ, ಹನಮಂತ ನಡುವಿನಮನಿ, ಶಾಂತಯ್ಯ ತಾವರಗೇರಿಮಠ, ಮಹಾಂತೇಶ ಚಿತ್ತವಾಡಗಿ, ಮುಖ್ಯಾಧಿಕಾರಿ ಗುರುರಾಜ ಚೌಕಿಮಠ,ಅಭಿಯಂತರ ಜಿ.ಎಲ್. ಬಂಡಿವಡ್ಡರ,ಮಹಾಂತೇಶ ತಾರಿವಾಳ, ಬಾಬು ಲೈನ್, ಹುಸೇನ ಭಾವಿಕಟ್ಟಿ ಉಪಸಿ ್ಥತರಿದ್ದರು.

## ವಾರಣಾಸಿಯಲ್ಲಿ ಶಾಸಕ ಪ್ರಭು ಚವ್ಹಾಣ, ಶರಣು ಸಲಗರ ಪೂಜೆ




ಮಲ್ಲಮ್ಮ ನುಡಿ ವಾರ್ತೆ

ಕಮಲನಗರ: ಪ್ರಯಾಗರಾಜ್, ಕಾಶಿ, ವಾರಣಾಸಿ ಪ್ರವಾಸದಲ್ಲಿರುವ ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಹಾಗೂ ಬಸವಕಲ್ಯಾಣ ಶಾಸಕರಾದ ಶರಣು ಸಲಗರ್ ಅವರು ಫೆ.19ರಂದು ವಾರಣಾಸಿಯ ಸೋಮನಾಥ ಮಹಾದೇವ ಮಂದಿರದಲ್ಲಿ ಶಿವಾಜಿ ಮಹಾರಾಜರ ಭಾವಚಿತ್ರಕ್ಕೆ ಪೂಜೆ, ಪುಷ್ಪನಮನ ಸಲ್ಲಿಸುವ ಮೂಲಕ ಜಯಂತಿಯನ್ನು ಆಚರಿಸಿದರು.

ಈ ವೇಳೆ ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಮಾತನಾಡಿ, ಶಿವಾಜಿ ಮಹಾರಾಜರು ವೀರಯೋಧ,ಅಪ್ಪಟ ದೇಶಭಕ್ತ, ಶಿಸ್ತು, ಪ್ರಮಾಣಿಕತೆ, ನಾಗರಿಕ ಸ್ನೇಹಿ ಆಡಳಿತ ನೀಡಿದ ಸರ್ವ ಜನಾಂಗವನ್ನು ಗೌರವಿಸಿದ ದೇಶ ಕಂಡ ಶ್ರೇಷ್ಠ ನಾಯಕ ಎಂದರು.

ಶೌರ್ಯ, ಪರಾಕ್ರಮ, ಯುದ್ಧ ತಂತ್ರಗಳಿಗೆ ಹೆಸರುವಾಸಿಯಾಗಿದ್ದ ಅವರು, ಎಲ್ಲಾ ರೀತಿಯ ಯುದ್ಧಕಲೆಗಳನ್ನು ಕರಗತ ಮಾಡಿಕೊಂಡಿದ್ದರು. ಭಾಷೆ, ಗಡಿ ಮೀರಿ ಸೈನಿಕರನ್ನು ಸಂಘಟಿಸಿದವರು. ಮೊಘಲರು ಮತ್ತು ಸುಲ್ತಾನರ ದಬ್ಬಾಳಿಕೆಯನ್ನು ದಿಟ್ಟತನದಿಂದ ಹಿಮ್ಮೆಟ್ಟಿಸಿ ಸ್ವತಂತ್ರ್ಯ ಸಾಮ್ರಾಜ್ಯವನ್ನು ಕಟ್ಟಿದರಲ್ಲದೇ ಸನಾತನ ಧರ್ಮವನ್ನು ರಕ್ಷಿಸಿದ ಧೀರ ಎಂದು ವರ್ಣಿಸಿದರು.

ಸ್ವಾಭಿಮಾನಿ ರಾಷ್ಟ್ರನಿರ್ಮಾಣಕ್ಕೆ ಹೋರಾಡಿದ ಛತ್ರಪತಿ ಶಿವಾಜಿ ಮಹಾರಾಜರು ಹಿಂದೂಸ್ಥಾನವನ್ನು ಒಗ್ಗೂಡಿಸಲು ಬಹುವಾಗಿ ಶ್ರಮಿಸಿದ್ದರು. ದೇಶದ ಅನೇಕ ಕೋಟೆಗಳನ್ನು ಗೆದ್ದು ಸಾಮ್ರಾಜ್ಯವನ್ನು ವಿಸ್ತರಿಸಿದ್ದರು. ಛತ್ರಪತಿ ಶಿವಾಜಿ ಮಹಾರಾಜರ ಹೆಸರು ಭಾರತದ ಚರಿತ್ರೆಯಲ್ಲಿ ಅಗ್ರಪಂಕ್ತಿಯಲ್ಲಿ ನಿಲ್ಲುವಂತಹದ್ದು, ಅವರ ಶೌರ್ಯ, ಸಾಹಸ, ದೇಶಭಕ್ತಿ ಎಲ್ಲರಿಗೂ ಪ್ರೇರಣಾದಾಯಿ ಎಂದರು.

ಬಸವಕಲ್ಯಾಣ ಶಾಸಕರಾದ ಶರಣು ಸಲಗರ ಮಾತನಾಡಿ, ಅಪ್ರತಿಮ ದೇಶಭಕ್ತರಾಗಿದ್ದ ಶಿವಾಜಿ ಮಹಾರಾಜರು ಭಾರತದ ಇತಿಹಾಸದಲ್ಲಿ ಪ್ರಸಿದ್ಧ ಮರಾಠ ಸಾಮ್ರಾಜ್ಯ ಸ್ಥಾಪಿಸಿದವರು. ಚಿಕ್ಕ ವಯಸ್ಸಿನಲ್ಲಿಯೇ ದೇಶಾಭಿಮಾನ ಬೆಳೆಸಿಕೊಂಡಿದ್ದರು. ತಾಯಿಯ ಮಾರ್ಗದರ್ಶನ ಪಾಲಿಸಿ ಶ್ರೇಷ್ಠ ಸಾಮ್ರಾಜ್ಯವನ್ನು ಕಟ್ಟಿ ಬೆಳೆಸಿದವರು. ಅವರ ಜೀವನ ಮತ್ತು ಸಾಧನೆಗಳು ಎಲ್ಲರೂ ಪ್ರೇರಣೆಯಾಗಿಸಿಕೊಳ್ಳಬೇಕು ಎಂದರು.

ಪ್ರತಿ ವರ್ಷ ಕ್ಷೇತ್ರದಲ್ಲಿ ಅದ್ದೂ-ರಿಯಾಗಿ ಜಯಂತಿಯನ್ನು ಆಚರಿಸುತ್ತಿದ್ದೆ. ಈ ಬಾರಿ ಪ್ರಯಾಗರಾಜ್, ಕಾಶಿ, ವಾರಣಾಸಿ ಪ್ರವಾಸದಲ್ಲಿದ್ದು, ವಾರಣಾಸಿಯಲ್ಲಿಯೇ ಸರಳವಾಗಿ ಜಯಂತಿ ಆಚರಿಸಲಾಗುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮುಖಂಡರಾದ ರಾಮಶೆಟ್ಟಿ ಪನ್ನಾಳೆ, ಜ್ಞಾನೇಶ್ವರ ಮೂಳೆ, ದಯಾನಂದ ಕಾರಬಾರಿ, ಜೈಪಾಲ ರಾಠೋಡ, ಗುರುನಾಥ ಮೂಲಗೆ, ಶ್ರೀನಿವಾಸ ಪಾಟೀಲ, ಚಂದ್ರಕಾಂತ ಪಾಟೀಲ, ರಾಜಕುಮಾರ ಅಲಶೆಟ್ಟೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಬಳ್ಳಾರಿ: ರಾಜ್ಯ ಆಹಾರ ಆಯೋಗದ ಅಧ್ಯಕ್ಷ ಡಾ.ಕೃಷ್ಣಪ್ಪ ಭೇಟಿ ಹಾಗೂ ಪರಿಶೀಲನೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.19-ರಾಜ್ಯ ಆಹಾರ ಆಯೋಗದ ಅಧ್ಯಕ್ಷರಾದ ಡಾ.ಕೃಷ್ಣಪ್ಪ ಹಾಗೂ ಸದಸ್ಯರು ಒಳಗೊಂಡ ತಂಡವು ಸೋಮವಾರದಿಂದ ಬಳ್ಳಾರಿ ಜಿಲ್ಲೆಗೆ ವಿವಿಧೆಡೆ ಭೇಟಿ ನೀಡಿ ಪರಿಶೀಲಿಸಿದರು.

ಆಹಾರ ಇಲಾಖೆ ಅಧಿಕಾರಿಗಳೊಂದಿಗೆ ಆಹಾರ ನಾಗರಿಕ ಸರಬರಾಜು ನಿಗಮದ ಸಗಟು ಗೋದಾಮುಗಳ ತಪಾಸಣೆ, ಬಳ್ಳಾರಿ ನಗರ ಮತ್ತು ಗ್ರಾಮೀಣ ಪ್ರದೇಶಗಳ ನ್ಯಾಯಬೆಲೆ ಅಂಗಡಿಗಳಿಗೆ ಭೇಟಿ ನೀಡಿ ಪಡಿತರ ವಿತರಣೆ ಕಾರ್ಯ, ಪಡಿತರ ವಿತರಣೆ ಸಮರ್ಪಕವಾಗಿ ವಿತರಿಸಿರುವ ಬಗ್ಗೆ ಫಲಾನುಭವಿಗಳ ಮನೆ-ಮನೆ ಭೇಟಿ ನೀಡಿ ಖುದ್ದು ಪರಿಶೀಲನೆ ನಡೆಸಿದರು.

ಪರಿಶಿಷ್ಟ ಜಾತಿ, ಪರಿಶಿಷ್ಠ ಪಂಗಡ, ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಇಲಾಖೆಗಳ ಹಾಸ್ಟೆಲ್ ಗಳಿಗೆ ಭೇಟಿ ನೀಡಿ ಆಹಾರ ಗುಣಮಟ್ಟ, ಸ್ವಚ್ಛತೆ ಮತ್ತು ನೈರ್ಮಲ್ಯತೆ ಹಾಗೂ ವಿದ್ಯಾರ್ಥಿಗಳಿಗೆ ಬೇಕಾದ ಅಗತ್ಯ ಸಾಮಾಗ್ರಿಗಳ ಕುರಿತು ಪರಿಶೀಲಿಸಿದರು.

ಕಾನೂನು ಮಾಪನ ಶಾಸ್ತ್ರ ಇಲಾಖೆಯಡಿಯ ಪೆಟ್ರೋಲ್ ಬಂಕ್ ತಪಾಸಣೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಬಳ್ಳಾರಿ ನಗರದ ವಿವಿಧ ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ ಮಕ್ಕಳಿಗೆ ನೀಡುವ ಆಹಾರ ಗುಣಮಟ್ಟ, ಸ್ವಚ್ಛತೆ ಮತ್ತು ನೈರ್ಮಲ್ಯತೆ ಕುರಿತು ಪರಿಶೀಲಿಸಿ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

ಬಿಮ್ಸ್ ಆಸ್ಪತ್ರೆ ಮುಖ್ಯಸ್ಥರೊಂದಿಗೆ ಬಾಣಂತಿಯರಿಗೆ ನೀಡುವ ಎಲ್ಲಾ ರೀತಿಯ ಸೌಲಭ್ಯಗಳ ಕುರಿತು ಮಾಹಿತಿ ಪಡೆದುಕೊಂಡರು. ಬಳಿಕ ಕಂಪ್ಲಿ, ಸಂಡೂರು, ಸಿರುಗುಪ್ಪ ತಾಲೂಕುಗಳ ಸಗಟು ಗೋದಾಮುಗಳಿಗೆ ಮತ್ತು ನ್ಯಾಯಬೆಲೆ ಅಂಗಡಿಗಳಿಗೆ ಭೇಟಿ ನೀಡಿ ಪರಿಶೀಲನೆ ಮಾಡಿದರು. ನಂತರ ಬಳ್ಳಾರಿ ನಗರದ ವಿವಿಧ ಹೋಟೆಲ್‌ಗಳಿಗೆ ಭೇಟಿ ನೀಡಿ ಆಹಾರದ ಗುಣಮಟ್ಟ, ಸ್ವಚ್ಛತೆ ಮತ್ತು ನೈರ್ಮಲ್ಯತೆ ಪರಿಶೀಲನೆ ನಡೆಸಿದರು.

ಈ ಸಂದರ್ಭಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪನಿರ್ದೇಶಕಿ ಸಕೀನಾ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವಿಜಯ್‌ಕುಮಾರ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ರಕ್ಷಣಾಧಿಕಾರಿ ಎಳೆನಾಗಪ್ಪ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಅಬ್ದುಲ್ಲಾ ಸೇರಿದಂತೆ ಇತರರು ಇದ್ದರು.

## ಕಾಂಗ್ರೆಸ್ ಸರ್ಕಾರ ಸಂಪೂರ್ಣವಾಗಿ ಪಾಪರ್ ಆಗಿದೆ : ಸಿ.ಟಿ.ರವಿ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಫೆ.19-ಪ್ರತಿದಿನ ನಗರದ ಫ್ರೀಡಂಪಾರ್ಕ್‌ನಲ್ಲಿ ವೇತನ, ಅನುದಾನ, ಪರಿಷ್ಕರಣೆ, ಹೆಚ್ಚಳಕ್ಕಾಗಿ ಸಾವಿರಾರು ನೌಕರರು ಪ್ರತಿಭಟನೆ ನಡೆಸುತ್ತಿದ್ದಾರೆ. ಅವರಿಗೆ ನಯಾಪೈಸೆಯೂ ಬಿಡುಗಡೆ ಮಾಡದ ಕಾಂಗ್ರೆಸ್ ಸರ್ಕಾರ ಸಂಪೂರ್ಣವಾಗಿ ಪಾಪರ್ ಆಗಿದೆ ಎಂದು ಮಾಜಿ ಸಚಿವ ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಆಪಾದಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗ್ಯಾರಂಟಿಗಳಿಗೆ ಹಣ ನೀಡಲು ಸರ್ಕಾರದ ಖಜಾನೆಯಲ್ಲಿ ಹಣವೇ ಇಲ್ಲ. ಫ್ರೀಡಂಪಾರ್ಕ್‌ನಲ್ಲಿ ಕಳೆದ ಹಲವು ತಿಂಗಳಿನಿಂದ ಸಾವಿರಾರು ನೌಕರರು ಪ್ರತಿಭಟನೆ ನಡೆಸುತ್ತಿದ್ದಾರೆ. ಇದೊಂದು ಪಾಪರ್ ಸರ್ಕಾರ ಅಲ್ಲವೇ ಎಂದು ಪ್ರಶ್ನಿಸಿದರು.

ಗ್ಯಾರಂಟಿಗಳು ತಿಂಗಳ ಸಂಬಳ ಅಲ್ಲವಲ್ಲ ಎಂಬ ಸಚಿವ ಕೆ.ಜೆ. ಜಾರ್ಜ್ ಹೇಳಿಕೆಗೆ ಪ್ರತಿಕ್ರಿಸಿದ ಅವರು, ಸಚಿವರು ಗ್ಯಾರಂಟಿಗಳಿಗೆ ಕಳಂಕ ಹಚ್ಚುವ ಮಾತಾಡಿದ್ದಾರೆ. ಈಗಾಗಲೇ ಅಂಗನವಾಡಿ ಕಾರ್ಯಕತೆ-ರ್ಯರಿಗೆ, ನೌಕರರಿಗೆ ವೇತನ ಕೊಡಲು ಆಗುತ್ತಿಲ್ಲ. ಎಲ್ಲ ಪದಾರ್ಥಗಳ ಬೆಲೆ ಏರಿಕೆ ಮಾಡಿದ್ದಾರೆ. ಬೆಲೆ ಏರಿಕೆ ಮಾಡಲು ಅಧಿಕಾರಕ್ಕೆ ಬಂದ್ದೀರಾ? ಮೋಸ ಮಾಡುವುದಕ್ಕೆ ಗ್ಯಾರಂಟಿಗಳ ಘೋಷಣೆ ಮಾಡಿದ್ದೀರಾ? ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕುಂಭ ಮೇಳದ ನದಿ ನೀರು ಸ್ನಾನಕ್ಕೆ ಯೋಗ್ಯವಲ್ಲ ಎಂಬ ವರದಿ ಕುರಿತು ಮಾತನಾಡಿದ ಅವರು, ಯಾವ ದೃಷ್ಟಿಯಿಂದ ವರದಿ ಕೊಟ್ಟಿದ್ದಾರೋ ಗೊತ್ತಿಲ್ಲ. ಆದರೆ ಇದು ಭಾವನೆಗಳ ಪ್ರಶ್ನೆ. ಹರಿಯುವ ನದಿಗೆ ದೋಷ ಇರುವುದಿಲ್ಲ ಎಂಬುದು ನಮ್ಮ ನಂಬಿಕೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

## ಬೆಂಗಳೂರು: ಜೆಸಿಬಿ ಹರಿದು ಎರಡು ವರ್ಷದ ಮಗು ಸಾವು



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಬೆಂಗಳೂರಿನ ಮಹದೇವಪುರ ಪೊಲೀಸ್ ಠಾಣಾ ವ್ಯಾಪ್ತಿಯ ಕಾಡುಗೋಡಿ ಬಳಿಯ ಸಿಟಿ ಲೇಔಟ್‌ನಲ್ಲಿ ಆಟವಾಡುತ್ತಿದ್ದ ಎರಡು ವರ್ಷದ ಮಗುವಿನ ಮೇಲೆ ಜೆಸಿಬಿ ಹರಿದ ಪರಿಣಾಮ, ಮಗು ಸ್ಥಳದಲ್ಲೇ ಸಾವನ್ನಪ್ಪಿರುವ ದಾರುಣ ಘಟನೆ ಮಂಗಳವಾರ ನಡೆದಿದೆ.ಮೃತ ಮಗುವನ್ನು ಥವನ್ ರೆಡ್ಡಿ ಎಂದು ಗುರುತಿಸಲಾಗಿದ್ದು, ಜೆಸಿಬಿ ಚಾಲಕ ಅತಿ ವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿದ ಪರಿಣಾಮ ಮನೆ ಮುಂದೆ ಆಟವಾಡುತ್ತಿದ್ದ ಮಗು ಮೇಲೆ ಹರಿದಿದೆ.

ನಿನ್ನೆ ಸಂಜೆ ರಸ್ತೆಯಲ್ಲಿ ಆಟವಾಡುತ್ತಿದ್ದ ಥವನ್ ರೆಡ್ಡಿ ಮೇಲೆ ಜೆಸಿಬಿ ಹರಿದಿದೆ. ತಕ್ಷಣ ಮಗುವನ್ನು ವೈದೇಹಿ ಆಸ್ಪತ್ರೆಗೆ ರವಾನಿಸಲಾಗಿದೆ. ಪರೀಕ್ಷೆ ನಡೆಸಿದ ವೈದ್ಯರು ಮಾರ್ಗ ಮಧ್ಯದಲ್ಲಿ ಮಗು ಮೃತಪಟ್ಟಿರುವುದಾಗಿ ತಿಳಿಸಿದ್ದಾರೆ.

ಈ ಸಂಬಂಧ ಮಹಾದೇವಪುರ ಸಂಚಾರಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಜನ ವಸತಿ ಪ್ರದೇಶದಲ್ಲಿ ಕಾರ್ಖಾನೆಗಳು ಸ್ಥಾಪನೆ ಮಾಡುವುದು ನಿಯಮಗಳ ಉಲ್ಲಂಘನೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಫೆ.19:ತಾಲೂಕಿನ ಗಿಣಿಗೇರಿ ಭಾಗದಲ್ಲಿ ಅನೇಕ ಕಾರ್ಖಾನೆಗಳು ನಿಯಮ ಉಲ್ಲಂಘಿಸಿ ಜನವಸತಿ ಪ್ರದೇಶಗಳಲ್ಲಿಸ್ಥಾಪನೆಯಾಗಿವೆ ಎಂದುಜನಪರಸಂಘಟನೆಗಳ ಒಕ್ಕೂಟದ ಜಿಲ್ಲಾ ಸಂಚಾಲಕ ಎಸ್,ಎ,ಗಫಾರ್ ಆಕ್ರೋಶ ವ್ಯಕ್ತಪಡಿಸಿದರು,

ಕೊಪ್ಪಳ ಜಿಲ್ಲಾ ಬಚಾವೋ ಆಂದೋಲನ ಸಮಿತಿಯಿಂದ ಗ್ರಾಮೀಣ ಹಾಗೂ ನಗರದ ಬೀದಿಗಳಲ್ಲಿ ಎಮ್,ಎಸ್,ಪಿ,ಎಲ್,ಕಾರ್ಖಾನೆ ವಿಸ್ತರಣೆಹಾಗೂಅಣುಸ್ಥಾವರ ಸ್ಥಾಪನೆ ವಿರುದ್ಧ ಜನ ಜಾಗೃತಿ ಬೀದಿ ಕಾರ್ಯಕ್ರಮದಲ್ಲಿ ಮುಂದುವರೆದು ಮಾತನಾಡಿ ಜನವಸತಿ ಪ್ರದೇಶಗಳಿಂದ ಸಾಕಷ್ಟುದೂರ ಇರಬೇಕೆಂಬ ನಿಯಮ ಇದೆ,ಜನರಿಗೆ ಅದ- ರಿಂದ ಯಾವುದೇ ರೀತಿಯ ಕೆಟ್ಟ ದುಷ್ಪರಿಣಾಮಗಳನ್ನು ಆಗಬಾರದು ಎಂಬ ಕಾಯ್ದೆ ಇದ್ದರೂ ಸಹ ಕಾಯ್ದೆ ನಿಯಮಗಳನ್ನು ಎಲ್ಲವೂ ಉಲ್ಲಂಘನೆ ಮಾಡಿದ್ದಾರೆ, ಚುನಾಯಿತ ಪ್ರತಿನಿಧಿಗಳು ಅದರ ಲಾಭ ಉಡಾಯಿಸಿ ಕಾರ್ಖಾನೆಗಳು ಸ್ಥಾಪನೆ ಮಾಡಿದ್ದರಿಂದ ಸುಮಾರು 30ಕ್ಕೂಹೆಚ್ಚುಹಳ್ಳಿಗಳ ಮತ್ತು ನಗರದ ಜನರಿಗೆ ಆರೋಗ್ಯದ ಸಮಸ್ಯೆಯಾಗುತ್ತಿದೆ,ಆಹಳ್ಳಿಗಳ ಮನೆಗಳಲ್ಲಿಕಾರ್ಖಾನೆಗಳಬೂದಿ ಬೀಳುತ್ತಿದೆ, ಉಸಿರಾಡುವುದು ಸಮಸ್ಯೆಯಾಗಿದೆ,ಪ್ರಬಲವಾಗಿ ಬೆಳೆದಿರುವ ಕಾರ್ಖಾನೆಗಳಿಂದ ಸ್ಥಳೀಯ ಜನರಿಗೆ ಯಾವುದೇ ಲಾಭವಾಗುತ್ತಿಲ್ಲ,ಕಾರ್ಖಾನೆಗಳು ಈ ಭಾಗದಲ್ಲಿಯ ಜನರಿಗೆ ಉದ್ಯೋಗ ಕೊಡುತ್ತೇವೆ ಎಂದು ಬಂದು, ಸಣ್ಣ ಪುಟ್ಟ ಹುದ್ದೆಗಳಲ್ಲಿ ಕೆಲಸ ಕೊಟ್ಟು, ಉನ್ನತ ಹುದ್ದೆಗಳಲ್ಲಿ ಬೇರೆ ರಾಜ್ಯದವರಿಗೆ ಉದ್ಯೋಗ ಕೊಡುತ್ತಿದ್ದಾರೆ,ಹೊಲಕೊಟ್ಟವರು ಯಾವುದೇ ಲಾಭವಿಲ್ಲದೆ ಬೀದಿಪಾಲಾಗಿದ್ದಾರೆ,ಹಳಿಗಳಷ್ಟೇ ಅಲ್ಲ ಎಮ್,ಎಸ್,ಪಿ,ಎಲ್ ಕಾರ್ಖಾನೆ ಜಿಲ್ಲಾಧಿಕಾರಿಗಳ ಕಛೇರಿ ವರೆಗೂ ವಿಸ್ತರಣೆ- ಯಾಗುತ್ತಾ ಬಂದಿದೆ,ನಗರದ ಸಮೀಪದಬಡಾವಣೆಗಳಲ್ಲಿಯ ಮನೆಗಳವರೆಗೂ ಬೂದಿ ಬರುತ್ತಿದೆ,ಹಲವಾರುರೋಗಗಳು ಉಲ್ಬಣಗೊಳ್ಳುತ್ತಿದೆ,ಕಾರ್ಖಾನೆ ವಿಸ್ತರಣೆಯಾದರೆ ಗಿಣಿಗೇರಿ ಭಾಗದ ಹಳ್ಳಿಗಳು ಹಾಗೂ ಕೊಪ್ಪಳನಗರವನ್ನುಸರ್ಕಾರ




ದೂರದಲ್ಲಿಸ್ಥಳಾಂತರಿಸಬೇಕಾಗುತ್ತದೆ ಎಂದು ಎಚ್ಚರಿಸಿ, ಹೊಲಗಳಲ್ಲಿ ಬೆಳೆಯುವಂತ ಬೆಳೆಗಳ ಮೇಲೆ ಬೂದಿ ಬಿದ್ದು ಆಹಾರವು ಸಹ ಕಲುಷಿತಗೊಳ್ಳುತ್ತಿದೆ,ಇಂಥ ಆಹಾರ ತಿನ್ನುವ ಪರಿಸ್ಥಿತಿ ಬಂದಿದೆ,ನಮಗೆ ಆರೋಗ್ಯಕರ ಬದುಕು ಬೇಕಾಗಿದೆ, ಬರುವ ಪೀಳಿಗೆಗೆ ಯಾವುದೇ ತೆ- ೂಂದರೆ ಆಗಬಾರದು ಎಂದರೆ ಎಲ್ಲರೂ ಒಗ್ಗಟ್ಟಾಗಿ ಹೋರಾಟ ಮಾಡಲು ಮುಂದಾಗಬೇಕು, ಅಣುಸ್ಥಾವರ ಸ್ಥಾಪಿಸಲು ಹೊರಟಿರುವುದು ಸರಿಯಲ್ಲ ಇದು ನಮ್ಮ ಜಿಲ್ಲೆಯಲ್ಲಿ ಸ್ಥಾಪಿಸಬಾರದು ಎಂದು ಎಚ್ಚರಿಕೆ ನೀಡಿ,ಫೆಬ್ರವರಿ 22ರಂದು ಸಾಹಿತ್ಯ ಭವನದಲ್ಲಿ ಪರಿಸರದ ಮೇಲೆ ಆಗುವ ದುಷ್ಪರಿಣಾಮಗಳ ಕುರಿತು ಕಾರ್ಯಕ್ರಮವಿದೆ, ತಾವೆಲ್ಲರೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ,ಈಹೋರಾಟನಮ್ಮ ಬೇಡಿಕೆ ಈಡೇರಿಸುವವರೆಗೂ ನಿರಂತರವಾಗಿ ನಡೆಯುತ್ತದೆ ಎಂದು ನುಡಿದರು.

ಟಿಯುಸಿಐ ಸಂಚಾಲಕ ಕೆ.ಬಿ.ಗೋನಾಳ ಮಾತನಾಡಿ ಬಲ್ಡೋಟಾಮಾಲಿಕತ್ವದಮಿನರಲ್ಸ್ ಸೇಲ್ಸ್ ಪ್ರೈವೇಟ್ ಲಿಮಿಟೆಡ್ (ಎಮ್,ಎಸ್,ಪಿ,ಎಲ್) 54 ಸಾವಿರ ಕೋಟಿ ಹೂಡಿಕೆಯ 1.50 ಎಂಟಿಪಿ ಉಕ್ಕಿನ ಉತ್ಪದನಾ ವಿಸ್ತರಣಾ ಘಟಕವನ್ನು ಬಲ್ಡೋಟಾ ಸ್ಟೀಲ್ಸ್ ಪ್ರೈವೇಟ್ ಲಿಮಿಟೆಡ್ ಎಂದು ಹೆಸರು ಬದಲಿಸಿಕೊಂಡು,ಸ್ಥಳೀಯಜನರ ಗಮನ ಬೇರೆಡೆ ಸೆಳೆಯುವ ಹುನ್ನಾರ ಹೊಂದಿರುವ ಕಂಪನಿ ಹಾಗೂ ಅನುಮತಿ ನೀಡಿದ ಸರ್ಕಾರದ ಕ್ರಮವನ್ನು ಖಂಡಿಸಿ,ಈಗಿರುವ ಘಟಕವನ್ನು ಸಂಪೂರ್ಣವಾಗಿ ಮುಚ್ಚಿದರೆ ಮಾತ್ರವೇ ಕೊಪ್ಪಳ ನಗರದ ಜನರು ಆರೋಗ್ಯಕರಗಾಳಿಯನ್ನು ಉಸಿರಾಡಬಹುದು.ಸದ್ಯದಲ್ಲಿರುವ ಘಟಕವನ್ನು ಮುಚ್ಚುವ ತೀರ್ಮಾನ ಕೈಗೊಳ್ಳಬೇಕಾದ ಅಗತ್ಯವಿದ್ದಾಗಲೂ ವಿಸ್ತರಣೆಗೆ ಮುಂದಾದ ಬಲ್ಡೋಟಾ ಕಂಪನಿಗೆ ಜಾಗತಿಕ ಹೂಡಿಕೆದಾರರ ಸಮಾವೇಶದಲ್ಲಿರತ್ನಗಂಬಳಿಹಾಕಿ ಸ್ವಾಗತಿಸಿರುವ ಸರ್ಕಾರದ ನಡೆ ಸಂಶಯಗಳಿಗೆ ಎಡೆಮಾಡಿದೆ. ಕರ್ನಾಟಕ, ಆಂಧ್ರ ಪ್ರದೇಶ, ತೆಲಂಗಾಣದ 3 ಕೋಟಿ ಜನರ ಜೀವನಾಡಿಯಾದ ತುಂಗಭದ್ರಾ ನದಿ ನೀರು ಅರ್ಧದಷ್ಟು ಕೊಪ್ಪಳದ 50 ಬೃಹತ್ ಕಾರ್ಖಾನೆಗಳು ಇದಕ್ಕೂ ಹೆಚ್ಚಿನ ಬಳ್ಳಾರಿ, ವಿಜಯನಗರದ ಬೃಹತ್ ಕಾರ್ಖಾನೆಗಳು ಬಳಸಿಕೊಳ್ಳುತ್ತಿವೆ. ಈ ಮೂರು ಜಿಲ್ಲೆಗಳಲ್ಲಿ ಕೇವಲ 30 ಸಾವಿರ ಉದ್ಯೋಗ ಸೃಷ್ಟಿಸಿ 3 ಕೋಟಿ ಜನರ ಗ್ರಾಮೀಣದ ಎರಡು ಬೆಳೆಯ ನೀರಾವರಿ ಕೃಷಿ, ನಗರಗಳ ಕುಡಿಯುವ ನೀರಿನ ಹಕ್ಕು ಕಸಿದುಕೊಂಡಿವೆ.ರೈತರು ಮತ್ತು ನಗರಗಳ ಜನರು ನೀರಿಗಾಗಿ ಪರಿತಪಿಸುವ ಸ್ಥಿತಿ ಪ್ರತಿ ವರ್ಷ ಎದುರಾದಾಗ ಪ್ರಕೃತಿಯಲ್ಲಿ ಸಾಕಷ್ಟು ಮಳೆಯಾಗಿಲ್ಲ ಎನ್ನುವ ಸಬೂಬು ಹೇಳಿ ವಂಚಿಸಲಾಗುತ್ತಿದೆ. ಉದ್ಯೋಗ ಸೃಷ್ಟಿ ಎನ್ನುವ ಹುಸಿ ಭರವಸೆ ಸುಳ್ಳೆಂದು ಗೊತ್ತಾಗಿದೆ. ಭೂ ಬಾಧಿತ ಕುಟುಂಬಗಳಿಗೆ ಶೇ.5 ರಷ್ಟು ಉದ್ಯೋಗ ಕೊಟ್ಟಿಲ್ಲ.ಸ್ಥಳೀಯ ಆರ್ಥಿಕ ಅಭಿವೃದ್ಧಿ ಎನ್ನುವ ಮಾತು 20 ವರ್ಷಗಳಿಂದ ಸುಳ್ಳಾಗಿದೆ. ಕೊಪ್ಪಳ ನಗರ ಸಂಪೂರ್ಣ ಕಾರ್ಖಾನೆ ಧೂಳು ಹಾಗೂ ಹೊಗೆ ಆವರಿಸಿ ಅನಾರೋಗ್ಯದ ದುಷ್ಪರಿಣಾಮ ಪ್ರತಿಯೊಬ್ಬರೂ ಎದುರಿಸಿ ಬದುಕುವಂತಾಗಿದೆ.ಗ್ರಾಮೀಣ ಜನರ ಅಕ್ರಮ ಭೂಸ್ವಾಧೀನ ಹಾಗೂ ಪರಿಸರದ ಮೇಲಿನ ಭವಿಷ್ಯದ ಮಾಲಿನ್ಯ ಕುರಿತು ಕೊಪ್ಪಳ ಜಿಲ್ಲಾ ಬಚಾವೋ ಆಂದೋಲನ ಸಮಿತಿ ಕಳೆದ 2005 ರಿಂದ ಹೋರಾಡುತ್ತಾ ಬರುತ್ತಿದೆ.

ಈಗಲಾದರೂ ಜನರು ಜಾಗೃತರಾಗಿ ಹೋರಾಡಿ ಕಂಪನಿಗಳನ್ನು ಜಿಲ್ಲೆಯಿಂದ ಹೊರಗೆ ಹಾಕದಿದ್ದರೆ,ಕೊಪ್ಪಳ ನಗರ ಮತ್ತು ತಾಲೂಕಿನ ಕಾರ್ಖಾನೆ ಧೂಳು ಬಾಧಿತ ಗ್ರಾಮೀಣ ಜನರು ಎಚ್ಚೆತ್ತು- ಕೊಂಡುಹೋರಾಟಮಾಡದಿದ್ದರೆ ಮುಂದಿನ ಪೀಳಿಗೆಗೆ ಭವಿಷ್ಯ ಮಂಕಾಗುತ್ತದೆ.ಆದ್ದರಿಂದ ಉಗ್ರ ಹೋರಾಟಕ್ಕೆ ಕೊಪ್ಪಳ ನಗರದ ಹಾಗೂ ಧೂಳು ಬಾಧಿತ ಗ್ರಾಮೀಣ ಜನರು ಮುಂದಾಗಬೇಕೆಂದು ಹೇಳಿದರು.

ಮೂರನೆ ದಿನದಲ್ಲಿ ಮುಂದುವರೆದಿರುವ ಜಾಗೃತಿ ಆಂದೋಲನ. ನಿನ್ನೆ ದಿನ ಕೊಪ್ಪಳ ನಗರ, ಹಾಲವರ್ತಿ, ಬೆಳವಿನ ಹಾಳ,ಬೇವಿನ ಹಳ್ಳಿ, ಹುಲಿಗಿ,ಹೊಸಕನಕಪುರ,ಹಳೆಯ ಕನಕಪುರದಲ್ಲಿ ಆಂದೋಲನ ಜರುಗಿತು. ಇಂದು ಕಾಸನಕಂಡಿ, ಚಿಕ್ಕ ಬಗನಾಳ, ಕುಣಿಕೇರಿ, ಕುಣಿಕೇರಿ ಲಾಚನಕೇರಿ ಮುಂತಾದ ಗ್ರಾಮಗಳಲ್ಲಿ ಕಾರ್ಯಕ್ರಮ ಜರುಗಿತು. ಕರ್ನಾಟಕ ರೈತ ಸಂಘದ ರಾಜ್ಯಆಧ್ಯಕ್ಷಡಿ.ಹೆಚ್.ಪೂಜಾರ, ಎಐಟಿಯುಸಿ ಜಿಲ್ಲಾ ಅಧ್ಯಕ್ಷ ಬಸವರಾಜ್ ಶೀಲವಂತರ್, ಎಐಯುಟಿಯುಸಿ ಮುಖಂಡ ಎಶರಣು ಗಡ್ಡಿ, ಕೆ.ಆರ್.ಎಸ್ ನ ಜಿಲ್ಲಾ ಕಾರ್ಯದರ್ಶಿ ಬಸವರಾಜ ಪೂಜಾರ ನರೆಗಲ, ಕರ್ನಾಟಕ ಮಾದಿಗ ರಕ್ಷಣಾ ವೇದಿಕೆಯ ಜಿಲ್ಲಾ ಅಧ್ಯಕ್ಷ ಮುದಕಪ್ಪಹೊಸಮನಿನರೆಗಲ್, ರಾಘು ಚಾಕರಿ,ಸುಂಕೇಶ, ಕರ್ನಾಟಕ ವಿದ್ಯಾರ್ಥಿ ಸಂಘ (ಇತ) ದುರುಗೇಶ ಬರಗೂರ, ಯಮನೂರ,ಮಾರುತಿ,ವಿದ್ಯಾರ್ಥಿನಿ ಯಮುನಾ ಮುಂತಾದವರು ಭಾಗವಹಿಸಿದ್ದರು.

# ಬಲವಂತದ ಸಾಲ ವಸೂಲಾತಿ ಮಾಡಿದರೆ 5 ಲಕ್ಷ ರೂ. ದಂಡ,10 ವರ್ಷ ಕಾರಾಗೃಹ ಶಿಕ್ಷೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.19: ಮೈಕ್ರೋ ಫೈನಾನ್ಸ್‌ಸಿಬ್ಬಂದಿಗಳು ಸಾಲ ವಸೂಲಾತಿಗೆ ಬಡ ಜನರಿಗೆ ನೀಡುತ್ತಿರುವ ಕಿರುಕುಳವನ್ನು ತಪ್ಪಿಸಲೆಂದು ರಾಜ್ಯ ಸರ್ಕಾರ ಕರ್ನಾಟಕ ಕಿರು ಸಾಲ ಮತ್ತು ಸಣ್ಣ ಸಾಲ (ಬಲವಂತದ ಕ್ರಮಗಳ ಪ್ರತಿಬಂಧಕ) ಅಧ್ಯಾದ್ಯೇಶ-2025 ಕಳೆದ ಪೆಬ್ರವರಿ 12 ರಿಂದ ಜಾರಿಗೆ ಬಂದಿದ್ದು,ಇದನ್ನು ಉಲ್ಲಂಘಿಸಿ ಸಾರ್ವಜನಿಕರಿಗೆ ಕಿರುಕುಳ ನೀಡಿ ಸಾಲ ವಸೂಲಾತಿ ಮಾಡಿದಲ್ಲಿ 5 ಲಕ್ಷ ರೂ. ದಂಡ ಹಾಗೂ 10 ವರ್ಷ ಕಾರಾಗೃಹ ಶಿಕ್ಷೆಗೆ ಕಾರಣವಾಗಬೇಕಾಗುತ್ತದೆ ಎಂದು ಡಿ.ಸಿ. ಬಿ.ಫೌಜಿಯಾ ತರನ್ನುಮ್ ಅವರು ಮೈಕ್ರೋ ಫೈನಾನ್ಸ್ ಮುಖ್ಯಸ್ಥರಿಗೆ ಎಚ್ಚರಿಕೆ ನೀಡಿದರು.

ಮೈಕ್ರೋ ಫೈನಾನ್ಸ್ ಸಂಸ್ಥೆಗಳ ನಿಯಂತ್ರಣ ಕುರಿತಂತೆ ಹೊರಡಿಸಲಾಗಿರುವ ಸುಗ್ರೀವಾಜ್ಞೆಯ ಅನುಷ್ಠಾನ ಕುರಿತಂತೆ ಬುಧವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೈಕ್ರೋ ಪೈನಾನ್ಸ್ ಸಂಸ್ಥೆಗಳು, ಸಾಲ ನೀಡಿಕೆ ಏಜೆನ್ಸಿ ಹಾಗೂ ಲೇವಾದೇವಿ ಸಂಸ್ಥೆಗಳ ಪ್ರತಿನಿಧಿಗಳ ಸಭೆ ನಡೆಸಿದ ಅವರು,ಯಾವುದೇ ಕಾರಣಕ್ಕೂ ಅಧ್ಯಾದ್ಯೇಶ ಉಲ್ಲಂಘಿಸದೆ ಅದನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಬಲವಂತದ ಸಾಲ ವಸೂಲಾತಿ ಮಾಡಬಾರದು ಎಂದರು.



ಸಾರ್ವಜನಿಕರಿಗೆ ಕಿರುಕುಳ ತಪ್ಪಿಸಲು,ಲೇವಾದೇವಿದಾರರು ಕಾನೂನು ಬದ್ಧವಾಗಿ ವ್ಯವಹಾರ ನಡೆಸಲು ಈ ಸುಗ್ರಿವಾಜ್ಞೆ ಜಾರಿಗೆ ತಂದಿದ್ದು, ಈ ಬಗ್ಗೆ ಗ್ರಾಮ, ಹೋಬಳಿ, ತಾಲೂಕು ಮಟ್ಟದಲ್ಲಿ ವ್ಯಾಪಕವಾಗಿ ಅರಿವು ಮೂಡಿಸಬೇಕು. ವಿಸೇಷವಾಗಿ ಸಾಲವಸೂಲಿಗಾರರ ನಡವಳಿಕೆ ಮೇಲೆ ನಿಯಂತ್ರಣ ಸಾಧಿಸಬೇಕು ಎಂದ ಅವರ, ನಿಮ್ಮ ವ್ಯವಹಾರಗಳನ್ನು ಅಡ್ಡಿಪಡಿಸವುದು ನಮ್ಮ ಉದ್ದೇಶವಲ್ಲ, ಅದ ಕಾನುನು ಬದ್ಧವಾಗಿರಬೇಕು ಅಷ್ಟೆ ಎಂದರು.

ಮಾರ್ಚ್ 12ರ ವರೆಗೆ ನೋಂದಣಿಗೆ ಅವಕಾಶ: ಅಧ್ಯಾದ್ಯೇಶ ಜಾರಿಯಾದ ದಿನಾಂಕದಿಂದ 30 ದಿನದೊಳಗೆ ಮೈಕ್ರೋ ಪೈನಾನ್ಸ್ ಸಂಸ್ಥೆಗಳು, ಸಾಲ ನೀಡಿಕೆ ಏಜೆನ್ಸಿ ಹಾಗೂ ಲೇವಾದೇವಿ ಸಂಸ್ಥೆಗಳು ನೋಂದಣಿ ಮಾಡಬೇಕಿರುವುದರಿಂದ ಮಾರ್ಚ್ 12 ರೊಳಗಾಗಿ ಜಿಲ್ಲಾಧಿಕಾರಿಗಳ ಕಚೇರಿಗೆ ಸಾಲದ ಬಡ್ಡಿ ದರ, ವಸೂಲಾತಿ ವ್ಯವಸ್ಥೆ ಮತ್ತು ಸಾಲ ವಸೂಲಾತಿಗೆ ಅಧಿಕೃತಗೊಳಿಸಿದ ವ್ಯಕ್ತಿ ಸೇರಿದಂತೆ ಇನ್ನಿತರ ವಿವರ ನೀಡಿ ನೋಂದಣಿ ಮಾಡಿಸಿಕೊಳ್ಳಬೇಕೆಂದು ಸೂಚಿಸಿದ ಅವರು, ನೋಂದಣಿ ನಂತರ ಮಾಸಿಕ, ತ್ರೈಮಾಸಿಕ ವರದಿ ಸಹ ಸಲ್ಲಿಸಬೇಕಾಗುತ್ತದೆ ಎಂದರು.ತೊಂದರೆ ಕೊಟ್ಟ- ರೆ ಮುಲಾಜಿಲ್ಲದೆ ಕ್ರಮ: ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ ಮಾತನಾಡಿ,ನೂತನ ಅಧ್ಯಾದ್ಯೇಶ ಉಲ್ಲಂಘಿಸಿ ಸಾಲ ವಸೂಲಾತಿಗೆ ಹೋದ ವ್ಯಕ್ತಿ ಸೇರಿದಂತೆ ಸಂಸ್ಥೆಯ ಎಲ್ಲರ ಮೇಲೆ ಮುಲಾಜಿಲ್ಲದೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದ ಅವರು, ಸಾಲಗಾರರಿಗೆ ಬಡ್ಡಿ ದರ, ಈಗಾಗಲೆ ಪಾವತಿಯಾಗಿರುವುದು, ಬಾಕಿ ಇರುವ ಬಗ್ಗೆ ಕನ್ನಡ ಭಾಷೆಯಲ್ಲಿ ಮಾಹಿತಿ ಇರುವ ಲೋನ್ ಕಾರ್ಡ್ ವಿತರಿಸಬೇಕೆಂದು ಸೂಚಿಸಿದರು. ರಾತ್ರಿ ಸಮಯದಲ್ಲಿ ವಸೂಲಾತಿಗೆ ಹೋಗುವಂತಿಲ್ಲ: ಎಸ್.ಪಿ. ಅಡ್ಡೂರು ಶ್ರೀನಿವಾಸಲು ಮಾತನಾಡಿ, ಅಧ್ಯಾದ್ಯೇಶದ ಪ್ರಕಾರ ಸಾಲ ವಸೂಲಿ ಮಾಡುವರು ಯಾವುದೇ ಕಾರಣಕ್ಕೂ ರಾತ್ರಿ ಹೊತ್ತಿನಲ್ಲಿ ಸಾರ್ವಜನಿಕರ ಮನೆಗಳಿಗೆ ಹೋಗುವಂತಿಲ್ಲ. ದಿನದ ಅವಧಿಯಲ್ಲಿ ಹೋಗಿ ವಸೂಲು ಮಾಡಬಹುದು. ಇನ್ನು ವಸೂಲಿ ಮಾಡುವರು ಉತ್ತಮ ನಡವಳಿಕೆ ಹೊಂದಿರಬೇಕು, ಸಮಾಜ ವಿರೋಧಿ ಚಟುವಟಿಕೆಯಲ್ಲಿ ತೊಡಗುವವರನ್ನು ಯಾವುದೇ ಕಾರಣಕ್ಕೂ ವಸೂಲಾತಿಗೆ ನೇಮಿಸಕೊಳ್ಳಬಾರದೆಂದು ಹಣಕಾಸು ಸಂಸ್ಥೆಗಳ ಮುಖ್ಯಸ್ಥರಿಗೆ ಸೂಚಿಸಿದ ಅವರು, ವಸೂಲಿ ಮಡಲು ಹೋಗುವಾಗ ಸಿಬ್ಬಂದಿಗಳು ಬಾಡಿ ಕ್ಯಾಮೆರಾ ಅಳವಡಿಸಿಕೊಂಡು ಹೋದಲ್ಲಿ ಅವರ ನಡವಳಿಕೆ ಪತ್ತೆಹಚ್ಚಬಹುದಾಗಿದೆ ಎಂದು ಸಲಹೆ ನೀಡಿದರು.

ಸಹಕಾರ ಇಲಾಖೆಯ ಉಪನಿಬಂಧಕ ಈಶ್ವರ ಪಾಟೀಲ ಮತ್ತು ಜಿಲ್ಲಾ ಲೀಡ್ ಬ್ಯಾಂಕ್ ಮ್ಯಾನೇಜರ್ ಸಂತೋಷ ಪಾಟೀಲ ಅವರು ಕರ್ನಾಟಕ ಕಿರು ಸಾಲ ಮತ್ತು ಸಣ್ಣ ಸಾಲ (ಬಲವಂತದ ಕ್ರಮಗಳ ಪ್ರತಿಬಂಧಕ) ಅಧ್ಯಾದ್ಯೇಶ-2025 ಕುರಿತು ವಿವರ ನೀಡಿದ ಅವರು,ನೊಂದ ವ್ಯಕ್ತಿ ಹತ್ತಿರದ ಪೊಲೀಸ್ ಠಾಣೆಗೆ ದೂರು ನೀಡಲು ಅವಕಾಶವಿದೆ. ಯಾವುದೇ ಅಡಮಾನವಿಲ್ಲದ ಸಾಲ ನೀಡಬೇಕು ಎಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಸೇರಿದಂತೆ ಜಿಲ್ಲೆಯ ಮೈಕ್ರೋ ಫೈನಾನ್ಸ್ ಮುಖ್ಯಸ್ಥರು ಭಾಗವಹಿಸಿದ್ದರು.

# ಛತ್ರಪತಿ ಶಿವಾಜಿ ಮಹಾರಾಜರ ಇತಿಹಾಸ ಅರಿಯಿರಿ: ಸಾಗರ ಖಂಡ್ರೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಫೆ.19:ವಿದ್ಯಾರ್ಥಿಗಳು, ಯುಕವರು ಛತ್ರಪತಿ ಶಿವಾಜಿ ಮಹಾರಾಜರ ಇತಿಹಾಸ ಅರಿಯಬೇಕು. ಅಂದಾಗ ಮಾತ್ರ ಇವರೆಲ್ಲ ಉತ್ತಮ ಪ್ರಜೆಗಳಾಗಿ ಹೊರಹೊಮ್ಮಲು ಸಾಧ್ಯ ಎಂದು ಸಂಸದ ಸಾಗರ ಖಂಡ್ರೆ ಅಭಿಪ್ರಾಯಪಟ್ಟರು.




ಪಟ್ಟಣದ ಪುಭವನದಲ್ಲಿ ತಾಲೂಕು ಆಡಳಿತದ ವತಿಯಿಂದ ಬುಧವಾರ ನಡೆದ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಮಹೋತ್ಸವ ಉಧ್ಘಾಟಿಸಿ ಅವರು ಮಾತನಾಡಿದರು. ಯುವಕರು ದೇಶಾಭಿಮಾನಿಗಳಾಗಿ ಬದುಕಬೇಕು. ದೇಶದ ಪರವಾಗಿ ಜೀವ ತ್ಯಾಗಮಾಡಲೂ ತಯಾರಿರಬೇಕು. ತಾಯಿಯ ಮಾರ್ಗದರ್ಶನದಿಂದಲೇ ಶಿವಾಜಿ ಮಹಾರಾಜರು ಉತ್ತಮ ಮಟ್ಟಕ್ಕೇರಲು ಸಾಧ್ಯವಾಯಿತು. ಎಲ್ಲಾ ತಾಯಂದರು ತಮ್ಮ ತಮ್ಮ ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡಬೇಕು. ಛತ್ರಪತಿ ಶಿವಾಜಿ ಮಹಾರಾಜರ ಇತಿಹಾಸ ಅರಿತು, ಅವರಂತ ತತ್ವಾದರ್ಶಗಳಂತೆ ಬಾಳಿ ದೇಶಪ್ರೇಮ ಮೆರೆಯಬೇಕು ಎಂದು ಹೇಳಿದರು.

ತಹಸೀಲ್ದಾರ ಮಲ್ಲಿಕಾರ್ಜುನ ವಡ್ಡನಕೇರಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಸೂರ್ಯಕಾಂತ ಬಿರಾದಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಾಹಿತಿ ನಾಗೇಶ್ವರಿ ಜಗತಾಪ ವಿಶೇಷ ಉಪನ್ಯಾಸ ಮಂಡಿಸಿದರು.

ಕಾರ್ಯಕ್ರಮದಲ್ಲಿ ಪುರಸಭೆ ಅಧ್ಯಕ್ಷೆ ಶಶಿಕಲಾ ಅಶೋಕ ಸಿಂದನಕೇರೆ, ಉಪಾಧ್ಯಕ್ಷ ವಿಜಯಕುಮಾರ ರಾಜಭವನ, ಡಿವಾಯ್ಎಸ್ಪಿ ಶಿವಾನಂದ ಪವಾಡಶೆಟ್ಟಿ, ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ್, ಪುರಸಭೆ ಮುಖ್ಯಾಧಿಕಾರಿ ಸಂಗಮೇಶ ಕಾರಬಾರಿ, ಇಸಿಓ ಮಲ್ಲಿಕಾರ್ಜುನ ಕನ್ನಾಳೆ, ಸಹದೇವ.ಜಿ, ತೋಟಗಾರಿಕೆ ಇಲಾಖೆ ಅಧಿಕಾರಿ ಮಾರುತಿ ಜಬನೂರ, ಕೃಷಿ ಅಧಿಕಾರಿ ಪಿ.ಮಲ್ಲಿಕಾರ್ಜುನ, ಸಿಪಿಐ ಅಮರೇಶ.ಬಿ ಉಪಸ್ಥಿತರಿದ್ದರು. ಇದೇವೇಳೇ ಶಿವಾಜಿ ಪ್ರೌಢಶಾಲೆ, ಸತ್ಯನಿಕೇತನ ಪ್ರೌಢಶಾಲೆ, ಸರ್ಕಾರಿ ಪ್ರೌಢಶಾಲೆಭಾಲ್ಕಿ, ಸೇರಿದಂತೆ ವಿವಿಧ ಶಾಲಾ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಟ್ಟರು.

ಮಲ್ಲಿಕಾರ್ಜುನ ಸ್ವಾಗತಿಸಿದರು. ದೀಪಕ ಥಮಕೆ ನಿರೂಪಿಸಿದರು. ಚನ್ನಬಸಪ್ಪ ಹಳ್ಳದ ವಂದಿಸಿದರು.

# ಬಿಜೆಪಿ ಕಾರ್ಯಾಲಯದಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 19 : ಇಂದು ಮುಂಜಾನೆ ಬೀದರ ಜಿಲ್ಲಾ ಭಾರತೀಯ ಜನತಾ ಪಾರ್ಟಿಯ ಕಾರ್ಯಾಲಯದಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಆಚರಿಸಲಾಯಿತು. ಜಿಲ್ಲಾಧ್ಯಕ್ಷರಾದ ಸೋಮನಾಥ ಪಾಟೀಲ ಅವರು ಛತ್ರಪತಿ ಶಿವಾಜಿ ಮಹಾರಾಜರವರ ಭಾವ ಚಿತ್ರಕ್ಕೆ ಪುಷ್ಪಮಾಲೆ ಹಾಕಿ ಪೂಜೆ ನೇರವೇರಿಸಿದರು.. ಈ ಸಂದರ್ಭದಲ್ಲಿ ರಾಜ್ಯ ಪ್ರಶಿಕ್ಷಣ ಪ್ರಕೋಷ್ಠದ ಸಂಚಾಲಕರಾದ ರಾಜಶೇಖರ ನಾಗಮೂರ್ತಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಿರಪ್ಪ ಔರಾದೆ, ಮಾಧವರಾವ ಹುಷಾರೆ, ಬೀದರ ಕ್ಷೇತ್ರದ ನಾಯಕರಾದ ಈಶ್ವರ ಸಿಂಗ್ ಠಾಕೂರ, ಗುರುನಾಥ ಜಾಂತಿಕರ್ , ರಾಜಕುಮಾರ ಪಾಟೀಲ ನೇಮತಬಾದ , ಸುಭಾಷ ಮಡಿವಾಳ, ಮಾಜಿ ಜಿಲ್ಲಾ ಪಂಚಾಯತ ಅಧ್ಯಕ್ಷರಾದ ಬಾಬುರಾವ ಕಾರುಬಾರಿ, ಬೀದರ ನಗರ ಘಟಕದ ಅಧ್ಯಕ್ಷರಾದ ಶಶಿಹೊಸಳ್ಳಿ, ಗ್ರಾಮಾಂತರ ಘಟಕದ ಅಧ್ಯಕ್ಷರಾದ ದೀಪಕ ಗಾದಗೆ, ರಾಜೇಂದ್ರ ಪೂಜಾರಿ, ಸುರಜ್ ಸಿಂಗ್, ಗಣೇಶ ಭೋಸ್ಲೆ, ಮಹಿಳಾ ಮೋರ್ಚಾದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ವಿಜಯಲಕ್ಷ್ಮಿ, ಜಿಲ್ಲಾ ಕಾರ್ಯದರ್ಶಿ ಸಂತೋಷಿ, ಮಹಾದೇವಿ , ದಯಾನಂದ ಮೇತ್ರೆ, ಆದಿನಾಥ್ ಹಾಗೂ ಬೀದರ ಜಿಲ್ಲಾ ಬಿಜೆಪಿ ಮಾಧ್ಯಮ ಸಂಚಾಲಕರಾದ ಶ್ರೀನಿವಾಸ ಚೌಧರಿಯವರು ಹಾಗೂ ಇನ್ನಿತರ ನಾಯಕರು ಉಪಸ್ಥಿತರಿದ್ದರು.

# ಅನುಭವ ಮಂಟಪ ಸಂಸತ್ತು ಫೆ.21ಕ್ಕೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 19 : 'ಬಸವ ಮಹಾಮನೆ ಟ್ರಸ್ಟ್‌ನಿಂದ ನಗರದಲ್ಲಿ ಫೆಬ್ರುವರಿ 21, 22 ಮತ್ತು 23ರಂದು 7ನೇ ಅನುಭವ ಮಂಟಪ ಸಂಸತ್ತು ಕಾರ್ಯಕ್ರಮ ನಡೆಯಲಿದೆ. ಕೊನೆಯ ದಿನ ಸಮಾನತಾ ಸಮಾವೇಶ ಹಮ್ಮಿಕೊಳ್ಳಲಾಗಿದೆ' ಎಂದು ಬೆಲ್ದಾಳ ಸಿದ್ಧರಾಮ ಶರಣರು ತಿಳಿಸಿದರು.

ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು,'ಸಂಸತ್ತಿನಲ್ಲಿ ಶರಣ ಸಂಸ್ಕೃತಿ, ಬಸವ ಸಿದ್ಧಾಂತ ತಿಳಿಸಲಾಗುತ್ತದೆ.

ಇದಕ್ಕಾಗಿ ನಾಡಿನ ವಿವಿಧೆಡೆಯವರು ಹೆಸರು ನೋಂದಾಯಿಸಿದ್ದು, ಮೂರು ದಿನ ಹಾಜರಿರುತ್ತಾರೆ' ಎಂದರು.

'ಫೆಬ್ರುವರಿ 23ರಂದು ಬೆಳಿಗ್ಗೆ ಸಮಾನತಾ ಸಮಾವೇಶ ನಡೆಯುವುದು. ಅನುಭವ ಮಂಟಪ ಅಧ್ಯಕ್ಷ ಬಸವಲಿಂಗ ಪಟ್ಟದ್ದೇವರು, ಮಲಗಿ ಜಗದೀಶ್ವರಿ ಮಾತಾ, ಮನಗೂಳಿ ವಿರತೀಶಾನಂದ ಸ್ವಾಮೀಜಿ, ಭಂತೆ ಧಮ್ಮಾನಂದ ಅಣದೂರ, ಮೌಲಾನಾ ಮಹ್ಮದ್ ಸಿದ್ದಿಕಿ ನಾದ್ವಿ, ಧರ್ಮಾಧ್ಯಕ್ಷ ರಾಬರ್ಟ್ ಮೈಕೆಲ್ ಮಿರಾಂಡಾ, ಗ್ಯಾನಿ ಬಲಬೀರಸಿಂಗ್ ಸಾನ್ನಿಧ್ಯ ವಹಿಸುವರು' ಎಂದು ಹೇಳಿದರು.

'ಸಮಾಜ ಕಲ್ಯಾಣ ಸಚಿವ ಎಚ್.ಸಿ.ಮಹಾದೇವಪ್ಪ, ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ, ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ, ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ, ಪೌರಾಡಳಿತ ಸಚಿವ ರಹೀಂ ಖಾನ್, ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಅಧ್ಯಕ್ಷ ಅಜಯಸಿಂಗ್, ಮಾಜಿ ಸಂಸದ ಭಗವಂತ ಖೂಬಾ ಅತಿಥಿಗಳಾಗಿ ಪಾಲ್ಗೊಳ್ಳುವರು. ಶಾಸಕ ಶರಣು ಸಲಗರ ಅಧ್ಯಕ್ಷತೆ ವಹಿಸುವರು' ಎಂದರು.

'ಪ್ರಸಕ್ತ ಸಾಲಿನ 'ಸೌಹಾರ್ದ ರತ್ನ' ಪ್ರಶಸ್ತಿಯನ್ನು ಬೀದರ್‌ನ ಶಾಹೀನ್ ಶಿಕ್ಷಣ ಸಂಸ್ಥೆಗಳ ಸಮೂಹದ ಸಂಸ್ಥಾಪಕ ಅಧ್ಯಕ್ಷ ಅಬ್ದುಲ್ ಖದೀರ್ ಅವರಿಗೆ ನೀಡಲಾಗುತ್ತಿದೆ' ಎಂದು ತಿಳಿಸಿದರು.

ಕಾರ್ಯಕ್ರಮ ಸಮಿತಿ ಪ್ರಧಾನ ಕಾರ್ಯದರ್ಶಿ ಶ್ರೀಕಾಂತ ಸ್ವಾಮಿ, ಲಕ್ಷ್ಮಣ ದಸ್ತಿ, ಮನೋಹರ ಮೈಸೆ, ಪಿಂಟು ಕಾಂಬಳೆ ಮಾತನಾಡಿದರು. ಶಾಮರಾವ್ ಪ್ಯಾಟಿ, ಸಂಜೀವ ಗಾಯಕವಾಡ, ಎಂ.ಬಿ.ನಿಂಗಪ್ಪ, ದಿಗಂಬರ ಜಲ್ದೆ, ಸಿಕಂದರ ಶಿಂಧೆ ಉಪಸ್ಥಿತರಿದ್ದರು.

# 23 ಕ್ಕೆ ಯಮನೂರಪ್ಪ ಜಾತ್ರೆ, ಸಾಮೂಹಿಕ ವಿವಾಹ

ಮಲ್ಲಮ್ಮ ನುಡಿ ವಾರ್ತೆ

ಶಹಾಪೂರ: ಮಾರ್ಚ 23 ರಂದುಸುಕ್ಷೇತ್ರಮಹಲರೋಜಾದ ರಾಜಾಭಾಗ್ ಸವಾರ ಮಠದಲ್ಲಿ ಯಮನೂರಪ್ಪಜಾತ್ರಾಮಹೋತ್ಸವ ಹಾಗೂ ಸಾಮೂಹಿಕ ವಿವಾಹ ಹಮ್ಮಿಕೊಳ್ಳಲಾಗಿದೆ ಎಂದು ಶ್ರೀಮಠದಪರಶುರಾಮ ಮುತ್ಯಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಶ್ರೀ ಮಲ್ಲಿಕಾರ್ಜುನ ಮುತ್ಯಾ ಅಪ್ಪಾಜಿ ಅವರ ನೇತೃತ್ವದಲ್ಲಿ ನಡೆಯುವ ಜಾತ್ರಾ ಮಹೋತ್ಸವದಲ್ಲಿ ಲಿಂಗೈಕ್ಯಶ್ರೀ ಹಣಮಂತರಾಯ ಮುತ್ಯಾ ಅವರ ಆಶಯದಂತೆ ಅನಿಯಮಿತ ಸಾಮೂಹಿಕ ವಿವಾಹ ಹಮ್ಮಿಕೊಳ್ಳಲಾಗಿದೆ.

ಹಣಮಂತರಾಯ ಮುತ್ಯಾ ಅವರು ಇದ್ದಾಗಲೂ ಸಹ ಬಡ ಮತ್ತು ಮಧ್ಯಮ ವರ್ಗದವರ ಮೇಲಿನ ಆರ್ಥಿಕ ಹೊರೆ ತಗ್ಗಿಸಲು ಪ್ರತಿವರ್ಷ ಸಾಮೂಹಿಕ ವಿವಾಹ ಜರುಗುತ್ತಿದ್ದವು. ಈಗಲೂ ಸಹ ಪರಶುರಾಮ ಮುತ್ಯಾ, ಮಲ್ಲಿಕಾರ್ಜುನ ಮುತ್ಯಾ, ಬಸವರಾಜ ಮುತ್ಯಾ ಅವರು ಆ ಕಾರ್ಯವನ್ನು ಮುಂದುವರೆಸಿಕೊಂಡು ಬಂದಿದ್ದು, ಅಂದು ಮಧ್ಯಾಹ್ನ 12.15 ಕ್ಕೆ ಸಾಮೂಹಿಕ ವಿವಾಹ ಜರುಗಲಿದೆ. ಮಧ್ಯಾಹ್ನ 3 ಗಂಟೆಗೆ ಧಾರ್ಮಿಕ ಕಾರ್ಯಕ್ರಮ ನಡೆಯಲಿದೆ ಹಾಗೂ ಅನ್ನದಾಸೋಹ ನೆರವೇರಿಸಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

ಈ ವೇಳೆ ತೆಲಂಗಾಣ, ಮಹಾರಾಷ್ಟ ಹಾಗೂ ಕರ್ನಾಟಕದ ನಾನಾ ಭಾಗಗಳಿಂದ ಸಚಿವರು, ಶಾಸಕರು, ಮಠಾಧೀಶರು ಪಾಲ್ಗೊಳ್ಳಲಿದ್ದು, ಸಾಮೂಹಿಕ ವಿವಾಹದಲ್ಲಿ ಪಾಲ್ಗೊಳ್ಳುವವರು ಮಾರ್ಚ 13 ರ ಒಳಗಾಗಿ ನೊಂದಣಿ ಮಾಡಿಸಿಕೊಳ್ಳುವಂತೆ ಅವರು ಮನವಿ ಮಾಡಿದ್ದಾರೆ.

# ಸಾಮಾಜಿಕ ನ್ಯಾಯವಿಲ್ಲದ ಬಜೆಟ್ ಪೂರ್ವ ಸಭೆಗಳು- ಚಂದ್ರು ಅಸಮಾಧಾನ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು.ಫೆ19:ಸಾಮಾಜಿಕ ನ್ಯಾಯವನ್ನು ಎತ್ತಿ ಹಿಡಿಯಲು ಮುಖ್ಯಮಂತ್ರಿಗಳು ನಡೆಸುತ್ತಿರುವ ಬಜೆಟ್ ಪೂರ್ವ ಸಭೆಗಳಿಗೆ ಅಲ್ಪಸಂಖ್ಯಾತರ ಎಲ್ಲಾ ಮುಖಂಡರುಗಳನ್ನು ಕ-ರೆದು ಇದುವರೆಗೂ ಸಭೆ ನಡೆಸದಿರುವುದು ಸಾಮಾಜಿಕ ನ್ಯಾಯದ ಪರಿಕಲ್ಪನೆಯ ಸಾಕಾರಕ್ಕೆ ಧಕ್ಕೆ ತರುವಂತಿದೆ ಎಂದು ಆಮ್ ಆದ್ಮಿ ಪಕ್ಷದ ರಾಜ್ಯಾಧ್ಯಕ್ಷ ಡಾ.ಮುಖ್ಯಮಂತ್ರಿ ಚಂದ್ರು ಮುಖ್ಯಮಂತ್ರಿಗಳಿಗೆ ಬರೆದಿರುವ ಪತ್ರದಲ್ಲಿ ತಮ್ಮ ಅಸಮಾಧಾನವನ್ನು ವ್ಯಕ್ತಪಡಿಸಿದ್ದಾರೆ.

ಈಗಾಗಲೇ ದಲಿತ ವರ್ಗ ಹಾಗೂ ಹಿಂದುಳಿದ ವರ್ಗಗಳ ಅನೇಕ ಸಂಘ ಸಂಸ್ಥೆಗಳು ಮತ್ತು ನಾಯಕರುಗಳ ಸಭೆಗಳನ್ನು ನಡೆಸಿ ಅವರುಗಳ ಅನೇಕ



ಬೇಡಿಕೆಗಳನ್ನು ಆಲಿಸಿ ಬಜೆಟ್ ಪೂರ್ವ ತಯಾರಿಯನ್ನು ನಡೆಸಿದ್ದಾರೆ. ಆದರೆ ಇದೇ ರೀತಿಯಲ್ಲಿ ರಾಜ್ಯದ ಅಲ್ಪಸಂಖ್ಯಾತರುಗಳ ಯಾವುದೇ ಸಭೆಯನ್ನು ಇದುವರೆಗೂ ನಡೆಸದೆ ಇರುವುದು ಸಾಮಾಜಿಕ ನ್ಯಾಯದ ಪರಿಕಲ್ಪನೆಗೆ ಧಕ್ಕೆ ತರುವಂತಿದೆ. ಕೇವಲ ತಮ್ಮ ಮಂತ್ರಿಮಂಡಲದ ಪ್ರಮುಖ ಸಚಿವರೊಬ್ಬರೇ ಎಲ್ಲಾ ಅಲ್ಪಸಂಖ್ಯಾತರ ಧ್ವನಿ ಎಂಬಂತೆ ಭಾಸವಾಗುತ್ತಿರುವುದು ಕಂಡುಬರುತ್ತಿದೆ ಎಂದು ತಮ್ಮ ಪತ್ರದಲ್ಲಿ ಅವಲತ್ತುಕೊಂಡಿದ್ದಾರೆ.

ರಾಜ್ಯದ ಅಲ್ಪಸಂಖ್ಯಾತರುಗಳಲ್ಲಿ ಮುಸ್ಲಿಂ ಜನಾಂಗದೊಂದಿಗೆ ಕ್ರಿಶ್ಚಿಯನ್ ,ಜೈನ್, ಬೌದ್ಧ ,ಪಾರ್ಸಿ,ಸಿಖ್ ಸಮುದಾಯಗಳು ಸಹ ಸೇರಿರುವುದು ಇತ್ತೀಚಿನ ದಿನಗಳಲ್ಲಿ ಆಳುವವರು ಮರೆಯುತ್ತಿರುವಂತಿದೆ. ಆದುದರಿಂದ ಈ ಕೂಡಲೇ ಅಲ್ಪಸಂಖ್ಯಾತರ ಎಲ್ಲ ವರ್ಗಗಳ ಮುಖಂಡರುಗಳನ್ನು ಸಂಘ ಸಂಸ್ಥೆಗಳನ್ನು ತಮ್ಮ ಬಜೆಟ್ ಪೂರ್ವ ಸಭೆಗೆ ಕರೆದು ಅವರ ಅನೇಕ ವರ್ಷಗಳ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಹಾಗೂ ರಾಜಕೀಯ ಬೇಡಿಕೆಗಳನ್ನು ಈಡೇರಿಸಲು ಮುಂದಾಗಬೇಕು ಹಾಗೂ ನೈಜ ಸಾಮಾಜಿಕ ಪರಿಕಲ್ಪನೆಯನ್ನು ಎತ್ತಿ ಹಿಡಿಯಬೇಕೆಂದು ಮುಖ್ಯಮಂತ್ರಿ ಚಂದ್ರು ತಮ್ಮ ಪತ್ರದಲ್ಲಿ ಒತ್ತಾಯಿಸಿದ್ದಾರೆ.

# ಮನೆ ಬೀಗ ಮುರಿದು 2.80 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು

ಮಲ್ಲಮ್ಮ ನುಡಿ ವಾರ್ತೆ



ಕಲಬುರಗಿ,ಫೆ.18-ಮನೆ ಬೀಗ ಮುರಿದು 2.80 ಲಕ್ಷ ರೂ. ಮೌಲ್ಯದ ನಗನಾಣ್ಯ ಕಳವು ಮಾಡಿರುವ ಘಟನೆ ಉದನೂರ ರಸ್ತೆಯ ಚಂದ್ರಕಾಂತ ಲೇಔಟ್ ನಲ್ಲಿ ನಡೆದಿದೆ.

ವಿಠ್ಠಲ ಶಂಕರರಾವ ಮುಚ್ಚಟ್ಟಿ ಎಂಬುವವರ ಮನೆ ಬೀಗ ಮುರಿದು ಕಳ್ಳರು 1.20 ಲಕ್ಷ ರೂ.ಮೌಲ್ಯದ 20 ಗ್ರಾಂ.ಬಂಗಾರದ ಎರಡು ಸುತ್ತುಂಗುರ, 60 ಸಾವಿರ ರೂ. ಮೌಲ್ಯದ 10 ಗ್ರಾಂ.ಬಂಗಾರದ ಚೈನ್, 1 ಲಕ್ಷ ರೂ.ನಗದು ಹಣ ಸೇರಿ 2.80 ಲಕ್ಷ ರೂ. ಮೌಲ್ಯದ ನಗನಾಣ್ಯವನ್ನು ಕಳವು ಮಾಡಿದ್ದಾರೆ.

ಮೂರ್ನಾಲ್ಕು ದಿನಗಳ ಹಿಂದೆ ಅತ್ತೆ-ಮಾವ ಕುಂಭಮೇಳಕ್ಕೆ ಹೋದ ಪ್ರಯುಕ್ತ ಇವರು ಮನೆಗೆ ಬೀಗ ಹಾಕಿಕೊಂಡು ಪತ್ನಿ ಮತ್ತು ಮಕ್ಕಳೊಂದಿಗೆ ಅಶೋಕನಗರದಲ್ಲಿರುವ ಮಾವನ ಮನೆಗೆ ಹೋಗಿ ವಾಸವಾಗಿದ್ದರು. ಈ ವೇಳೆ ಕಳ್ಳರು ಮನೆ ಬೀಗ ಮುರಿದು ನಗನಾಣ್ಯ ದೋಚಿಕೊಂಡು ಹೋಗಿದ್ದಾರೆ ಎಂದು ತಿಳಿದುಬಂದಿದೆ.

ಈ ಸಂಬಂಧ ಅಶೋಕನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.



ಶಹಾಪುರ ತಾಲುಕಾ ಆಡಳಿತ ತಹಿಸಲ್ದಾರ ಕಚೇರಿಯಲ್ಲಿ ಚತ್ರಪತಿ ಶಿವಾಜಿ ಮಾಹಾರಾಜ ಜಯಂತಿಯನ್ನು ಆಚರಣೆ ಮಾಡಲಾಯಿತು, ಉಪ ತಹಿಸಲ್ದಾರ ಸೇತುಮಾದರಾವ್ ಕುಲಕರ್ಣಿ, ಯವರು ಚತ್ರಪತಿ ಶಿವಾಜಿ ಮಾಹಾರಾಜರ ಭಾವ ಚಿತ್ರಕ್ಕೆ ಮಾಲಾರ್ಪಣೆ ಮಾಡಿ ಪೂಜೆ ಸಲ್ಲಿಸಿದರು. ಈ ಸಮಯದಲ್ಲಿ ಉಪ ತಹಿಸಲ್ದಾರ ಚಂದ್ರಕಾಂತ ಕಚೇರಿ ಸಿಬ್ಬಂದಿಯವರು ಮುಖಂಡರು ಹಾಜರಿದ್ದರು, (ಮಲ್ಲಮ್ಮ ನುಡಿ ಚಿತ್ರ)

## ಪತ್ತಿಗೂಡೂರ ವಿ.ಎಸ್,ಎಸ್,ಎನ್, ಸೂಸೈಟಿಗೆ ಚುನಾವಣೆ ನೂತನ ನಿರ್ದೇಶಕರ ಅವಿರೋಧ ಆಯ್ಕೆ




ಮಲ್ಲಮ್ಮ ನುಡಿ ವಾರ್ತೆ

ಶಹಾಪುರ,ತಾಲುಕಿನ ಹತ್ತಿಗೂಡೂರ ವಿ,ಎಸ್,ಎಸ್,ಎನ್, ಚುನಾವಣೆ ನಡೆಯಿತು, ಈ ಸಮಯದಲ್ಲಿ ನೂತನ ಅಧ್ಯಕ್ಷ ಉಪಾದ್ಯಕ್ಷ,ಕಾರ್ಯದರ್ಶಿಗಳನ್ನು ಹಾಗೂ ನಿರ್ದೇಶಕರನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು,

ಜಿ,ಪಂ, ಮಾಜಿ ಸದಸ್ಯರಾದ ಸಿದ್ದಲಿಂಗರಡ್ಡಿ ಸಾಹುರವರು ಅದ್ಯಕ್ಷರಾಗಿ ಮತ್ತು ಶಂಕರಗೌಡ ಪೋಲಿಸ್ ಪಾಟೀಲ ಉಪಾದ್ಯಕ್ಷರಾಗಿ ಹಾಗೂ ನೂತನ ಕಾರ್ಯದರ್ಶಿಗಳಾಗಿ ಕಿರಣಕುಮಾರವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ,ನಿರ್ದೇಶಕರಾಗಿ, ನಾಗಲಿಂಗಪ್ಪ ಟಣಿಕೆದಾರ, ಶರಣಪ್ಪ ಟಣಿಕೆದಾರ, ಕೋನಪ್ಪ ಕನಕಗಿರಿ, ಲಚ್ಚಪ್ಪ ನಾಟೇಕಾರ,ಗುರಪ್ಪಸುರುಪುರ, ಚಂದ್ರಶೇಖರ ನಾಟೇಕಾರ, ದೇವಿಂದ್ರನಾಟೇಕಾರ ರವರು ನೇಮಕಗೊಂಡಿದ್ದಾರೆ, ಈ ಸಂಧರ್ಭದಲ್ಲಿ ಗ್ರಾಮದ ರೈತರು ಹಿರಿರಯರು ಪಾಲ್ಗೊಂಡಿದ್ದರು,

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9449732000

# ಗ್ರಾ,ಪಂ, ಮುಂದೆ ಕುಡಿಯುವ ನೀರಿಗಾಗಿ ಖಾಲಿ ಕೊಡಗಳ ಧರಣಿ!



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ,ಜೆಜೆಎಮ್, ಇದ್ದರೂ ನೀರು ನಳಗಳಿಗೆ ಬರುತ್ತಿಲ್ಲ, ಕೊಳವೆ ಬಾವಿಗಳು ರೀಪೇರಿಯಾಗಿಲ್ಲ, ಪ್ರತಿ ದಿನ ಗ್ರಾ,ಪಂ ಕೇಂದ್ರ ಸ್ಥಾನದಲ್ಲಿ ಇರುವ ಕೆಲವು ಕೇರಿಗಳಲ್ಲಿ ಕುಡಿಯುವ ನೀರಿಗೆ ಬರ ಹಿಡಿದಿದೆ, ಗ್ರಾ,ಪಂ, ಆಡಳಿತ ನಿರ್ಲಕ್ಷ ವಹಿಸಿದ್ದಾರೆ ಎಂದು ಆರೋಪಿಸಿ,ಗ್ರಾಮದ ಮಹಿಳೆಯರು ಖಾಲಿ ಕೊಡಗಳೊಂದಿಗೆ ಗ್ರಾ,ಪಂ, ಕಚೇರಿ ಮುಂದೆ ಧರಣಿ ಸತ್ಯಾಗ್ರಹ ನಡೆಸಿದರು. ಕುಡಿಯುವ ನೀರಿಗೆ ನಿತ್ಯ ಮನೆಗಳಲ್ಲಿ ನರಕಯಾತನೆಗಳೇ ನಡೆಯುತ್ತಿವೆ, ಕೊಡಗಳನ್ನು ಹೊತ್ತು ಮಹಿಳೆಯರು ದೂರದಲ್ಲಿರುವ, ಕೊಳವೆಬಾವಿ ನೀರನ್ನು ಹೊತ್ತು ತರುತ್ತಿದ್ದಾರೆ, ಎಂದು ಪ್ರತಿಭಟನಾ ನಿರತ ಮಹಿಳೆಯರು ಆಕ್ರೋಶ ವ್ಯಕ್ತಪಡಿಸಿದರು. ಮುಂದೆ ಬೇಸಿಗೆ ಸಮಯವಾಗಿದ್ದರಿಂದ ಕುಡಿಯುವ ನೀರಿಗೆ ಆಹಾಕಾರವಾಗದಂತೆ ಕ್ರಮಕ್ಕೆ ಮುಂದಾಗಬೇಕು, ಇಲ್ಲವಾದಲ್ಲಿ ಪಂಚಾಯತ ಕಚೇರಿಗೆ ಮುತ್ತಿಗೆ ಬೀಗ ಹಾಕಲಾಗುತ್ತದೆ ಎಂದು ಅವರು ಎಚ್ಚರಿಕೆ ನೀಡಿದರು, ಈ ಪ್ರತಿಭಟನೆಯ ಸ್ಥಳದಲ್ಲಿ ಅಭಿವೃದ್ಧಿ ಅಧಿಕಾರಿಗಳು ದಲಿತಪರ ಸಂಘಟನೆಗಳ ಮುಖಂಡರಾದ ಶರಣರಡ್ಡಿ ಹತ್ತಿಗೂಡೂರ, ಮಮಜುನಾಥ ನಾಟೇಕಾರ, ನಾಗಪ್ಪ ಘಂಟಿ, ಅಂಬ್ರೇಶ ಟಣಿಕೆದಾರ, ಶೇಖಪ್ಪ ನಾಟೇಕಾರ, ಹೊನ್ನರಾಜ, ತಿಪ್ಪಣ್ಣ ಎಚ್ ಘಂಟಿ, ರೇಣುಕಾ ನಾಟೇಕಾರ, ಮಲ್ಲಮ್ಮ, ದ್ಯಾವಮ್ಮ, ಭೀಮಬಾಯಿ, ಸೇರಿದಂತೆ ಅನೇಕ ಮಹಿಳೆಯರು, ಮತ್ತು ಮುಖಂಡರು ಭಾಗವಹಿಸಿದ್ದರು,

# ಅಸ್ಪೃಶ್ಯತೆ ಆಚರಣೆ ಕುರಿತು ಸಾಕ್ಷಿ ನೀಡಲು ಮನವಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಫೆ 19 ಇಲ್ಲಿನ ಮಾರ್ಕೇಟ್‌ಯಾರ್ಡ್ ಪೊಲೀಸ್ ಠಾಣೆಯ ಗುನ್ನೆ ನಂ:39/2023ರ ಪ್ರಕರಣದಲ್ಲಿ ರಾಯಚೂರಿನ ರಿಮ್ಸ್ ಹಾಗೂ ಇನ್ನಿತರೆ ಸಂಸ್ಥೆಗಳಲ್ಲಿ ಅಸ್ಪೃಶ್ಯತೆ ಆಚರಣೆ ನಡೆದಿರುವುದರಿಂದ ಕಲಂ 7(1)ಎ ಪಿ.ಸಿ.ಆರ್ ಕಾಯ್ದೆ ಪ್ರಕಾರ ರಾಯಚೂರಿನ ಪೊಲೀಸ್ ಉಪಾಧೀಕ್ಷಕರು ಜನವರಿ 02ರಿಂದ ತನಿಖೆ ಪ್ರಾರಂಭಿಸಲಾಗಿದ್ದು, ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಬಾದಿತರ ಪರವಾಗಿ ಸಾರ್ವಜನಿಕರು ಪ್ರತ್ಯಕ್ಷ ಅಥವಾ ಪರೋಕ್ಷ ಸಾಕ್ಷಿಯಾಗಿರುವವರು ಅಸ್ಪೃಶ್ಯತೆ ಆಚರಣೆ ಆಗಿರುವ ಬಗ್ಗೆ ತಮ್ಮಲ್ಲಿರುವ ಸಾಕ್ಷಿಯನ್ನು ತನಿಖಾಧಿಕಾರಿಗಳಾದ ಪೊಲೀಸ್ ಉಪಾಧೀಕ್ಷಕರಿಗೆ ನೀಡುವಂತೆ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾಹಿತಿ ಆಯೋಗದ ಆಯುಕ್ತರಿಗೆ ಕೆಡಬ್ಲ್ಯೂಜೆ ಅಭಿನಂದನೆ
# ಮಾಹಿತಿ ಹಕ್ಕು ಕಾಯ್ದೆಯ ಪಾವಿತ್ರ್ಯ ಕಾಪಾಡಲು ಕೆ.ವಿ.ಪ್ರಭಾಕರ್ ಕರೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರ:ಮಾಹಿತಿ ಹಕ್ಕು ಕಾಯ್ದೆ ಮಹತ್ವವಾದದ್ದು. ಅದನ್ನು ದುರ್ಬಲಗೊಳಿಸುವ ಪ್ರಯತ್ನವನ್ನು ಸಂಘಟಿತವಾಗಿ ತಪ್ಪಿಸಬೇಕೆಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ. ಪ್ರಭಾಕರ್ ಅವರು ಸಲಹೆ ನೀಡಿದರು. ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲೂಜೆ) ಆಯೋಜಿಸಿದ್ದ ಮಾಹಿತಿ ಆಯುಕ್ತರಾಗಿ ನೇಮಕಗೊಂಡ ಪತ್ರಕರ್ತರು ಮತ್ತು ಚಲನಚಿತ್ರ ಅಕಾಡೆಮಿ ಸದಸ್ಯರಾಗಿ ಆಯ್ಕೆಯಾದ ಪತ್ರಕರ್ತರನ್ನು ಅಭಿನಂದಿಸಿ, ಅವರು ಮಾತನಾಡಿದರು.

ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಅತಿ ಹೆಚ್ಚು ಮಂದಿ ಪತ್ರಕರ್ತರು ಮಾಹಿತಿ ಆಯೋಗದ ಆಯುಕ್ತರುಗಳಾಗಿದ್ದಾರೆ ಮತ್ತು ಚಲನಚಿತ್ರ ಅಕಾಡೆಮಿ ಸದಸ್ಯರಾಗಿದ್ದಾರೆ. ಹಾಗಾಗಿ ನಿಮ್ಮೆಲ್ಲರ ಮೇಲೆ ಸರ್ಕಾರದ ಮತ್ತು ಸಾಂವಿಧಾನಿಕ ಹುದ್ದೆಯ ಮಹತ್ವವನ್ನು ಕಾಪಾಡುವ ಹೊಣೆಗಾರಿಕೆ ಇದೆ ಎಂದು ಅವರು ಹೇಳಿದರು. ಕೇಂದ್ರದಲ್ಲಿ ಹಿಂದೆ ಯು.ಪಿ.ಎ ಸರ್ಕಾರ ಅಧಿಕಾರದಲ್ಲಿದ್ದಾಗ ಮಾಹಿತಿ ಹಕ್ಕು ಕಾಯ್ದೆ ಜಾರಿಗೆ ಬಂದಿದೆ. 18 ವರ್ಷಗಳ ಸುದೀರ್ಘ ಹೋರಾಟದ ಬಳಿಕ ಆ ಕಾಯ್ದೆ ಜಾರಿಯಾಗಿದ್ದು, ಆದರೆ ಅದನ್ನೀಗ ಕೇಂದ್ರ ಸರ್ಕಾರ ದುರ್ಬಲಗೊಳಿಸುತ್ತಿದೆ ಎನ್ನುವ ಅನುಮಾನ ವ್ಯಕ್ತವಾಗುತ್ತಿದೆ ಎಂದರು.




ಇತ್ತೀಚಿಗೆ ಸುಪ್ರೀಂಕೋರ್ಟ್ ಕೂಡ ಇದೇ ಅಸಮಾಧಾನವನ್ನು ಹೊರಹಾಕಿತ್ತು. ಕಾಯ್ದೆಯನ್ನು ವ್ಯಾಪಕವಾಗಿ ದುರುಪಯೋಗ ಪಡಿಸಿಕೊಳ್ಳುವ ಮಾಹಿತಿ ಹಕ್ಕು ಕಾರ್ಯಕರ್ತರ ಸಂಖ್ಯೆ ಹೆಚ್ಚುತ್ತಿದ್ದು, ಈ ಸವಾಲುಗಳನ್ನೂ ನೂತನ ಆಯುಕ್ತರಾಗಿ ನೇಮಕಗೊಂಡಿರುವ ಪತ್ರಕರ್ತರು ನಿರ್ವಹಿಸಬೇಕು ಎಂದರು. 2005ರಲ್ಲಿ ಜಾರಿಗೆ ಬಂದ ಈ ಮಾಹಿತಿ ಹಕ್ಕು ಕಾಯ್ದೆಗೆ ಅ.12 ಕ್ಕೆ 20 ವರ್ಷ ತುಂಬುತ್ತಿದೆ. ರಾಜಸ್ಥಾನದ ದೇವದುಂಗ್ರಿ ಎಂಬ ಹಳ್ಳಿಯಲ್ಲಿ ಅರುಣಾ ರಾಯ್, ನಿಖಿಲ್ ದವೆ ಮತ್ತಿತರ ಚಳವಳಿಗಾರರ ಮೂಲಕ 1987ರಲ್ಲಿ ಮೊಳಕೆಯೊಡೆದ ಈ ಕನಸು, ಚಳವಳಿ ರೂಪ ಪಡೆದು ಕಾಯ್ದೆಯಾಗಿ ಅನುಷ್ಠಾನಕ್ಕೆ ಬರಲು 2005ರ ತನಕ ಕಾಯಬೇಕಾಯಿತು ಎಂದರು. ಬಜೆಟ್‌ನಲ್ಲಿ ಬೇಡಿ-ಕೆಗೆ ಮನ್ನಣೆ: ಪತ್ರಕರ್ತರ ಬೇಡಿಕೆಗಳ ಬಗ್ಗೆ ಶಿವಾನಂದ್ ಅವರು ತಿಳಿಸಿದ್ದು, ಇದೆಲ್ಲವೂ ಸರ್ಕಾರದ ಗಮನದಲ್ಲಿದೆ. ಮುಂದಿನ ತಿಂಗಳು ಸಿಎಂ ಮಂಡಿಸಲಿರುವ ಬಜೆಟ್‌ನಲ್ಲಿ ಪತ್ರಕರ್ತರ ಹಿತ ಕಾಯುವ ಎರಡು ಪ್ರಮುಖ ಘೋಷಣೆಗಳೂ ಇರಲಿವೆ ಎಂದರು.

**ಕೆಯುಡಬ್ಲೂಜೆ ಕ್ರೀಯಾಶೀಲತೆ:**

ವಾರ್ತಾ ಇಲಾಖೆಯ ನಿವೃತ್ತ ಹಿರಿಯ ಜಂಟಿ ನಿರ್ದೇಶಕರಾದ ಎಚ್.ಬಿ. ದಿನೇಶ್ ಮಾತನಾಡಿ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘವು ಪತ್ರಕರ್ತರ ಮತ್ತು ಸರ್ಕಾರದ ಕೊಂಡಿಯಾಗಿ ಕಾರ್ಯನಿರ್ವಹಿಸುತ್ತಿರುವುದು ನಿಜಕ್ಕೂ ಸಂತಸದ ವಿಷಯ. ತಗಡೂರು ಅಧ್ಯಕ್ಷರಾದ ಮೇಲೆ ಸಂಘವನ್ನು ಕ್ರೀಯಾಶೀಲಗೊಳಿಸಿ ಹೊಸ ರೂಪ ನೀಡಿದರು ಎಂದು ಪ್ರಶಂಸಿದರು.

ಸರ್ಕಾರದ ಸಾಂವಿಧಾನಿಕ ಹುದ್ದೆಗಳಿಗೆ ಆಯ್ಕೆಯಾಗುವುದು ಅಷ್ಟು ಸುಲುಭವಲ್ಲ. ಆದರೆ ಈ ಸರ್ಕಾರದಲ್ಲಿ ಮಾಹಿತಿ ಹಕ್ಕು ಆಯೋಗಕ್ಕೆ ಪತ್ರಕರ್ತರು ಆಯ್ಕೆ ಆಗಿರುವುದು ನಿಜಕ್ಕೂ ಶ್ಲಾಘನೀಯ ಎಂದು ಅಭಿನಂದಿಸಿದರು.

**ಪ್ರಭಾಕರ್ ಶ್ರಮವೂ ಕಾರಣ:**

ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಈ ಸರ್ಕಾರದಲ್ಲಿ ಹೆಚ್ಚು ಪತ್ರಕರ್ತರು ಅನೇಕ ಹುದ್ದೆಗಳನ್ನು ಅಲಂಕರಿಸಿದ್ದಾರೆ. ಈ ಸಾಂವಿಧಾನಿಕ ಹುದ್ದೆ ಪಡೆಯಲು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ. ಪ್ರಭಾಕರ್ ಅವರ ಪ್ರೋತ್ಸಾಹ ಮತ್ತು ಶ್ರಮವೂ ಪ್ರಮುಖ ಕಾರಣ. ಪತ್ರಕರ್ತರು ಸರ್ಕಾರದಲ್ಲಿ ಉನ್ನತ ಹುದ್ದೆಗೇರುತ್ತಿರುವುದು ನಿಜಕ್ಕೂ ಪ್ರಶಂಸನೀಯ ಎಂದರು.

**ಅಭಿಮಾನದ ಸಂಗತಿ:**

ಸನ್ಮಾನಿತರಾದ ಮಾಹಿತಿ ಆಯೋಗದ ನೂತನ ಆಯುಕ್ತರಾದ ರುದ್ರಣ್ಣ ಹರ್ತಿಕೋಟೆ, ಬದ್ರುದ್ದೀನ್. ಕೆ., ರಾಜಶೇಖರ್.ಎಸ್., ಡಾ.ಬಿ.ಆರ್. ಮಮತಾ ಅವರುಗಳು ಮಾತನಾಡಿ, ಕೆಯುಡಬ್ಲೂಣಟಿಜಜಿಟಿಜಜೆ ತನ್ನ ವೃತ್ತಿ ಬಾಂಧವರನ್ನು ಇಲ್ಲಿಗೆ ಕರೆದು ಗೌರವಿಸಿರುವುದು ಅಭಮಾನದ ಸಂಗತಿ. ಹೊಸ ಹುದ್ದೆಯಲ್ಲಿ ಬದ್ಧತೆಯಿಂದ ಕೆಲಸ ಮಾಡುವುದಾಗಿ ಭರವಸೆ ನೀಡಿದರು. ಇದೇ ಸಂದರ್ಭದಲ್ಲಿ ಚಲನಚಿತ್ರ ಅಕಾಡೆಮಿ ಸದಸ್ಯರಾದ ದೇಶಾದ್ರಿ ಹೊಸ್ಮನೆ, ಚಿದಾನಂದ ಪಾಟೀಲ್ ಅವರು ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಐಡಬ್ಲೂಜ ಅಧ್ಯಕ್ಷ ಬಿ.ವಿ. ಮಲ್ಲಿಕಾರ್ಜುನಯ್ಯ, ಕೆಯುಡಬ್ಲ್ಯುಜೆ ಮಾಜಿ ಅಧ್ಯಕ್ಷ ಜಿ.ಕೆ.ಸತ್ಯ, ರಾಜ್ಯ ಪ್ರಾಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್, ಕಾರ್ಯದರ್ಶಿ ಸೋಮಶೇಖರ್ ಕೆರೆಗೋಡು, ಖಜಾಂಚಿ ವಾಸುದೇವ ಹೊಳ್ಳ ಹಾಗೂ ವಿವಿಧ ಜಿಲ್ಲಾ ಸಂಘದ ಪದಾಧಿಕಾರಿಗಳೂ ಸೇರಿದಂತೆ ಹಲವಾರು ಮಂದಿ ಕಾರ್ಯಕ್ರಮದಲ್ಲಿದ್ದರು.

# ಫೆಬ್ರವರಿ 20 ರಂದು ಶ್ರೀ ಸಂತ ಕವಿ ಸರ್ವಜ್ಞ ಜಯಂತಿ ಆಚರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.19.(ಕ.ವಾ.)–ಕಲಬುರಗಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ,ಮಹಾನಗರಪಾಲಿಕೆ ಹಾಗೂ ಜಿಲ್ಲಾ ಪಂಚಾಯತ್ ಇವುಗಳ ಸಂಯುಕ್ತಾಶ್ರಯದಲ್ಲಿ ಶ್ರೀ ಸಂತ ಕವಿ ಸರ್ವಜ್ಞ ಜಯಂತಿ ಆಚರಣೆ ಕಾರ್ಯಕ್ರಮವನ್ನು ಫೆಬ್ರವರಿ 20 ರಂದು ಗುರುವಾರ ಮಧ್ಯಾಹ್ನ12.30 ಗಂಟೆಗೆ ಕಲಬುರಗಿ ನಗರದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು (ಕನ್ನಡ ಭವನ) ದಲ್ಲಿ ಏರ್ಪಡಿಸಲಾಗಿದೆ.

ರಾಜ್ಯಸಭೆಯ ವಿರೋಧ ಪಕ್ಷದ ನಾಯಕರು ಹಾಗೂ ರಾಜ್ಯಸಭಾ ಸದಸ್ಯ ಡಾ. ಮಲ್ಲಿಕಾರ್ಜುನ ಖರ್ಗೆ ಅವರು ಘನ ಉಪಸ್ಥಿತಿ ವಹಿಸುವರು. ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು.

ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ,ಉದ್ಯಮಶೀಲತೆ ಮತ್ತು ಜೀವನೋಪಾಯ ಖಾತೆ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ,ಜೇವರ್ಗಿ ಶಾಸಕ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾ. ಅಜಯಸಿಂಗ್, ಅಫಜಲಪುರ ಶಾಸಕ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷರಾದ ಎಂ.ವೈ. ಪಾಟೀಲ, ಕರ್ನಾಟಕ ರೇಷ್ಮೆ ಉದ್ದಿಮೆಗಳ ನಿಗಮದ ನಿಯಮಿತದ ಅಧ್ಯಕ್ಷೆ ಹಾಗೂ ಉತ್ತರ ಶಾಸಕಿ ಕನೀಜ್ ಫಾತೀಮಾ, ಆಳಂದ ಶಾಸಕ ಹಾಗೂ ಮುಖ್ಯಮಂತ್ರಿಯವರ ಸಲಹೆಗಾರ (ನೀತಿ ಮತ್ತು ಕಾರ್ಯಕ್ರಮ) ರಾದ ಬಿ.ಆರ್. ಪಾಟೀಲ ಹಾಗೂ ಕರ್ನಾಟಕ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಾಬುರಾವ್ ಚಿಂಚನಸೂರ್ ಅವರು ಗೌರವ ಉಪಸ್ಥಿತಿವಹಿಸುವರು. ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ ಅವರು ಕಾರ್ಯಕ್ರಮದ ಅಧ್ಯಕ್ಷತೆವಹಿಸುವರು.

ಕಲಬುರಗಿ ಲೋಕಸಭಾ ಸದಸ್ಯ ರಾಧಾಕೃಷ್ಣ ದೊಡ್ಡಮನಿ, ಬೀದರ ಲೋಕಸಭಾ ಸದಸ್ಯ ಸಾಗರ ಖಂಡ್ರೆ, ಶಾಸಕರುಗಳಾದ ಬಸವರಾಜ ಮತ್ತಿಮಡು, ಡಾ. ಅವಿನಾಶ ಉಮೇಶ ಜಾಧವ, ವಿಧಾನ ಪರಿಷತ್ ಶಾಸಕರುಗಳಾದ ಸುನೀಲ್ ವಲ್ಲ್ಯಾಪುರೆ, ಶಶೀಲ ಜಿ. ನಮೋಶಿ, ಡಾ. ಬಿ.ಜಿ.ಪಾಟೀಲ, ಡಾ. ಚಂದ್ರಶೇಖರ ಪಾಟೀಲ ಹುಮನಾಬಾದ, ಡಾ. ಸಾಬಣ್ಣ ತಳವಾರ, ತಿಮ್ಮಣ್ಣಪ್ಪ ಕಮಕನೂರ, ಜಗದೇವ ಗುತ್ತೇದಾರ್, ಮಹಾನಗರಪಾಲಿಕೆ ಮಹಾಪೌರ ಯಲ್ಲಪ್ಪ ನಾಯ್ಕೋಡಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಅಧ್ಯಕ್ಷ ದೇವಿಂದ್ರಪ್ಪ ಮರತೂರ, ಅಚ್ಚುಕಟ್ಟು ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಬ್ದುಲ್ ರಶೀದ ಅವರು ಅತಿಥಿಗಳಾಗಿ ಪಾಲ್ಗೊಳ್ಳುವರು.

ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತ ಕೃಷ್ಣ ಭಾಜಪೇಯಿ, ಕಲಬುರಗಿ ಈಶಾನ್ಯ ವಲಯದ ಪೊಲೀಸ್ ಉಪ ಮಹಾನಿರೀಕ್ಷಕ ಅಜಯ ಹಿಲೋರಿ, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಕಾರ್ಯದರ್ಶಿ ಎಂ. ಸುಂದರೇಶ ಬಾಬು, ಕಲಬುರಗಿ ವಿಭಾಗದ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತ ಡಾ. ಆಕಾಶ ಎಸ್ ಹಾಗೂ ಕಲಬುರಗಿ ಶ್ರೀ ಸಂತ ಕವಿ ಸರ್ವಜ್ಞ ಕುಂಬಾರ ಸಮಾಜದ ಜಿಲ್ಲಾಧ್ಯಕ್ಷ ಶಿವಶರಣಪ್ಪ ಎಲ್. ಕುಂಬಾರ ಅವರು ವಿಶೇಷ ಆಹ್ವಾನಿತರಾಗಿ ಆಗಮಿಸುವರು. ಕಾರ್ಯಕ್ರಮದಲ್ಲಿ ಕಲಬುರಗಿ ಮಿಲೇನಿಯಮ್ ಕಾಲೇಜಿನ ಪ್ರಾಂಶುಪಾಲ ಸಂಗಮೇಶ ಕೆ. ಕುಂಬಾರ ಅವರು ವಿಶೇಷ ಉಪನ್ಯಾಸ ನೀಡುವರು.

## ಆಸ್ತಿಗಳಿಗೆ ತೆರಿಗೆ ಪಾವತಿಸಿ ಬಿ–ಖಾತಾ ಪಡೆದುಕೊಳ್ಳಿ: ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.19–ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿನ ಸಾರ್ವಜನಿಕರು ತಮ್ಮ ಆಸ್ತಿಗಳಿಗೆ ತೆರಿಗೆ ಪಾವತಿಸಿ ಬಿ–ಖಾತಾ ಪಡೆದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

ಸರ್ಕಾರಿ ಹಾಗೂ ಸರ್ಕಾರದ ಅಧೀನ ಇಲಾಖೆ, ನಿಗಮ, ಮಂಡಳಿಗಳ ಜಾಗಗಳನ್ನು ಹೊರತುಪಡಿಸಿ, ಅನಧಿಕೃತ ಬಡಾವಣೆ,ಭೂ ಪರಿವರ್ತನೆ ಹೊಂದದೆ ಸ್ವಂತವಾಗಿ ತಮ್ಮದೇ ಮಾಲೀಕತ್ವಹೊಂದಿದ ನಿವೇಶನ/ಜಾಗಗಳಲ್ಲಿ ನಿರ್ಮಿಸಿಕೊಂಡಿರುವ ಅನಧಿಕೃತ ನಿವೇಶನ/ಕಟ್ಟಡಗಳನ್ನು 2024 ಸೆ.10 ರ ಒಳಗಾಗಿ ನೋಂದಾವಣೆ ಮೂಲಕ ಖರೀದಿ ಮಾಡಿದಂತಹ ಆಸ್ತಿಗಳನ್ನು ಮಹಾನಗರ ಪಾಲಿಕೆ, ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳಲ್ಲಿ ಬಿ–ಖಾತೆ ಪಡೆಯಬಹುದಾಗಿದೆ.

ಒಂದು ಬಾರಿ ಮಾತ್ರ ಮೇ 10 ರೊಳಗಾಗಿ ಅರ್ಜಿ ಸಲ್ಲಿಸಿ 2024–25ನೇ ಸಾಲಿನ ಆಸ್ತಿ ತೆರಿಗೆಯ 02 ಪಟ್ಟು ದಂಡ ಪಾವತಿಸಿ, ಮಹಾನಗರ ಪಾಲಿಕೆಯಲ್ಲಿ ನಮೂನೆ–2ಎ ಮತ್ತು ಇತರೇ ನಗರ ಸ್ಥಳೀಯ ಸಂಸ್ಥೆಗಳಲ್ಲಿ ನಮೂನೆ–3ಎ ಪಡೆಯಲು ಅವಕಾಶ ನೀಡಲಾಗಿದೆ.

*'ಬಿ' ರಿಜಿಸ್ಟರ್ ನಲ್ಲಿ ದಾಖಲಿಸಬೇಕಾದ ಆಸ್ತಿಗಳಿಗೆ ಇ–ಖಾತಾ ನೀಡಲು ಪಡೆಯಬೇಕಾದ ದಾಖಲೆ:*

ಆಸ್ತಿಗೆ ಸಂಬಂಧಿಸಿದಂತೆ ಸ್ವತ್ತಿನ ಮಾಲೀಕತ್ವ ಸಾಬೀತುಪಡಿಸುವ ದಿನಾಂಕ:10.09.2024ರ ಪೂರ್ವದಲ್ಲಿ ನೋಂದಾಯಿತ ಮಾರಾಟ ಪತ್ರಗಳು, ದಾನಪತ್ರ, ವಿಭಾಗ ಪತ್ರಗಳು, ಹಕ್ಕು ಖುಲಾಸೆ ಪತ್ರಗಳು, ಪ್ರಸಕ್ತ ಸಾಲಿನವರೆಗೆ ಋಣಭಾರ ಪ್ರಮಾಣ ಪತ್ರ.

ಚಾಲ್ತಿ ಸಾಲಿನ ಆಸ್ತಿ ತೆ–ರಿಗೆ ಪಾವತಿ ರಸೀದಿ (ಆಸ್ತಿ ತೆರಿಗೆ 02 ಪಟ್ಟು ಮೊತ್ತದ ದಂಡದೊಂದಿಗೆ), ಮಾಲೀಕರ ಫೋಟೋ ಮತ್ತು ಸ್ವತ್ತಿನ (4 ಪಾರ್ಶ್ವಗಳನ್ನು ತೋರಿಸುವಂತೆ ಪಡೆದ) ಫೋಟೋ, ಸರ್ಕಾರದ ಇಲಾಖೆಗಳಿಂದ ವಿತರಿಸಿದ ಗುರುತಿನ ಚೀಟಿ.

ಮೇಲ್ಕಂಡ ದಾಖಲೆಗಳನ್ನು ಸಲ್ಲಿಸಿ ಬಿ–ಖಾತಾ ಪಡೆಯಬಹುದು. ಪ್ರತಿ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ಸಹಾಯವಾಣಿ ಕೇಂದ್ರಗಳನ್ನು ತೆರೆಯಲಾಗಿದ್ದು, ಮಧ್ಯವರ್ತಿಗಳಿಗೆ ಅವಕಾಶ ನೀಡದೆ, ನೇರವಾಗಿ ಸಂಬಂಧಿಸಿದ ಮಹಾನಗರ ಪಾಲಿಕೆ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳಲ್ಲಿ ಸಕಾಲ ಯೋಜನೆಯಡಿ ಅರ್ಜಿ ಸಲ್ಲಿಸಿ, ತಮ್ಮ ಆಸ್ತಿಗಳನ್ನು ಬಿ–ಖಾತೆಯಲ್ಲಿ ಸೇರ್ಪಡೆಗೊಳಿಸಿಕೊಳ್ಳಲು ಕಲ್ಪಿಸಿರುವ ಅವಕಾಶ ಸದುಪಯೋಗಪಡಿಸಿಕೊಳ್ಳಬೇಕು.

*ಸಹಾಯವಾಣಿ ಕೇಂದ್ರ:*

ಬಳ್ಳಾರಿ ಮಹಾನಗರಪಾಲಿಕೆಯ ವೀರೇಶಯ್ಯ(ಮೊ.7019141268), ಅಬ್ದುಲ್ ಖಾದರ್ ಎಸ್.ಕೆ(ಮೊ.9845469264), ಕೆ.ವೆಂಕಟೇಶ್(ಮೊ.9986174981).

ಸಿರುಗುಪ್ಪ ನಗರಸಭೆಯ ರಾಜಭಕ್ಷ ಮೊ.9036525396, ಕಂಪ್ಲಿ ಪುರಸಭೆಯ ಸಿ.ಪ್ರಶಾಂತ್ ಮೊ.9916907008, ಸಂಡೂರು ಪುರಸಭೆಯ ದಿನಕರ್ ಮೊ.7899696662, ಕುರುಗೋಡು ಪುರಸಭೆಯ ಮೋಹನ್ ಶಾಸ್ತ್ರೀ ಮೊ.9980865286, ಕುರೇಕುಪ್ಪ ಪುರಸಭೆಯ ರವಿ.ಎಂ ಮೊ.8880949944, ತೆಕ್ಕಲಕೋಟೆ ಪಟ್ಟಣ ಪಂಚಾಯಿತಿಯ ಸುಬ್ರಮಣ್ಯಂ ಮೊ.9980863962, ಕುಡತಿನಿ ಪಟ್ಟಣ ಪಂಚಾಯಿತಿಯ ಬಸವರಾಜ ಮೊ.9844772449 ಗೆ ಸಂಪರ್ಕಿಸಬಹುದು.

## ಶಾಲಾ ಶಿಕ್ಷಣ ಇಲಾಖೆ: ಯಾವುದೇ ಹುದ್ದೆಗೆ ನೇಮಕಾತಿ ಆದೇಶವನ್ನು ನೇರವಾಗಿ ನೀಡಲು ಆಮಿಷ ಒಡ್ಡಿದ್ದಲ್ಲಿ ಹತ್ತಿರದ ಪೋಲಿಸ್ ಠಾಣೆಯಲ್ಲಿ ದೂರು ನೀಡಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.19–ರಾಜ್ಯವ್ಯಾಪಿ ಸರ್ಕಾರಿ ಹುದ್ದೆಗಳ ನಕಲಿ ನೇಮಕಾತಿ ನೀಡುವ ಜಾಲಗಳು ಸಕ್ರಿಯವಾಗಿದ್ದು, ಆದ್ದರಿಂದ ಶಾಲಾ ಶಿಕ್ಷಣ ಇಲಾಖೆಯಲ್ಲಿ ಯಾವುದೇ ಹುದ್ದೆಗಳಿಗೆ ಅಧಿಕೃತವಾಗಿ, ಬಹಿರಂಗವಾಗಿ ಸರ್ಕಾರ ಹೊರಡಿಸುವ ಅಧಿಸೂಚನೆಗಳನ್ನು ಅನುಸರಿಸಿ ಅರ್ಜಿ ಹಾಕಿ ಪರೀಕ್ಷೆ ಬರೆಯುವ ಮೂಲಕ ಉದ್ಯೋಗ ಪಡೆಯಬಹುದಾಗಿದೆ. ಯಾವುದೇ ಹುದ್ದೆಗಳನ್ನು ಗುಪ್ತವಾಗಿ ಆಯ್ಕೆ ಮಾಡುವುದಿಲ್ಲ ಎಂದು ಕಲಬುರಗಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು (ಆಡಳಿತ) ಅವರು ತಿಳಿಸಿದ್ದಾರೆ.

ಶಾಲಾ ಶಿಕ್ಷಣ ಇಲಾಖೆಯಲ್ಲಿ ಯಾವುದೇ ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆ ಅನುಸರಿಸದೇ ನೇಮಕಾತಿ ಆದೇಶ ಜಾರಿ ಮಾಡಲು ಅವಕಾಶ ಇರುವುದಿಲ್ಲ. ಸಾರ್ವಜನಿಕರು/ನಿರುದ್ಯೋಗಿ ಯುವಕರಿಗೆ ಯಾವುದೇ ಹುದ್ದೆಗೆ ನೇಮಕಾತಿ ಆದೇಶವನ್ನು ನೇರವಾಗಿ ನೀಡಲು ಆಮಿಷ ಒಡ್ಡಿದ್ದಲ್ಲಿ ಅಂತಹವರ ವಿರುದ್ಧ ತಮ್ಮ ಹತ್ತಿರದ ಪೋಲಿಸ್ ಠಾಣೆಯಲ್ಲಿ ದೂರು ನೀಡಬಹುದಾಗಿದೆ.

ಈ ರೀತಿಯ ಆಮೀಷಕ್ಕೊಳಗಾಗದೇ ಎಚ್ಚರಿಕೆಯಿಂದ ಇರಬೇಕೆಂದು ಈಗಾಗಲೇ ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐ.ಟಿ.–ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ ಖರ್ಗೆ ಅವರು ಈಗಾಗಲೇ ಸಾರ್ವಜನಿಕರಲ್ಲಿ ಮನವಿ ಮಾಡಿರುತ್ತಾರೆ ಎಂದು ಅವರು ತಿಳಿಸಿದ್ದಾರೆ.

## ಅನಾಮಧೇಯ ಮೃತ ಮಹಿಳೆಯ ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.19–ನಗರದ ಬಿಮ್ಸ್ ಆಸ್ಪತ್ರೆಯ ಆವರಣದ ಪೊಲೀಸ್ ಔಟ್ ಪೋಸ್ಟ್ ಮುಂದೆ ಇದ್ದ ಸುಮಾರು 27 ವರ್ಷದ ಅನಾಮಧೇಯ ಮಹಿಳೆ ಅಸ್ವಸ್ಥರಾಗಿ ಮೃತಪಟ್ಟಿದ್ದು, ಮೃತಳ ವಾರಸುದಾರರು ತಿಳಿದಿರುವುದಿಲ್ಲ. ಮೃತಳ ವಾರಸುದಾರರ ಪತ್ತೆಗಾಗಿ ಸಹಕರಿಸಬೇಕು ಎಂದು ಕೌಲ್ ಬಜಾರ್ ಪೊಲೀಸ್ ಠಾಣೆಯ ಠಾಣಾಧಿಕಾರಿ ಮನವಿ ಮಾಡಿದ್ದಾರೆ.

ಚಹರೆ: ಅಂದಾಜು 5.2 ಅಡಿ,ಕೋಲು ಮುಖ, ಕಪ್ಪು ಮೈ ಬಣ್ಣ, ತಲೆಯ ಮೇಲೆ ಕಪ್ಪು ಮತ್ತು ಬಿಳಿ, ಕೂದಲು ಹಾಗೂ ಡಿಜೈನಿನ ನೈಟಿ ಧರಿಸಿರುತ್ತಾಳೆ. ವಾರಸುದಾರರ ಬಗ್ಗೆ ಮಾಹಿತಿ ಸಿಕ್ಕಲ್ಲಿ ಕೌಲ್ ಬಜಾರ್ ಪೊಲೀಸ್ ಠಾಣೆಯ ದೂ.08392–240731, ಪಿ.ಐ ಮೊ.9480803047, ಪಿಎಸ್‌ಐ ಮೊ.9480803084 ಅಥವಾ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392–258100 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲೇವಾದೇವಿದಾರರು ಹಾಗೂ ಗಿರವಿದಾರರರು ನಿಯಮ ಉಲ್ಲಂಘನೆ ಮಾಡಿ ಹೆಚ್ಚಿನ ಬಡ್ಡಿ ವಿಧಿಸಿದ್ದಲ್ಲಿ ಅಧಿಕಾರಿಗಳಿಗೆ ದೂರು ನೀಡಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.19.(ಕ.ವಾ.)–ಕಲಬುರಗಿ ಜಿಲ್ಲೆಯ ಲೇವಾದೇವಿದಾರರು ಹಾಗೂ ಗಿರವಿದಾರರರು ಕರ್ನಾಟಕ ಲೇವಾದೇವಿದಾರರ ಅಧಿನಿಯಮ 1961 ಮತ್ತು ಕರ್ನಾಟಕ ಗಿರವಿದಾರರ ಅಧಿನಿಯಮ 1961ರಡಿ ಪರವಾನಿಗೆ ಪಡೆದ ಪರವಾನಗಿದಾರರು ಸರ್ಕಾರದ ದಿನಾಂಕ: 28–08–2003 ರನ್ವಯ ಅಧಿಸೂಚನೆಯನ್ವಯ ಭದ್ರತೆ ಸಾಲಗಳಿಗೆ ಗರಿಷ್ಠ ವಾರ್ಷಿಕ ಶೇ. 14 ರಷ್ಟು ಹಾಗೂ ಭದ್ರತೆ ಇಲ್ಲದೇ ಇರುವ ಸಾಲಗಳಿಗೆ ಗರಿಷ್ಠ ವಾರ್ಷಿಕ ಶೇ. 16 ರಷ್ಟು ಮಾತ್ರ ಬಡ್ಡಿ ವಿಧಿಸಬೇಕು. ಈ ನಿಯಮ ಉಲ್ಲಂಘಿಸಿ ಹೆಚ್ಚುವರಿ ಬಡ್ಡಿ ವಿಧಿಸುತ್ತಿರುವ ಲೇವಾದೇವಿದಾರರು ಹಾಗೂ ಗಿರವಿದಾರರರು ವಿರುದ್ಧ ಸಾರ್ವಜನಿಕರು ಈ ಕೆಳಕಂಡ ಅಧಿಕಾರಿಗಳಿಗೆ ದೂರು ನೀಡಬಹುದಾಗಿದೆ ಎಂದು ಕಲಬುರಗಿ ಸಹಕಾರ ಸಂಘಗಳ ಉಪ ನಿಬಂಧಕರು ತಿಳಿಸಿದ್ದಾರೆ.

ಕಲಬುರಗಿ ವಿಭಾಗದ ಸಹಕಾರ ಸಂಘಗಳ ಜಂಟಿ ನಿಬಂಧಕರ ಕಚೇರಿ ಮೊಬೈಲ್ ಸಂಖ್ಯೆ–9448813536, ಕಲಬುರಗಿ ಸಹಕಾರ ಸಂಘಗಳ ಉಪ ನಿಬಂಧಕರ ಕಾರ್ಯಾಲಯ–9902777816, ಕಲಬುರಗಿ ಸಹಕಾರ ಸಂಘಗಳ ಸಹಾಯಕ ನಿಬಂಧಕರ (ಕಲಬುರಗಿ, ಆಳಂದ, ಅಫಜಲಪುರ, ಜೇವರ್ಗಿ, ಕಮಲಾಪುರ, ಯಡ್ರಾಮಿ ತಾಲೂಕುಗಳಿಗೆ ಸಂಬಂಧಿಸಿದಂತೆ) ಕಚೇರಿಯ– 9986377522 ಹಾಗೂ ಸೇಡಂ ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಾರ್ಯಾಲಯ (ಸೇಡಂ, ಚಿತ್ತಾಪುರ, ಚಿಂಚೋಳಿ, ಕಾಳಗಿ ಹಾಗೂ ಶಹಾಬಾದ ತಾಲೂಕುಗಳಿಗೆ ಸಂಬಂಧಿಸಿದಂತೆ)–8861875737ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

## ಫ್ಯಾಕ್ಟರಿ ಬಂದ್ ಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ:ಫೆ,18– ಇಲ್ಲಿನ ವಿಶಾಲನಗರ ಬಡಾವಣೆಯಲ್ಲಿನ ಶ್ಯಾಮ್ಸ್ ಕೇಕ್ ಅಂಡ್ ಬೇಕ್ಸ್ ಬ್ರೆಡ್ ಫ್ಯಾಕ್ಟರಿ ಅನಧಿಕೃತವಾಗಿ ನಡರಸುತ್ತಿದ್ದು. ಇಲ್ಲಿನ ನಿವಾಸಿಗಳಿಗೆ ಹಲವು ಸಮಸ್ಯೆಗಳಿಗೆ ಕಾರಣವಾಗಿರುವ ಇದಬ್ನು ಬಂದ್ ಮಾಡಿಸಲು ಸ್ಥಳೀಯ ನಡುವೆ ವಾಸಿಗಳು ಮನವಿ ಮಾಡಿದ್ದಾರೆ.

## ವೃತ್ತ ನಾಮಕರಣ: ಆಕ್ಷೇಪಣೆಗಳಿಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.19 –ಬಳ್ಳಾರಿ ಮಹಾನಗರ ಪಾಲಿಕೆ ವ್ಯಾಪ್ತಿಯ ಅನಂತಪುರ ರಸ್ತೆಯಲ್ಲಿರುವ ಸರ್ಕಾರಿ ಅತಿಥಿ ಗೃಹದ ಮುಂಭಾಗ ವೃತ್ತಕ್ಕೆ 'ಶ್ರೀ ಕೃಷ್ಣ' ವೃತ್ತ ಎಂದು ಹೆಸರು ನಾಮಕರಣ ಮಾಡಲು ಪಾಲಿಕೆಯ ಸಾಮಾನ್ಯಸಭೆಯಲ್ಲಿ ಮಂಡಿಸಿದ್ದು, ಈ ಕುರಿತು ಸಾರ್ವಜನಿಕರಿಂದ ಸಲಹೆ ಹಾಗೂ ಆಕ್ಷೇಪಣೆಗಳಿದ್ದಲ್ಲಿ ಪ್ರಕಟಣೆಗೊಂಡ 30 ದಿನಗಳೊಳಗಾಗಿ ಲಿಖಿತ ರೂಪದಲ್ಲಿ ಮಹಾನಗರ ಪಾಲಿಕೆ ಕಚೇರಿಗೆ ಸಲ್ಲಿಸಬಹುದು.

ನಿಗಧಿತ ಅವಧಿಯೊಳಗೆ ಯಾವುದೇ ಆಕ್ಷೇಪಣೆಗಳು ಸಲ್ಲಿಕೆಯಾಗದಿದ್ದಲ್ಲಿ ಸರ್ಕಾರದ ಸುತ್ತೋಲೆಯ ಪ್ರಕಾರ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.19–ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ (ವೃತ್ತಿಪರ ಪದವಿ, ಸ್ನಾತಕೋತ್ತರ ಪದವಿ, ವೃತ್ತಿಪರ ಸ್ನಾತಕೋತ್ತರ ಪದವಿ ಮತ್ತು ನರ್ಸಿಂಗ್ ಕೋರ್ಸ್) ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ 'ಶುಲ್ಕ ಮರುಪಾವತಿ' ಕಾರ್ಯಕ್ರಮದಡಿ ಈಗಾಗಲೇ ಅರ್ಜಿ ಆಹ್ವಾನಿಸಲಾಗಿದ್ದು, ವಿದ್ಯಾರ್ಥಿಗಳು ಮತ್ತು ಶೈಕ್ಷಣಿಕ ವಿದ್ಯಾಸಂಸ್ಥೆಗಳು ಮನವಿ ಮಾಡಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು ಮಾ.10 ರ ವರೆಗೆ ವಿಸ್ತರಿಸಲಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಭಾನುಮತಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೊಹಮ್ಮದ್‌ಷಹಾ ಗುಂಬಜ್ ರಕ್ಷಣೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ, ಫೆ 19: ನಗರದ ಅಳಂದ ರಸ್ತೆ ಖಾದ್ರಿ ಚೌಕ್ ಹತ್ತಿರವಿರುವ ಮೊಹಮ್ಮದ್ ಷಹಾ ಬಹಮನಿ ಗೋರಿಯಿರುವ ಗುಂಬಜವನ್ನು ರಕ್ಷಿಸುವಂತೆ ಸಾಮಾಜಿಕ ಕಾರ್ಯಕರ್ತ ಕೆ.ಎಂ ಮುಜೀಬುದ್ದೀನ್ ಮನವಿ ಮಾಡಿದ್ದಾರೆ.

ಈ ಕುರಿತು ಹಲವಾರು ಸಲ ಪ್ರಾಚ್ಯವಸ್ತು ಇಲಾಖೆಗೆ ಮನವಿ ಮಾಡಿದರೂ ಪ್ರಯೋಜನವಾಗಿಲ್ಲ ಆದ್ದ–ರಿಂದ ದಯವಿಟ್ಟು ಸುರಕ್ಷತಾ ಕ್ರಮ ಕೈಗೊಂಡು, ಗುಮ್ಮಟ ರಕ್ಷಿಸುವಂತೆ ಮನವಿ ಮಾಡಿದ್ದಾರೆ.

### ವಿಜಯನಗರ ಶ್ರೀ ಕೃಷ್ಣದೇವರಾಯ ವಿವಿಯಲ್ಲಿ ಎರಡು ದಿನಗಳ ರಾಷ್ಟ್ರೀಯ ಸಮ್ಮೇಳನ ಕಾರ್ಯಕ್ರಮ

## ವಿಕಸಿತ ಭಾರತ ಎಲ್ಲರ ಜವಾಬ್ದಾರಿಯಾಗಲಿ: ಪ್ರೊ.ತ್ಯಾಗರಾಜ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.19–ಭಾರತೀಯರಾದ ನಾವು ನಮಗೆ ದೊರೆತಿರುವ ಪೌರತ್ವವನ್ನು ಜವಾಬ್ದಾರಿಯುತವಾಗಿ ನಿಭಾಯಿಸಬೇಕಾಗಿದೆ ಎಂದು ಬೆಳಗಾವಿ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಸಿ. ಎಂ. ತ್ಯಾಗರಾಜ್ ಅವರು ಹೇಳಿದರು.



ಬುಧವಾರ, ಇಲ್ಲಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಡಾ.ಬಿಆರ್ ಅಂಬೇಡ್ಕರ್ ಸಭಾಭವನದಲ್ಲಿ ಇಂಡಿಯನ್ ಕೌನ್ಸಿಲ್ ಆಫ್ ಸೋಶಿಯಲ್ ಸೈನ್ಸ್ ರಿಸರ್ಚ್ ಸೌತ್ ರೀಜಿನಲ್ ಸೆಂಟರ್, ಹೈದ್ರಾಬಾದ್(ಖಅಖಖಖ–ಖಖಅ) ಹಾಗೂ ವಿಶ್ರೀಕೃ ವಿಶ್ವವಿದ್ಯಾಲಯದ ರಾಜ್ಯಶಾಸ್ತ್ರ ಅಧ್ಯಯನ ವಿಭಾಗ ಸಹಯೋಗದಲ್ಲಿ 'ವಿಕಸಿತ ಭಾರತ @2047 ಭಾರತದಲ್ಲಿ ಸಾಂವಿಧಾನಿಕ, ಶಾಸಕಾಂಗ ಮತ್ತು ನ್ಯಾಯಾಂಗ ಸುಧಾರಣೆಗಳು' ಕುರಿತಾದ ಎರಡು ದಿನಗಳ ರಾಷ್ಟ್ರೀಯ ಸಮ್ಮೇಳನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಿಕಸಿತ ಭಾರತದ ಅಭಿವೃದ್ಧಿ ಕನಸು ಎಲ್ಲರ ಜವಾಬ್ದಾರಿಯಾಗಲಿ. ಹಲವಾರು ರಾಜಕೀಯ ಚಿಂತಕರು ಸಮಾಜವನ್ನು ಅಭಿವೃದ್ಧಿಯತ್ತ ಸಾಗಲು ಶ್ರಮಿಸಿದ್ದಾರೆ. ರಾಜಕೀಯ ಚಿಂತಕರನ್ನು ಹತ್ತಿಕ್ಕುವ ಪ್ರಯತ್ನ ನಿರಂತರವಾಗಿ ಸಾಗುತ್ತಲೇ ಇದೆ. ನಮ್ಮ ಹಕ್ಕುಗಳು, ಜವಾಬ್ದಾರಿಗಳ ಕುರಿತಂತೆ ಪ್ರಶ್ನೆ ಕೇಳುವ ಮನೋಭಾವ ಪ್ರಬಲವಾಗಬೇಕಾಗಿದೆ ಎಂದರು.

ರಾಜ್ಯಶಾಸ್ತ್ರದ ವಿದ್ಯಾರ್ಥಿಗಳು ಪ್ರಶ್ನಿಸುವ ಮನೋಭಾವದ ಜೊತೆ ಕೌಶಲ್ಯಗಳನ್ನು ಬೆಳೆಸಿಕೊಳ್ಳಬೇಕು. ರಾಜಕೀಯ ಪಕ್ಷಗಳಿಗೆ ದೇಶಕ್ಕಿಂತ ಪಕ್ಷ ಮುಖ್ಯವಾಗಿದೆ. 2047ರ ಹೊತ್ತಿಗೆ ಯುವಕರು ರಾಷ್ಟ್ರ ರಾಜಕಾರಣದ ಅಧಿಕಾರ ಚುಕ್ಕಾಣಿ ಹಿಡಿಯಲ್ಲಿದ್ದಾರೆ ಎಂದು ಹೇಳಿದರು.

ಮುಖ್ಯ ಭಾಷಣಕಾರರಾಗಿ ಆಂಧ್ರ–ಪ್ರದೇಶದ ಕೇಂದ್ರೀಯ ವಿಶ್ವವಿದ್ಯಾಲಯ ರಾಜ್ಯಶಾಸ್ತ್ರ ಪ್ರಾಧ್ಯಾಪಕರಾದ ಜಿ.ರಾಮ್ ರೆಡ್ಡಿ ಮಾತನಾಡಿ, ರಾಷ್ಟ್ರೀಯ ರಕ್ಷಣೆ ಮತ್ತು ರಾಷ್ಟ್ರ ನಿರ್ಮಾಣಕ್ಕಾಗಿ ಸಮರ್ಪಣೆಯಿಂದ ಪ್ರತಿಯೊಬ್ಬ ಭಾರತೀಯನು ಜವಾಬ್ದಾರಿಯಿಂದ ವರ್ತಿಸಿದರೆ ವಿಕಸಿತ ಭಾರತದ ಕನಸು ನೆರವೇರಲಿದೆ ಎಂದು ಹೇಳಿದರು.

ಸಂವಿಧಾನ, ಶಾಸಕಾಂಗ ಮತ್ತು ನ್ಯಾಯಾಂಗ ಸುಧಾರಣೆ–ಯ ಮೇಲೆ ಎಲ್ಲರೂ ಗಮನ ಹರಿಸುವುದು ಮುಖ್ಯವಾಗಿದೆ. ಪ್ರಜಾಪ್ರಭುತ್ವವನ್ನು ಬಲಪಡಿಸುವಲ್ಲಿ ಸಂವಿಧಾನವು ಪ್ರಮುಖ ಪಾತ್ರವಹಿಸಿದೆ ಎಂದರು.

ವಿವಿಯ ಕುಲಸಚಿವರಾದ ಎಸ್.ಎನ್.ರುದ್ರೇಶ್ ಮಾತನಾಡಿ, ಭವಿಷ್ಯದಲ್ಲಿ ಶಿಕ್ಷಣ ಅಭಿವೃದ್ಧಿಯಾಗದಿದ್ದರೆ ವಿಕಸಿತ ಭಾರತ ಅಸಾಧ್ಯ. ಶಿಕ್ಷಣ ಹಾಗೂ ಸಾಮಾಜಿಕ ಜವಾಬ್ದಾರಿಯಿಂದ ವಿಕಸಿತ ಭಾರತಕ್ಕೆ ನಾವೆಲ್ಲ ಕೈಜೋಡಿಸೋಣ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಿವಿಯ ಕುಲಪತಿಗಳಾದ ಪ್ರೊ. ಎಂ. ಮುನಿರಾಜು ಅವರು ಮಾತನಾಡಿ, ಭವಿಷ್ಯದ ಭಾರತ ನಿರ್ಮಾಣ ಮಾಡುವಲ್ಲಿ ಯುವಕರ ಪಾತ್ರ ಅಪಾರವಾಗಿದೆ. ವಿಶ್ವವಿದ್ಯಾಲಯಗಳು ವಿದ್ಯಾರ್ಥಿಗಳ ಭವಿಷ್ಯ ನಿರ್ಮಿಸಲು ಕೌಶಲ್ಯಯುತ ಶಿಕ್ಷಣಕ್ಕೆ ಮಹತ್ವ ಕೊಡಬೇಕು. ಸ್ವಕುಟುಂಬವನ್ನು ಸದೃಢಗೊಳಿಸಿದರೆ ದೇಶವು ತಾನಾಗಿಯೇ ಬಲಗೊಳ್ಳುತ್ತದೆ. ಈ ನಿಟ್ಟಿನಲ್ಲಿ ತಮ್ಮ ಮಕ್ಕಳಿಗೆ ನೈತಿಕ ಶಿಕ್ಷಣ ಕೊಡಬೇಕು ಎಂದು ತಿಳಿಸಿದರು.

ಸಮಾಜ ವಿಜ್ಞಾನ ನಿಕಾಯ ಡೀನರಾದ ಡಾ. ಗೌರಿ ಮಾಣಿಕ ಮಾನಸ, ಸಮ್ಮೇಳನದ ಸಂಯೋಜ–ಕರಾದ ಡಾ.ವಿಜಯಕುಮಾರ್ ವೇದಿಕೆಯಲ್ಲಿದ್ದರು. ಡಾ.ಮೋಹನದಾಸ್ ಅತಿಥಿಗಳನ್ನು ಪರಿಚಯಿಸಿದರು. ಎರಡು ದಿನಗಳ ರಾಷ್ಟ್ರೀಯ ಸಮ್ಮೇಳನದಲ್ಲಿ ಅನ್ಯರಾಜ್ಯಗಳ ಸುಮಾರು 150 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಎಲ್ಲ ನಿಕಾಯಗಳ ಡೀನರು, ವಿಭಾಗಗಳ ಮುಖ್ಯಸ್ಥರು, ಬೋಧಕ, ಬೋಧಕೇತರ ಸಿಬ್ಬಂದಿ, ಸಂಶೋಧನಾ ವಿದ್ಯಾರ್ಥಿಗಳು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಕುಡಿಯುವ ನೀರಿನ ಸಮಸ್ಯೆಗೆ ಮುಂಜಾಗ್ರತಾ ಕ್ರಮಕೈಗೊಳ್ಳಿ: ಸಚಿವರಾದ ಎನ್.ಎಸ್.ಭೋಸರಾಜು



ಮಲ್ಲಮ್ಮ ನುಡಿ ವಾರ್ತೆ

ರಾಯಚೂರುಫೆ19-ಬೇಸಿಗೆಯಲ್ಲಿ ರಾಯಚೂರು ನಗರ ಸೇರಿದಂತೆ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಅಗತ್ಯ ಮುಂಜಾಗ್ರತಾಕ್ರಮಕೈಗೊಳ್ಳಬೇಕೆಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೊಡಗು ಜಿಲ್ಲಾ ಉಸ್ತುವಾರಿ ಸಚಿವರಾದ ಎನ್.ಎಸ್.ಭೋಸರಾಜು ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಫೆ.19ರ ಬುಧವಾರ ದಂದು ನಗರದ ಸಚಿವರ ಕಾರ್ಯಾಲಯದ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಪ್ರತಿಕಾಗೋಷ್ಠಿಯಲ್ಲಿ ಮಾತನಾಡಿದರು.

ನಿನ್ನೆ ನಗರದ ರಾಂಪೂರು ಜಲಾಶಯ ಸೇರಿದಂತೆ ಕುಡಿಯುವ ನೀರಿನ ಸ್ಥಿತಿಗತಿಯ ಬಗ್ಗೆ ಜಿಲ್ಲೆಯ ಜಿಲ್ಲಾಧಿಕಾರಿ ಹಾಗೂ ಮಹಾನಗರ ಪಾಲಿಕೆಯ ಆಯುಕ್ತರೊಂದಿಗೆ ಚರ್ಚಿಸಲಾಗಿದ್ದು, ರಾಂಪೂರ ಜಲಾಶಯ ಭಾಗದಲ್ಲಿ ನೀರಿನ ಸಂಗ್ರಹ ಸಾಮರ್ಥ್ಯ ಹೆಚ್ಚಿಸಲು 50 ಎಕರೆ ಹೆಚ್ಚು ಜಮೀನು ಗುರುತಿಸಿ ಕೆರೆ ನಿರ್ಮಾಣಕ್ಕೆ ಚರ್ಚೆ ನಡೆಸಲಾಯಿತು ಎಂದರು.

ಜಿಲ್ಲಾಪಂಚಾಯತ್ ಅಧಿಕಾರಿಗಳ ಬಳಿ ಕುಡಿಯುವ ನೀರಿನ ಸಮಸ್ಯೆಗಳ ಪಟ್ಟಿ ಈಗಾಗಲೇ ಸಿದ್ದವಾಗಿದ್ದು, ನಗರ ಕುಡಿಯುವ ನೀರಿನ ನಿರ್ವಹಣೆಗಾಗಿ ಎಲ್ಲಾ ಪೂರ್ವ ಸಿದ್ಧತೆ ಮಾಡಿಕೊಳ್ಳಲಾಗಿದೆ. ದಿನದ 24 ಗಂಟೆ ಕುಡಿಯುವ ನೀರಿನ ಪೂರೈಕೆಗಾಗಿ ಯೋಜನೆಯನ್ನು ನಗರದಲ್ಲಿ ಅನುಷ್ಠಾನ ಮಾಡಲಾಗಿದ್ದು, ಕಾಮಗಾರಿಯು ಅಸಮರ್ಪಕದಿಂದ ಸ್ಥಗಿತಗೊಂಡಿದೆ. ಈ ಬಗ್ಗೆ ಪರಿಶೀಲಿಸಲಾಗುತ್ತದೆ ಎಂದರು.

ವಿಮಾನ ನಿಲ್ದಾಣ ನಿರ್ಮಾಣ ಕಾಮಗಾರಿ ಪೂರ್ವ ಸಿದ್ದತೆ ಪ್ರಕ್ರಿಯೆ ಭರದಿಂದ ನಡೆದಿವೆ. ಮಹಾನಗರ ಪಾಲಿಕೆ ಅಭಿವೃದ್ಧಿಗಾಗಿ ಎಲ್ಲಾ ಮುಂಜಾಗ್ರತೆ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಮಾವಿನಕೆರೆ ಅಭಿವೃದ್ಧಿಗೆ ಈಗಾಗಲೇ ಹಣ ಬಿಡುಗಡೆಗೊಳಿಸಲಾಗಿದ್ದು, ಕಾಮಗಾರಿಯು ಬರದಿಂದ ನಡೆದಿದೆ. ಒಟ್ಟು 75 ಕೋಟಿ ರೂ. ವೆಚ್ಚದಲ್ಲಿ ಈ ಕೆರೆ ಅಭಿವೃದ್ಧಿಗೆ ಕ್ರಮಕೈಗೊಳ್ಳಲಾಗಿದೆ. ಕೃಷ್ಣಜಲ ಭಾಗ್ಯ ನಿಗಮದ ಅನುದಾನದಲ್ಲಿ 18 ಕೆರೆ ತುಂಬುವ ಕಾಮಗಾರಿ ಪ್ರಗತಿಯಲ್ಲಿದ್ದು, ಈ ಬಗ್ಗೆ ಏನಾದರೂ ಲೋಪದೋಷಗಳಿದ್ದರೆ ಪರಿಶೀಲಿಸಲಾಗುತ್ತದೆ ಎಂದರು.

ಶೇ.98 ರಷ್ಟು ಅನುದಾನ ಬಳಕೆ; ಸಣ್ಣ ನೀರಾವರಿ ಇಲಾಖೆಗೆ ಕಳೆದ ಬಜೆಟ್ ಅವಧಿಯಲ್ಲಿ ಬಿಡುಗಡೆಗೊಳಿಸಿದ 1,850 ಕೋಟಿ ರೂ. ಅನುದಾನದಲ್ಲಿ ಶೇ.98 ರಷ್ಟು ಅನುದಾನ ಬಳಕೆ ಮಾಡಲಾಗಿದೆ. ಸಂಪೂರ್ಣ ಹಣಕ್ಕೆ ಟೆಂಡರ್ ಪ್ರಕ್ರಿಯೆ ನಿರ್ವಹಿಸಿ ಗುತ್ತೇದಾರರಿಗೆ ಕಾಮಗಾರಿ ಹಸ್ತಾಂತರಿಸಲಾಗಿದ್ದು, ಇಂದಿನ ಸರ್ಕಾರದ ಅವಧಿಯಲ್ಲಿ 1,296 ಕೋಟಿ ಬಿಲ್ ಬಾಕಿ ಉಳಿಸಲಾಗಿತ್ತು. ಈ ಸಂಪೂರ್ಣ ಹಣ ಪಾವತಿಸಲು ರಾಜ್ಯ ಸರ್ಕಾರ ಅಂತ ಹಂತವಾಗಿ ಅನುದಾನ ನೀಡಿದೆ. ಈಗಾಗಲೇ 682 ಗುತ್ತೇದಾರರ ಬಿಲ್‌ಗಳನ್ನು ಪಾವತಿಸಲಾಗಿದೆ ಎಂದರು.

ಸಣ್ಣ ನೀರಾವರಿ ಇಲಾಖೆಯಲ್ಲಿ ನಿಯಮದಂತೆ ಕಾಮಗಾರಿಯನ್ನು ನಿರ್ವಹಿಸದ ಮೂವರು ಅಭಿಯಂತರರನ್ನು ಅಮಾನತುಗೊಳಿಸಲಾಗಿದೆ. ರಾಜ್ಯಾದ್ಯಂತ ಅಂತರ್ಜಲ ಮಟ್ಟವನ್ನು ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗಿದ್ದು, ರಾಜ್ಯದಲ್ಲಿ 11,070 ಕೆರೆಗಳ ಸುಭದ್ರಗೊಳಿಸುವ ಪ್ರಕ್ರಿಯೆ ನಡೆದಿದೆ ಎಂದು ಹೇಳಿದರು.

ನವಲಿ ಜಲಾಶಯ ನಿರ್ಮಾಣಕ್ಕೆ ಆಂಧ್ರ, ತೆಲಂಗಾಣ ರಾಜ್ಯಗಳಿಗೆ ಪತ್ರ; ನವಲಿ ಜಲಾಶಯ ನಿರ್ಮಾಣಕ್ಕಾಗಿ ಆಂಧ್ರ ಮತ್ತು ತೆಲಂಗಾಣ ರಾಜ್ಯದ ಮುಖ್ಯಮಂತ್ರಿಗಳಿಗೆ ಈಗಾಗಲೇ ಪತ್ರ ಬರೆದು ಜಂಟಿ ಸಭೆಗೆ ಕೋರಲಾಗಿದೆ. ಮೂರು ರಾಜ್ಯಗಳ ಪ್ರತಿನಿಧಿಗಳಿಂದ ಸಭೆ ನಿರ್ವಹಿಸಿ ಉದ್ದೇಶ ನವಲಿ ಜಲಾಶಯ ನಿರ್ಮಾಣಕ್ಕೆ ಯೋಜನೆ ರೂಪಿಸಲಾಗುತ್ತದೆ. ಒಟ್ಟು 15,000 ಕೋಟಿ ರೂ. ವೆಚ್ಚದಲ್ಲಿ ಈ ಕಾಮಗಾರಿ ಕೈಗೆತ್ತಿಕೊಳ್ಳುವ ಯೋಜನೆ ಸಿದ್ಧಪಡಿಸಲಾಗಿದೆ ಎಂದರು. ಇದೇ ಸಂದರ್ಭದಲ್ಲಿ ಮಹಾನಗರ ಪಾಲಿಕೆ ಮಹಾ ಪೌರರಾದ ನರಸಮ್ಮ ನರಸಿಂಹಲು ಮಾಡಿಗಿರಿ, ಮುಖಂಡರಾದ ಮಹ್ಮದ್ ಶಾಲಂ, ಕೆ.ಶಾಂತಪ್ಪ, ಜಯಣ್ಣ, ಜಿ.ಶಿವಮೂರ್ತಿ, ರುದ್ರಪ್ಪ ಅಂಗಡಿ, ರಾಮಣ್ಣ ಇರಬಗೇರಾ, ಲಕ್ಷ್ಮಿರೆಡ್ಡಿ, ಅಂಜಿನಯ್ಯ ಕುರಬದೊಡ್ಡಿ, ನಿರ್ಮಲಾ ಬೆಣ್ಣೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ನೌಕರರ ಕ್ರೀಡಾಕೂಟಕ್ಕೆ ಅದ್ದೂರಿ ತೆರೆ
## ನೌಕರರು ಉತ್ಸಾಹದಿಂದ ಕೆಲಸ ಮಾಡಲು: ಸಿಇಓ ರಾಹುಲ್ ತುಕಾರಾಂ ಪಾಂಡ್ವೆ ಸಲಹೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಫೆ 19– ಸರಕಾರಿ ನೌಕರರು ಒತ್ತಡದ ಮಧ್ಯೆಯು ಉತ್ಸಾಹದಿಂದ ಕೆಲಸ ಮಾಡುವ ಪ್ರವೃತ್ತಿಯನ್ನು ಮೈಗೂಡಿಸಿಕೊಳ್ಳಬೇಕೆಂದು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ತುಕರಾಂ ಪಾಂಡ್ವೆ ಅವರು ಹೇಳಿದರು.

ಫೆ.19ರ ಬುಧವಾರ ದಂದ ನಗರದ ಕೃಷಿ ವಿವಿಯ ಆವರಣದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಜಿಲ್ಲಾ ಪಂಚಾಯತ್ ವತಿಯಿಂದ ಆಯೋಜಿಸಿದ 2024–25ನೇ ಸಾಲಿನ ನೌಕರರ ವಾರ್ಷಿಕ ಕ್ರೀಡಾಕೂಟದಲ್ಲಿ ವಿಜೇತರಿಗೆ ಬಹುಮಾನ ವಿತರಿಸಿ ಮಾತನಾಡಿದರು.

ಕ್ರೀಡೆಯಲ್ಲಿರುವ ನಿಮ್ಮ ಉತ್ಸಾಹ ಕೆಲಸದಲ್ಲಿಯು ತೊಡಗಿಸಿಕೊಳ್ಳಬೇಕು. ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಪ್ರತಿ ನಿತ್ಯ ಕ್ರೀಡಾ ಚಟುವಟಿಕೆಯಲ್ಲಿ ನಿಮ್ಮನ್ನು ನೀವು ಸಕ್ರಿಯವಾಗಿ ತೊಡಗಿಸಿಕೊಳ್ಳುವ ಮೂಲಕ ದೈಹಿಕ, ಮಾನಸಿಕವಾಗಿ ಆರೋಗ್ಯವನ್ನು ಸದೃಢರನ್ನಾಗಿಸಿಕೊಳ್ಳಲು ಸಾಧ್ಯವಾಗುತ್ತದೆ ಎಂದರು.

ಕಳೆದ ಎರಡು ದಿನಗಳ ಕಾಲ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿ ನಿಮ್ಮಲ್ಲಿರುವ ಪ್ರತಿಭೆಯನ್ನು ಪ್ರದರ್ಶಿಸಲು ಸಹಕಾರಿಯಾಗಿದೆ. ಕ್ರೀಡಾಕೂಟವನ್ನು ವ್ಯವಸ್ಥಿತವಾಗಿ ಆಯೋಜಿಸಿದ ಜಿ.ಪಂ ಅಧಿಕಾರಿಗಳಿಗೆ ಹಾಗೂ ವಿವಿಧ ತಾಲೂಕ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರಿಗೆ ಅಭಿನಂದನೆ ಸಲ್ಲಿಸಿದರು.

ಪುರುಷರ ವಿಭಾಗ ವಿಜೇತರು; 100ಮೀ ಪ್ರಥಮ ಮಹೇಶ ತಾ.ಪಂ ಸಿರವಾರ, ದ್ವಿತಿಯ ಇಮಾರವೆಲ್ ತಾ.ಪಂ ರಾಯಚೂರು, ತೃತೀಯ ಮಂಜು ಜಿ.ಪಂ ರಾಯಚೂರು, 200 ಮೀ ಪ್ರಥಮ ನರಸರೆಡ್ಡಿ ಜಿ.ಪಂ ರಾಯಚೂರು, ದ್ವಿತಿಯ ಸುಭಾಷ್ ತಾ.ಪಂ ಮಾನವಿ, ತೃತೀಯ ಆನಂದ ತಾ.ಪಂ ರಾಯಚೂರು, 400 ಮೀ ಪ್ರಥಮ ನಾಗರಾಜ ತಾ.ಪಂ ಲಿಂಗಸೂಗೂರು, ದ್ವಿತಿಯ ನರಸರೆಡ್ಡಿ ಜಿ.ಪಂ ರಾಯಚೂರು, ತೃತೀಯ ಹನುಮಂತು ತಾ.ಪಂ ದೇವದುರ್ಗ, 400 ಮೀ (40 ವರ್ಷ ವಯೋಮಿತಿ) ಪ್ರಥಮ ಶ್ರೀ ಶಿವಪ್ಪ ಸಹಾಯ ನಿರ್ದೇಶಕರು ತಾ.ಪಂ ರಾಯಚೂರು, ದ್ವಿತಿಯ ಅಣ್ಣರಾವ್ ನಾಯಕ ಸಹಾಯ ನಿರ್ದೇಶಕರು ತಾ.ಪಂ ದೇವದುರ್ಗ, ತೃತೀಯ ಚಂದ್ರಶೇಖರ ಕಾರ್ಯನಿರ್ವಾಹಕ ಅಧಿಕಾರಿ ತಾ.ಪಂ ಸಿಂಧನೂರು,

ಗುಂಡು ಎಸೆತ: ಪ್ರಥಮ ನಿಂಗಪ್ಪ ಜಿ.ಪಂ ರಾಯಚೂರು, ದ್ವಿತಿಯ ಮುತ್ತಣ್ಣ ಜಿ.ಪಂ ರಾಯಚೂರು, ತೃತೀಯ ಸುಭಾಷ್ ತಾ.ಪಂ ದೇವದುರ್ಗ, ಉದ್ದ ಜಿಗಿತ; ಪ್ರಥಮ ಇಮಾನವೇಲ್ ತಾ.ಪಂ ರಾಯಚೂರು, ದ್ವಿತಿಯ ನರಸರೆಡ್ಡಿ ಜಿ.ಪಂ ರಾಯಚೂರು, ತೃತೀಯ ನಿಂಗಪ್ಪ ಜಿ.ಪಂ ರಾಯಚೂರು ಚಕ್ರ ಎಸೆತ: ಪ್ರಥಮ ಶರಣಪ್ಪ ತಾ.ಪಂ ಸಿಂಧನೂರು, ದ್ವಿತಿಯ ದೇವೇಂದ್ರ ಚವ್ಹಾಣ ತಾ.ಪಂ ದೇವದುರ್ಗ, ತೃತೀಯ ನಿಂಗಪ್ಪ ಜಿ.ಪಂ ರಾಯಚೂರು. ಭರ್ಚಿ ಎಸೆತ: ಪ್ರಥಮ ಶರಣಪ್ಪ ತಾ.ಪಂ ಸಿಂಧನೂರು, ದ್ವಿತಿಯ ದೇವೇಂದ್ರ ಚವ್ಹಾಣ ತಾ.ಪಂ ದೇವದುರ್ಗ. ತೃತೀಯ ನಿಂಗಪ್ಪ ಜಿ.ಪಂ ರಾಯಚೂರು. ಚಂದುರಂಗ: ಪ್ರಥಮ ಬಸವೇಶ್ವರ ಜಿ.ಪಂ ರಾಯಚೂರು, ದ್ವಿತಿಯ ಪ್ರಕಾಶ ತಾ.ಪಂ ಮಸ್ಕಿ, ತೃತೀಯ ಪ್ರದೀಪ್ ತಾ.ಪಂ ಸಿರವಾರ ಕೇರಂ: ಪ್ರಥಮ ರಾಘವೇಂದ್ರ ತಾ.ಪಂ ದೇವದುರ್ಗ, ದ್ವಿತಿಯ ರಾಜ ಮಹ್ಮದ್ ತಾ.ಪಂ ಸಿರವಾರ, ತೃತೀಯ ಅಯ್ಯಪ್ಪ ತಾ.ಪಂ ಸಿರವಾರ ವಾಲಿಬಾಲ್: ಪ್ರಥಮ ತಾ.ಪಂ ಮಾನವಿ, ದ್ವಿತಿಯ ತಾ.ಪಂ ದೇವದುರ್ಗ ಕ್ರಿಕೇಟ್: ಪ್ರಥಮ ದೇವದುರ್ಗ ತಾಲೂಕ ಪಂಚಾಯತ, ದ್ವಿತೀಯ ಮಾನ್ವಿ ತಾಲೂಕ ಪಂಚಾಯತ. ಹಗ್ಗಜಗ್ಗಾಟ: ಪ್ರಥಮ ರಾಯಚೂರು ತಾಲೂಕ ಪಂಚಾಯತ ಶಟಲ್ ಬ್ಯಾಡ್ಮಂಟನ್: ಪ್ರಥಮ: ಕೃಷ್ಣ ದ್ವಿತಿಯ ಹನುಮನಗೌಡ.

ಮಹಿಳೆಯರ ವಿಭಾಗ; 100 ಮೀಟರ್ ಓಟ: ಪ್ರಥಮ ಶಶಿಕಲಾ ತಾ.ಪಂ ಸಿಂಧನೂರು, ದ್ವಿತೀಯ ಉರುಕುಂದಮ್ಮ ಜಿ.ಪಂ ರಾಯಚೂರು, ತೃತೀಯ ರೇಣುಕಾ ತಾ.ಪಂ ದೇವದುರ್ಗ. 200 ಮೀಟರ್ ಓಟ: ಪ್ರಥಮ ರುದ್ರಮ್ಮ ದ್ವಿತೀಯ ಅಕ್ಷಿತಾ, ತೃತೀಯ ಪಲ್ಲವಿ 400 ಮೀಟರ್ ಓಟ: ಪ್ರಥಮ ಶಶಿಕಲಾ, ದ್ವಿತೀಯ ರೇಣುಕಮ್ಮ, ತೃತೀಯ ದೇವಮ್ಮ ಗುಂಡು ಎಸೆತ: ಪ್ರಥಮ ಜಯಶ್ರೀ, ದ್ವಿತೀಯ ಶೋಭಾ, ತೃತೀಯ ಶೇಷಮ್ಮ, ಓಂಕಾರಿ. ಉದ್ದಜಿಗಿತ: ಪ್ರಥಮ ಮಲ್ಲಮ್ಮ , ದ್ವಿತೀಯ ಶಶಿಕಲಾ ,ತೃತೀಯ ಓಂಕಾರಿ. ಚಕ್ರ ಎಸೆತ: ಪ್ರಥಮ ಮಮ್ತಾಜ್, ದ್ವಿತೀಯ ಓಂಕಾರಿ, ತೃತೀಯ ಕಮಲಾ 4*100 ಮೀಟರ್ ರೀಲೆ ಪ್ರಥಮ ಸಿಂಧನೂರು ತಾ.ಪಂ ದ್ವಿತೀಯ ಮಸ್ಕಿ ತಾ.ಪಂ ತೃತೀಯ ಜಿ.ಪಂ ರಾಯಚೂರು. ಭರ್ಚಿ ಎಸೆತ ಪ್ರಥಮ ಮಮ್ತಾಜ್ ತಾ.ಪಂ ಸಿರವಾರ ದ್ವಿತೀಯ ಮಲ್ಲಮ್ಮ ತೃತೀಯ ದೀಪಾ, ಥ್ರೋಬಾಲ್ ಪ್ರಥಮ ಮಸ್ಕಿ ತಾ.ಪಂ ದ್ವಿತೀಯ ಸಿಂಧನೂರು, ತಾ.ಪಂ ಕೇರಂ: ಪ್ರಥಮ ರೇಖಾ, ದ್ವಿತೀಯ ಶಶಿಕಲಾ, ತೃತೀಯ ಜಯಶ್ರೀ, ಚದುರಂಗ: ಪ್ರಥಮ ಶಹಿನಾ ಬೇಗಂ, ದ್ವಿತೀಯ ರೇಖಾ, ತೃತೀಯ ಉರುಕುಂದಮ್ಮ, ಹಗ್ಗಜಗ್ಗಾಟ: ಪ್ರಥಮ ಸಿಂಧನೂರು ತಾ.ಪಂ, ದ್ವಿತೀಯ ಜಿ.ಪಂ ರಾಯಚೂರು, ಶಟಲ್ ಬ್ಯಾಡ್ಮಿಂಟನ್: ಪ್ರಥಮ ಜಿ.ಪಂ ರಾಯಚೂರು, ದ್ವಿತೀಯ ತಾ.ಪಂ.ಸಿಂಧನೂರು ತಂಡಗಳು

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಶಶಿಕಾಂತ ಶಿವಪುರೆ, ಯೋಜನಾ ಅಧಿಕಾರಿಗಳಾದ ಶರಣಬಸವರಾಜ, ಮುಖ್ಯ ಯೋಜನಾಧಿಕಾರಿಗಳಾದ ಡಾ.ಟಿ.ರೋಣಿ, ಮುಖ್ಯ ಲೆಕ್ಕಾಧಿಕಾರಿಗಳಾದ ವಿಜಯಶಂಕರ ಸೇರಿದಂತೆ ಜಿಲ್ಲೆಯ ಎಲ್ಲಾ ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರು, ಅಧಿಕಾರಿಗಳು, ಸಿಬ್ಬಂದಿ ವರ್ಗದವರು ಇದ್ದರು.

ಶಹಾಪುರ ನಗರದ ಭಾರತೀಯ ಜನತಾ ಪಾರ್ಟಿಯ ಕಾರ್ಯಾಲಯದಲ್ಲಿ

## ಹಿಂದು ಸಾಮ್ರಾಟ ಛತ್ರಪತಿ ಶಿವಾಜಿ ಮಹಾರಾಜ್ ಜಯಂತೋತ್ಸವ




ಮಲ್ಲಮ್ಮ ನುಡಿ ವಾರ್ತೆ

ಶಹಾಪುರ :ಬಿಜೆಪಿ ಪಕ್ಷದ ಜಿಲ್ಲಾ ಉಪಾಧ್ಯಕ್ಷರಾದ ಶ್ರೀ ದೇವಿಂದ್ರಪ್ಪ ಕೊನೇರ, ಮುಖಂಡರಾದ ಶ್ರೀ ಅಪ್ಪುಗೌಡ ಯಾಳಗಿ, ಮಂಡಲ ಅಧ್ಯಕ್ಷರಾದ ಚಂದ್ರಶೇಖರ ಯಾಳಗಿ ಪ್ರ,ಕಾ, ಬಾಲಕೃಷ್ಣ ಹುಲಕಲ್,ಮೌನೇಶ ಹೈಯ್ಯಾಳಕರ್,ಶರಣು ಟೊಕಾಪೂರ, ನರಸಿಂಹ ರಾಠೋಡ, ಸ್ನೇಹಲ್ ಏಕಬೋಟೆ, ಮಂಜುನಾಥ ರಾಠೋಡ,ಹೀರಾಸಿಂಗ್,ಮಹೇಶ ರಸ್ತಾಪುರ,ಮಲ್ಕಣ್ಣ ಬಗಲಿ, ಸಾಬಣ್ಣ ನಾಶಿ,ಹುಸನಪ್ಪ ಅಜ್ಜಕೋಲಿ,ಬಾಲು ಹೊಸುರ, ವಿನೋದ ನಾಯಕ್,ದೇವಿಜಿ ನಾಯಕ್, ಸಂತೋಷ ರಾಠೋಡ,ತಾರಾಸಿಂಗ್ ಚವ್ಹಾಣ, ಸಿದ್ದಯ್ಯಾಸ್ವಾಮಿ ಹಿರೇಮಠ, ಭೀಮರಾಯ ಕೋಲ್ಕರ್,ಅವಿನಾಶ ಗುತ್ತೇದಾರ,ವೆಂಕಟೇಶ ಗೌನಳ್ಳಿ,ದೇವಿಂದ್ರಪ್ಪ ರಾಂಪೂರ, ಪರಶುರಾಮ ಹಳಿಸಗರ,ಭೀಮಣ್ಣ ಕಟ್ಟಿಮನಿ,ಮಂಜು ಅಪ್ಲೆ,ಕಾಶಿ, ಮಂಜುನಾಥ ಅಲಬಾನೂರ್, ಓಂಪ್ರಕಾಶ್ ಭೀಗುಡಿ ಹಾಗೂ ಹಿರಿಯ ಮುಖಂಡರು ಕಾರ್ಯಕರ್ತರು ಉಪಸ್ಥಿತರಿದ್ದರು.

ಮೈಕ್ರೋ ಫೈನಾನ್ಸ್ ಸಂಸ್ಥೆಗಳು/ ಸಾಲ ನೀಡಿಕೆ ಸಂಸ್ಥೆಗಳು

## 30 ದಿನದೊಳಗಾಗಿ ನೋಂದಣಿಗಾಗಿ ಅರ್ಜಿ ಸಲ್ಲಿಕೆಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.19–ಮೈಕ್ರೋ ಫೈನಾನ್ಸ್ ಕಿರುಕುಳಕ್ಕೆ ಬ್ರೇಕ್ ಹಾಕುವ ನಿಟ್ಟಿನಲ್ಲಿ ಕರ್ನಾಟಕ ಕಿರು ಸಾಲ ಮತ್ತು ಸಣ್ಣ ಸಾಲ (ಬಲವಂತದ ಕ್ರಮಗಳ ಪ್ರತಿಬಂಧಕ) ಅಧ್ಯಾದೇಶ,2025ನ್ನು ಈಗಾಗಲೇ ದಿನಾಂಕ: 12–02–2025 ರಿಂದ ಕೂಡಲೇ ಅನ್ವಯವಾಗುವಂತೆ ರಾಜ್ಯ ಸರ್ಕಾರವು ಜಾರಿಗೆ ತಂದಿದ್ದು, ಅಧ್ಯಾದೇಶದನ್ವಯ ಕರ್ನಾಟಕ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಅಥವಾ ಸಾಲ ನೀಡಿಕೆ ಏಜೆನ್ಸಿಗಳು ಅಥವಾ ಸಂಸ್ಥೆಗಳು ಅಥವಾ ಲೇವಾದೇವಿದಾರರು ಅಧ್ಯಾದೇಶ ಪ್ರಾರಂಭವಾದ ದಿನಾಂಕದಿಂದ 30 ದಿನದೊಳಗಾಗಿ ನೋಂದಣಿ ಪ್ರಾಧಿಕಾರಿಯ ಮುಂದೆ ನಿಗದಿಪಡಿಸಿದ ವಿವರಗಳೊಂದಿಗೆ ನೋಂದಣಿಗಾಗಿ ಅರ್ಜಿಯನ್ನು ಸಲ್ಲಿಸಬೇಕೆಂದು ಕಲಬುರಗಿ ಸಹಕಾರ ಸಂಘಗಳ ಉಪ ನಿಬಂಧಕರು ತಿಳಿಸಿದ್ದಾರೆ.

ಸಾಲಕ್ಕಾಗಿ ಗಿರವಿ, ಒತ್ತೆ ಅಥವಾ ಯಾವುದೇ ಇತರೆ ರೂಪದ ಭದ್ರತೆಯನ್ನು ಸಾಲಗಾರನಿಂದ ಕೋರತಕ್ಕದ್ದಲ್ಲ ಹಾಗೂ ವಿಧಿಸಿದ ಬಡ್ಡಿಯ ದರಗಳಲ್ಲಿ ಪಾರದರ್ಶಕತೆಯನ್ನು ಕಾಯ್ದುಕೊಳ್ಳುವುದು. ಅಲ್ಲದೇ ಸಾಲಗಾರರಿಂದ ಹಣವಸೂಲಾತಿಗಾಗಿ ಯಾವುದೇ ಬಲವಂತ ಕ್ರಮವನ್ನು ಬಳಸತಕ್ಕದ್ದಲ್ಲ. ಒಂದು ವೇಳೆ ಬಳಸಿದ್ದಲ್ಲಿ 10 ವರ್ಷಗಳವರೆಗೆ ಜೈಲು ವಾಸ ಹಾಗೂ 5 ಲಕ್ಷ ರೂ. ದವರೆಗೆ ದಂಡ ವಿಧಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

## ಶಿವಾಜಿ ಮಹಾರಾಜರ ಧೈರ್ಯ, ಶೌರ್ಯ ಜಾತ್ಯಾತೀತ ಮನೋಭಾವನೆ ಇತರೇ ರಾಜರಲ್ಲಿ ಕಾಣುವುದು ತೀರ ಕಡಿಮೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಫೆ. 19 (ಕ.ವಾ.) ಶಿವಾಜಿ ಮಹಾರಾಜರಂತಹ ರಾಜರಿಲ್ಲ, ಅವರ ದೇಶಭಕ್ತಿ, ರಾಷ್ಟ್ರಪ್ರೇಮ, ಯುದ್ಧನೀತಿ, ಧೈರ್ಯ, ಶೌರ್ಯ ಜಾತ್ಯಾತೀತ ಮನೋಭಾವನೆ ಇತರೇ ರಾಜರಲ್ಲಿ ಕಾಣುವುದು ತೀರ ಕಡಿಮೆ ಜನರ ಬಗ್ಗೆ ಅಪಾರ ಕಾಳಜಿ ಹೊಂದಿದ್ದರು ಎಂದು ಕರ್ನಾಟಕ ಕ್ಷತ್ರೀಯ ಮರಾಠಾ ಪರಿಷತ್ ಅಧ್ಯಕ್ಷ ಆರ್.ಬಿ. ಜಗದಾಳೆ ಹೇಳಿದರು.

ಬುಧುವಾರದಂದು ಪ್ರಕಾಶ ಮಾಲ್ ಹತ್ತಿರದಲ್ಲಿರುವ ಮಯಾಮಂದಿರದಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಜಿಲ್ಲಾಪಂಚಾಯತ್ ಕಲಬುರಗಿ ಇವರು ಸಂಯುಕ್ತಾಶ್ರಯದಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿ, ಶಿವಾಜಿ ಮಹಾರಾಜರು ಪ್ರಸುತ್ತ ದಿನಗಳಲ್ಲಿ ಹುಟ್ಟುಹೋರಾಟಗಾರರಾಗಿದ್ದು, ಮಹಾರಾಜರ ಆದರ್ಶ ತತ್ವಗಳನ್ನು ಇಂದಿನ ಯುವ ಜನಾಂಗವೂ ಅಳವಡಿಸಿಕೊಳ್ಳುವ ಅಗತ್ಯವಿದೆಯೆಂದು ಹೇಳಿದರು.

ರಾಜ್ಯ ಕಾನೂನು ಸಲಹೆಗಾರ ಕೆ.ಕೆ.ಎಂ.ಪಿ. ಬೆಂಗಳೂರು ಸೂರ್ಯಕಾಂತ ಕದಮ್ಮ ಮಾತನಾಡಿ, ಛತ್ರಪತಿ ಶಿವರಾಜ ಮಹಾರಾಜರ 398 ನೇ ಜಯಂತ್ಯೋತ್ಸವ ಇಡಿ ದೇಶದಲ್ಲಿ ಆಚರಣೆ ಮಾಡುತ್ತಿದ್ದೇವೆ ಮರಾಠ ಸಮುದಾಯದಲ್ಲಿ ಬಹಳಷ್ಟು ಆರ್ಥಿಕವಾಗಿ ಸಾಮಾಜಿಕವಾಗಿ ಹಿಂದುಳಿದವರಿದ್ದಾರೆ ಎಂದರು.

ಇಂತಹ ಮಹಾನ ವ್ಯಕ್ತಿಯ ಜಯಂತಿ ಉತ್ಸವದಲ್ಲಿ ಭಾಗವಹಿಸಿ ಸಮಾಜದ ಜನರನ್ನು ಮುಖ್ಯವಾಹಿನಿಗೆ ತರುವುದರ ಮೂಲಕ ಮರಾಠ ಸಮುದಾಯವರು ಆರ್ಥಿಕವಾಗಿ ಸ್ವಾವಲಂಬಿಗಳಾಗುವಂತೆ ಮಾಡಬೇಕೆಂದು ತಿಳಿಸಿದರು.

ಯಾವುದೇ ಮೀಸಲಾತಿ ಸೌಲಭ್ಯ ಇಲ್ಲ ವಿದ್ಯಾಭ್ಯಾಸಕ್ಕೆ ವಿದ್ಯಾರ್ಥಿಗಳಿಗೆ ವಸತಿ ನಿಲಯ ಇಲ್ಲ ವಸತಿ ಶಾಲೆಗಳು ಇರುವುದಿಲ್ಲ ಸರ್ಕಾರ ಇಂತಹ ಸೌಲಭ್ಯಗಳನ್ನು ನಮ್ಮ ಸಮುದಾಯ ಒದಗಿಸಬೇಕೆಂದರು.

ಗೌರವ ಅಧ್ಯಕ್ಷ ಡಾ. ದಿನಕರ್ ಮೊರೆ, ಅವರು ಮಾತನಾಡಿ, ಎಲ್ಲ ಜನಾಂಗದವರಿಗೆ ಸಮನ್ವಯ ದೃಷ್ಟಿಯಿಂದ ಕಂಡ ಮಹಾನವ್ಯಕ್ತಿ ಶಿವಾಜಿ ಮಹಾರಾಜರು ಬದಕಲು ಅವಕಾಶ ನೀಡಿದವರು ಅನ್ಯಾಯದ ವಿರುದ್ಧ ಹೋರಾಡಿದ ಮಹಾನ ವ್ಯಕ್ತಿ, ಶಿವಾಜಿ ಮಹಾರಾಜ ಇವತ್ತಿಗೂ ಶ್ರೇಷ್ಠವ್ಯಕ್ತಿ ಎನಿಸಿಕೊಂಡರು ಎಂದರು. ದುರ್ಗಾ ಪ್ರಸಾದ ಮಹಾರಾಜ ಉಪನ್ಯಾಸ ನೀಡಿ ಆರ್ಶೀವಚನ ನೀಡಿದರು. ಜಿಲ್ಲಾಧಿಕಾರಿಗಳ ಕಚೇರಿಯ ಚುನಾವಣೆ ಶಾಖೆ– ಯ, ಪಂಪಯ್ಯ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ದತ್ತಪ್ಪ ಸಾಗನೂರ, ಮರಾಠಾ ಸಮಾಜದ ಕಾರ್ಯದರ್ಶಿ ರಾಜು ಕಾಕಡೆ, ಖಜಾಂಚಿ ರಮೇಶ, ಶಿವಾಜಿ ಮಹಾರಾಜರ ವೇಷಧಾರಿ ವಿಶಾಲ ಪವಾರ. ಸಮಾಜದ ಮುಖಂಡರಾದ ವೆಂಕಟೇಶ ಮಾನೆ, ಸುರೇಶ, ಸುಭಾಷ ಚೌಧವ, ಕಿಶೋರ ಮಾನಿ, ರಾಜುಪಾಟೀಲ, ಪ್ರತಾಪ ಕಾ–ಕಡೆ ಹಾಗೂ ಮಹಿಳೆಯರು ಇದ್ದರು. ಮೆರವಣಿಗೆಯೂ ಹುಮನ್ನಾಬಾದ ಬೇಸನಿಂದ ತಹಶೀಲ್ ಆಫೀಸ್‌ನಿಂದ ಮಯಾ ಮಂದಿರಲ್ಲಿ ಮುಕ್ತಾಯಗೊಂಡಿತು.

ಜಿಲ್ಲಾಡಳಿತದಿಂದ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಆಚರಣೆ

## ಛತ್ರಪತಿ ಶಿವಾಜಿ ಮಹಾರಾಜರ ಮನೋಭಾವನೆ ಬೆಳೆಸಿಕೊಳ್ಳಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಫೆ 19 –ಛತ್ರಪತಿ ಶಿವಾಜಿ ಮಹಾರಾಜರು ನಮ್ಮ ದೇಶದ ಶ್ರೇಷ್ಠ ಸ್ವಾಭಿಮಾನಿ, ರಾಷ್ಟ್ರ ಪ್ರೇಮಿ, ಸಾಹಸಿ, ದಕ್ಷ ಆಡಳಿತಗಾರ ಆಗಿದ್ದು, ಶಿವಾಜಿಯವರ ತತ್ವಗಳಿಂದ ಯುವಜನರು ಸ್ವಾಭಿಮಾನ, ಧೈರ್ಯ ಹಾಗೂ ರಾಷ್ಟ್ರಸೇವೆ ಮಾಡುವ ಮನೋಭಾವನೆ ಬೆಳೆಸಿಕೊಳ್ಳಬೇಕು ಎಂದು ರಾಯಚೂರು ಗ್ರೇಡ್–2 ತಹಶೀಲ್ದಾರ್ ಭೀಮರಾಯ ಅವರು ಹೇಳಿದರು. ಫೆ.19ರ ಬುಧವಾರ ದಂದು ನಗರದ ಪಂಡಿತ ಸಿದ್ದರಾಮ ಜಂಬಲದಿನ್ನ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾಪಂಚಾಯತ್,ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರುಗಳ ಸಹಯೋಗದಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ನಮ್ಮ ದೇಶದ ಸ್ವಾತಂತ್ರ್ಯದ ಕಹಳೆ ಊದಿದ ದಕ್ಷ ಆಡಳಿತಗಾರರು. ಶಿವಾಜಿ ಮಹಾರಾಜರ ತತ್ವಗಳನ್ನು ಪ್ರತಿಯೊಬ್ಬರೂ ಅನುಸರಿಸಬೇಕು. ಇಂತಹ ಪುಣ್ಯ ಪುರುಷರ ಜಯಂತಿಗಳನ್ನು ಇನ್ನಷ್ಟು ಸಂಭ್ರಮದಿಂದ ಅರ್ಥಪೂರ್ಣವಾಗಿ ಆಚರಿಸಬೇಕು. ಶಿವಾಜಿಯವರ ಕುರಿತು ಮತ್ತಷ್ಟು ಆಳವಾದ ಸುದೀರ್ಘವಾದ ಚಿಂತನೆ ನಡೆಸುವ ಕೆಲಸವಾಗಬೇಕು. ಶಿವಾಜಿಯವರ ತತ್ವಗಳಿಂದ ಯುವಜನರು ಸ್ವಾಭಿಮಾನ, ಧೈರ್ಯ ಹಾಗೂ ರಾಷ್ಟ್ರಸೇವೆ ಮಾಡುವ ಮನೋಭಾವನೆ ಬೆಳೆಸಿಕೊಳ್ಳಬೇಕು ಎಂದರು.

ಛತ್ರಪತಿ ಶಿವಾಜಿ ಮಹಾರಾಜರ ವ್ಯಕ್ತಿತ್ವವು ಬಹಳ ದೊಡ್ಡದಾಗಿದೆ. ಶಿವಾಜಿ ಮಹಾರಾಜರು ಅನ್ಯಾಯದ ವಿರುದ್ಧ ಹೋರಾಟ ಮಾಡಿದ ಧೀಮಂತ ನಾಯಕರು. ತಾಯಿ ಜೀಜಾಬಾಯಿಯುವರಿಂದ ಒಳ್ಳೆಯ ಸಂಸ್ಕಾರ ಕಲಿತ ಶಿವಾಜಿ ಮಹಾರಾಜರು ಗುರುಗಳಾದ ಸಂತ ರಾಮದಾಸ್ ಅವರ ಮಾರ್ಗದರ್ಶನದಲ್ಲಿ ಆದರ್ಶ ರಾಜರಾಗಿ ದಕ್ಷತೆಯಿಂದ ಆಡಳಿತ ನಡೆಸಿದರು. ಮಹಿಳೆಯರಿಗೆ ಪೂಜ್ಯ ಸ್ಥಾನ ಕೊಟ್ಟ ಶಿವಾಜಿಯವರು ಭಾವೈಕ್ಯತೆಗಾಗಿ ಹಾಗೂ ಸರ್ವಧರ್ಮ ಸಮನ್ವಯತೆಗಾಗಿ ಹೋರಾಡಿದ ಶೂರರು. ಶಿವಾಜಿ ಮಹಾರಾಜರ ಜಯಂತಿಯನ್ನು ಎಲ್ಲ ಸಮಾಜದ ಜನರು ಒಗ್ಗೂಡಿ ಅರ್ಥಪೂರ್ಣವಾಗಿ ಆಚರಿಸಬೇಕಾಗಿದೆ ಎಂದರು.

ಉಪನ್ಯಾಸಕರಾಗಿ ಯುವ ಸಾಹಿತಿಗಳಾದ ಈರಣ್ಣ ಬೆಂಗಾಲಿ ಅವರು ಮಾತನಾಡಿ, ಶಿವಾಜಿ ಮಹಾರಾಜರು ಅಷ್ಟದಿಗ್ಗಜರನ್ನು ಆಸ್ಥಾನದಲ್ಲಿಟ್ಟುಕೊಂಡು ದಕ್ಷ ಆಡಳಿತ ನಡೆಸಿದವರು. ಹಿಂದೂ ಸಾಮ್ರಾಜ್ಯವನ್ನು ಅತ್ಯುನ್ನತ ಸ್ಥಾನದಲ್ಲಿರುವಂತೆ ಹೋರಾಡಿದವರೇ ಛತ್ರಪತಿ ಶಿವಾಜಿಯವರು. ನೀತಿವಂತ, ವಿಚಾರಶೀಲ, ಧರ್ಮವಂತ, ಸುಶೀಲ, ಪರೋಪಕಾರಿ ರಾಜನಾಗಿದ್ದನು ಎಂದು ವರ್ಣಿಸಿದರು. ತಾಯಿ ಜೀಜಾಬಾಯಿಯು ತನ್ನ ಮಗುವಿನಲ್ಲಿರುವ ಚಿತ್ತ, ಪ್ರಜ್ಞೆ, ಪ್ರತಿಭೆ, ಚಾರಿತ್ರ್ಯ ಕಂಡುಕೊಂಡಳು ಹಾಗೂ ತನ್ನ ಮಗನು ಶೂರ ಸಾಮ್ರಾಟನಾಗಿ ಹೊರಹೊಮ್ಮಲು ಶ್ರಮಿಸಿದಳು. ಬುಡಕಟ್ಟು ಜನಾಂಗದವರಿಗೆ ಶಿಕ್ಷಣ, ಸಂಸ್ಕೃತಿ ನಾಗರಿಕತೆ ಕೊಡಿಸಿದ ಹೆಗ್ಗಳಿಕೆ ಶಿವಾಜಿಯವರಿಗೆ ಸಲ್ಲುತ್ತದೆ ಎಂದು ಛತ್ರಪತಿ ಶಿವಾಜಿ ಮಹಾರಾಜರ ಜೀವನ ಮತ್ತು ಸಾಧನೆ ಕುರಿತು ವಿವರಿಸಿದರು.

ಸಚಿವರು, ಶಾಸಕರಿಂದ ಮೆರವಣಿಗೆಗೆ ಚಾಲನೆ: ಬೆಳಗ್ಗೆ ನಗರದ ಅಂಬಾದೇವಿ ದೇವಸ್ಥಾನದಿಂದ ಆರಂಭವಾದ ಛತ್ರಪತಿ ಶಿವಾಜಿ ಮಹಾರಾಜರ ಅವರ ಭಾವಚಿತ್ರ ಮೆರವಣಿಗೆಗೆ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೊಡಗು ಜಿಲ್ಲಾ ಉಸ್ತುವಾರಿ ಸಚಿವರಾದ ಎನ್.ಎಸ್.ಭೋಸರಾಜು ಹಾಗೂ ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಶಿವರಾಜ ಎಸ್.ಪಾಟೀಲ್, ರಾಯಚೂರು ಮಹಾನಗರಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ ಸೇರಿದಂತೆ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಅವರು ಚಾಲನೆ ನೀಡಿದರು. ಅಲ್ಲಿಂದ ಆರಂಭಗೊಂಡ ಮೆರವಣಿಗೆಯು ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ರಂಗಮಂದಿರಕ್ಕೆ ಬಂದು ಸೇರಿತು. ಇದೇ ಸಂದರ್ಭದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಹ ಕಾರ್ಯದರ್ಶಿಯಾದ ಡಾ. ದಂಡಪ್ಪ ಬಿರಾದಾರ, ಸಮಾಜದ ಮುಖಂಡರಾದ ಹನಮಂತರಾವ್ ಜಗಪಾತಿ, ಭೀಮಣ್ಣ ಜಾದವ್, ಶಿವಾಜಿರಾವ್, ರಾಜೇಂದ್ರ ಶಿವಾಳಿ ಸೇರಿದಂತೆ ಇತರರು ಇದ್ದರು. ಈ ವೇಳೆ ಸಮಾಜದ ಪ್ರತಿಭಾನ್ವಿತ ವಿದ್ಯಾರ್ಥಿಗಳಾದ ನಿತೀನ್, ಪ್ರಜ್ವಲ್ ಅವರಿಗೆ ವಿವಿಧ ಗಣ್ಯರು ಸನ್ಮಾನ ಮಾಡಿದರು.

# ರಾಷ್ಟ್ರವೀರ ಶಿವಾಜಿ ಮಹಾರಾಜರ ಆದರ್ಶ, ತತ್ವಗಳನ್ನು ಯುವಜನಾಂಗ ಅಳವಡಿಸಿಕೊಳ್ಳಲಿ:ಸಚಿವ ಈಶ್ವರ ಖಂಡ್ರೆ



ಬೀದರ:ಫೆ.19: ರಾಷ್ಟ್ರಪುರುಷ, ರಾಷ್ಟ್ರವೀರ,ಧರ್ಮನಿರಪೇಕ್ಷ, ಜಾತ್ಯಾತೀತ ಮಹಾವೀರ, ರೈತ ಅಭಿವೃದ್ಧಿ, ಸ್ವದೇಶ ರಾಜ್ಯಸಂಸ್ಥಾಪಕ ಛತ್ರಪತಿ ಶಿವಾಜಿ ಮಹಾರಾಜರ ಆದರ್ಶ ತತ್ವಗಳನ್ನು ಇಂದಿನ ಯುವ ಜನಾಂಗವು ಅಳವಡಿಸಿಕೊಳ್ಳುವ ಅಗತ್ಯವಿದೆಯೆಂದು ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆಕರೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಆಶ್ರಯದಲ್ಲಿಂದು ಹಮ್ಮಿಕೊಂಡ ಛತ್ರಪತಿ ಶಿವಾಜಿ ಮಹಾರಾಜರ ಜಯಂತ್ಯುತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಇಡೀ ದೇಶದಲ್ಲಿ ಶಿವಾಜಿ ಮಹಾರಾಜರಂತಹ ರಾಜರಿಲ್ಲ. ಅವರ ದೇಶಭಕ್ತಿ,ರಾಷ್ಟ್ರಪ್ರೇಮ, ಯುದ್ಧನೀತಿ ಧೈರ್ಯ, ಶೌರ್ಯ ಮಹಿಳಾ ಗೌರವ ಜಾತ್ಯಾತೀತ ಮನೋಭಾವನೆ ಇತರೇ ರಾಜರಲ್ಲಿ ಕಾಣುವುದು ತೀರ ಕಡಿಮೆ. ರೈತರ ಬಗ್ಗೆ ಅಪಾರ ಕಳಕಳಿ ಹೊಂದಿದ್ದರು. ಮುಘಲರೊಂದಿಗೆ ಯುದ್ಧ ಮಾಡಿ ಗೆದ್ದರು. ಗೆರಿಲ್ಲಾ ಯುದ್ಧ ಪರಿಣಿತರಾಗಿದ್ದರು. ತಾಯಿ ಬೀಜಾಮಾತಾ ಮಾರ್ಗದರ್ಶನದಲ್ಲಿ ರಾಷ್ಟ್ರಭಕ್ತಿ ಬೆಳೆಸಿಕೊಂಡ ಶಿವಾಜಿ ಬಾಲ್ಯದಿಂದಲೇ ರಾಮಾಯಣ, ಮಹಾಭಾರತ ಓದಿ ಸ್ವರಾಜ್ಯ ರಾಜ್ಯ ನಿರ್ಮಿಸಿದರು ಎಂದು ಸಚಿವರು ತಿಳಿಸಿದರು.

ಶಿವಾಜಿ ಮಹಾರಾಜರು ಧರ್ಮನಿರಪೇಕ್ಷ,ಧರ್ಮಾತೀತ, ಜಾತ್ಯತೀತ ಆಗಿದ್ದರು. ಅವರ ಅಂಗರಕ್ಷಕರೇ ಮುಸ್ಲಿಂ ಸಮುದಾಯದವರಾಗಿದ್ದರು. ಅನೇಕ ಹುದ್ದೆಗಳಲ್ಲಿ ಮುಸ್ಲಿಂ ನಾಯಕರನ್ನು ನೇಮಿಸಿದ್ದರು. ಎಲ್ಲ ಸಮುದಾಯದವರನ್ನು ಒಟ್ಟಾಗಿ ಮುನ್ನಡೆಸುತ್ತಿದ್ದರು. ಆದರೆ ಇತ್ತೀಚೆಗೆ ಕೆಲವು ಜಾತಿ–ಜಾತಿಗಳಲ್ಲಿ ಕೋಮು–ದ್ವೇಷ ಬಿತ್ತುವ ಕಾರ್ಯ ಮಾಡುತ್ತಿದ್ದು ಎಲ್ಲ ಸಮುದಾಯಗಳು ಒಟ್ಟಾಗಿ ಸಹೋದರತ್ವದಿಂದ ಬಾಳಬೇಕೆಂದು ಸಚಿವರು ನುಡಿದರು.

ನಮ್ಮ ಕರ್ನಾಟಕ–ಮಹಾರಾಷ್ಟ್ರದ ಸಂಬಂಧಗಳು ಶತಶತಮಾನಗಳಿಂದಲೂ ಭಾತೃತ್ವ ರೀತಿಯಲ್ಲಿವೆ. ಶಿವಾಜಿಯ ತಂದೆಯ ಸಮಾಧಿ ದಾವಣಗೆರೆಯಲ್ಲಿದೆ. ಶಿವಾಜಿಯು ಕರ್ನಾಟಕದಲ್ಲಿ ಅನೇಕ ದಿನ ಉಳಿದು ಅನನ್ಯವಾದ ಸಂಬಂಧ ಹೊಂದಿದ್ದರು. ಕರ್ನಾಟಕ ಮಹಾರಾಷ್ಟ್ರದ ಗಡಿ ಭಾಗದಲ್ಲಿ ಇತ್ತೀಚೆಗೆ ಉತ್ತಮ ಅಭಿವೃದ್ಧಿಯಾಗುತ್ತಿದೆ ಎಂದು ಸಚಿವರು ತಿಳಿಸಿದರು.

ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ್ ಅವರು ಮಾತನಾಡಿ, ಶಿವಾಜಿ ಮಹಾರಾಜರು ಈ ದೇಶ ಕಂಡ ಅತೀ ಪ್ರಸಿದ್ಧ ಮಹಾಪುರುಷ ಆಗಿದ್ದರು. ಶಿವಾಜಿಯು ಯಾರ ವಿರುದ್ಧವು ಇರಲಿಲ್ಲ. ಎಲ್ಲ ಸಮುದಾಯಗಳನ್ನು ಒಟ್ಟಾಗಿ ರಾಜ್ಯಭಾರ ಮಾಡುತ್ತಿದ್ದರು. ಅನೇಕ ದೊಡ್ಡ ಹುದ್ದೆಗಳನ್ನು ಅಲ್ಪಸಂಖ್ಯಾತ ಸಮುದಾಯದವರಿಗೆ ನೀಡಿದ್ದರು. ಸಮಾಜದಲ್ಲಿ ವೈವಿಧ್ಯತೆ ಇದೆ. ಬೀದರನಲ್ಲಿ ಎಲ್ಲ ಸಮುದಾಯಗಳು ಶಾಂತಿಯಿಂದ, ಸೌಹಾರ್ದದಿಂದ ಜೀವಿಸುತ್ತಿದ್ದಾರೆ ಎಂದು ತಿಳಿಸಿದರು.

ದೇವರನ್ನು ಕಾಣುವ ವ್ಯವಸ್ಥೆಯಲ್ಲಿಯೂ ವೈವಿಧ್ಯತೆ ಇವೆ. ಬೀದರ ಜಿಲ್ಲೆ, ಕರ್ನಾಟಕ, ದೇಶ, ವಿದೇಶಗಳಲ್ಲಿಯೂ ಆಯಾ ಪ್ರದೇಶಕ್ಕನುಗುಣವಾಗಿ ದೇವರನ್ನು ಕಾಣುವ ರೀತಿ, ತತ್ವ, ಕಲ್ಪನೆ ವೈವಿಧ್ಯಮಯವಾಗಿದೆ. ಆದರೆ ಈ ಮನುಷ್ಯ ಮಾತ್ರ ಎಲ್ಲೆಡೆ ಒಂದೇ ರೀತಿ ಆಗಿದ್ದಾನೆ. ಈ ನೆಲ, ಜಲ, ವಾಯು ಎಲ್ಲರಿಗೂ ಒಂದೇ, ರಕ್ತವೂ ಒಂದೇ, ಸಸ್ಯಹಾರ, ಮಾಂಸಾಹಾರ ಅವರವರ ಆಹಾರ ಪದ್ಧತಿಯಷ್ಟೆ, ಎಲ್ಲ ಸಮುದಾಯದವರು ಸೇರಿ ಬೀದರ ಜಿಲ್ಲೆಯನ್ನು ಅಭಿವೃದ್ಧಿಗೊಳಿಸೋಣ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಧಾರಶಿವ ಮಹಾರಾಷ್ಟ್ರದ ಮಾಜಿ ಸಂಸದರಾದ ಪ್ರೋ.ರವೀಂದ್ರ ವಿಶ್ವನಾಥರಾವ ಗಾಯಕವಾಡ ಅವರು ಅತಿಥಿ ಉಪನ್ಯಾಸ ನೀಡಿದರು.

ಕಾರ್ಯಕ್ರಮಕ್ಕೂಮುಂಚಿತವಾಗಿ ಜಿಲ್ಲಾಧಿಕಾರಿ ಕಚೇರಿಯಲ್ಲಿ ಶಿವಾಜಿ ಮಹಾರಾಜರ ಭಾವಚಿತ್ರಕ್ಕೆ ಸಚಿವ ರಹೀಂ ಖಾನ್, ಶಾಸಕ ಡಾ.ಶೈಲೇಂದ್ರ ಕೆ.ಬೆಲ್ದಾಳೆ, ಮಾಜಿ ಸಚಿವರಾದ ಬಂಡೆಪ್ಪ ಖಾಶಂಪೂರ, ಈಶ್ವರಸಿಂಗ ಠಾಕೂರ, ಸಮಾಜದ ಗಣ್ಯರಿಂದ ಪೂಜೆ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಬೀದರ ನಗರಸಭೆ ಅಧ್ಯಕ್ಷರಾದ ಮಹ್ಮದ ಗೌಸ್, ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ, ಅಪರ ಜಿಲ್ಲಾಧಿಕಾರಿಗಳಾದ ಶಿವಕುಮಾರ ಶೀಲವಂತ, ಮಾಜಿ ಜಿಲ್ಲಾ ಪಂಚಾಯತ ಉಪಾಧ್ಯಕ್ಷರಾದ ಪ್ರಕಾಶ ಪಾಟೀಲ, ಘಾಟಬೋರಳ ಸಮಾಜದ ಮುಖಂಡರಾದ ಮದನರಾವ ಬಿರಾದಾರ, ರಘುನಾಥ ಜಾಧವ, ಅರ್ಜುನ ಬಿಲ್ಲೆ, ಪಂಡಿತ ಜಾಧವ ಬಾಳೂರು ಸೇರಿದಂತೆ ಸಮಾಜದ ಗಣ್ಯರು, ಅಭಿಮಾನಿಗಳು ಉಪಸ್ಥಿತರಿದ್ದರು.

# ಮೃತ ಕಾರ್ಮಿಕನ ಶವ ಎಳೆದೊಯ್ದ 6 ಕಾರ್ಮಿಕರ ಬಂಧನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.19: ಜಿಲ್ಲೆಯ ಸೇಡಂ ತಾಲೂಕಿನ ಕೋಡ್ಲಾ ಸಮೀಪದ ಸಿಮೆಂಟ್ ಕಾರ್ಖಾನೆಯಲ್ಲಿ ರಕ್ತದೊತ್ತಡ ಕುಸಿತದಿಂದ ಮೃತಪಟ್ಟಿದ್ದಾನೆ ಎನ್ನಲಾಗುತ್ತಿರುವ ಬಿಹಾರಮೂಲದ ಕಾರ್ಮಿಕನ ಕಳೇಬರವನ್ನು ಅಮಾನವೀಯವಾಗಿ ಎಳೆದೊಯ್ದ ಘಟನೆಗೆ ಸಂಬಂಧಿಸಿದಂತೆ ಕಾರ್ಖಾನೆಯ ಆರು ಸಿಬ್ಬಂದಿ ವಿರುದ್ಧ ಸೇಡಂ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಅವರನ್ನು ಬಂಧಿಸಿ ನ್ಯಾಯಾಂಗ ವಶಕ್ಕೆ ಒಪ್ಪಿಸಲಾಗಿದೆ.

ಬಿಹಾರಮೂಲದ ಚಂದನಸಿಂಗ್ ಕಳೆದ ಎರಡು ದಿನಗಳ ಹಿಂದೆ ರಕ್ತದೊತ್ತಡದಲ್ಲಿ ದಿಢೀರ್ ಕುಸಿತ ಉಂಟಾಗಿ ಸಾವನ್ನಪ್ಪಿದ ಬಳಿಕ ಶವ ಸಾಗಣೆ ಸಂದರ್ಭದಲ್ಲಿ ಕೆಲವು ಸಿಬ್ಬಂದಿ ಆತನ ಕಳೇಬರ ದರದರನೆ ಎಳೆದೊಯ್ದಿದ್ದರು. ಈ ಸಂಬಂಧ ಉತ್ತರ ಭಾರತದ ಕಾರ್ಮಿಕರಾದ ಹೈದರ್ ಅಲಿ, ಅಜಯ್, ರವಿಶಂಕರ್, ಹರಿಂದರ್, ರಮೇಶ್ಚಂದ್ರ ಹಾಗೂ ಅಖಿಲೇಶ್ ವಿರುದ್ಧ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಇವರನ್ನು ಬಂಧಿಸಿದ್ದಾರೆ.

ಈ ಮಧ್ಯೆ, ಕಾರ್ಮಿಕನ ಸಾವಿಗೆ ನ್ಯಾಯ ಒದಗಿಸುವಂತೆ ಕೋರಿ ಕಾರ್ಮಿಕರು ಕಾರ್ಖಾನೆ ಆವರಣದಲ್ಲಿ ಶವವಿಟ್ಟು ಪ್ರತಿಭಟನೆ ನಡೆಸುವ ನೆಪದಲ್ಲಿ ಶಾಂತಿ–ಸುವ್ಯವಸ್ಥೆಗೆ ಭಂಗ ಉಂಟು ಮಾಡಿದ್ದಾರೆ ಎಂದು ಪೊಲೀಸರು ದೂರಿನಲ್ಲಿ ದಾಖಲಿಸಿದ್ದಾರೆ.

ಮತ್ತೊಂದೆಡೆ, ಬಿಹಾರ ಮೂಲದ ಚಂದನಸಿಂಗ್ ಸಾವಿನ ಹಿನ್ನೆಲೆಯಲ್ಲಿ ಆತನನ್ನು ಗುತ್ತಿಗೆ ಆಧಾರದ ಮೇಲೆ ಸಿಮೆಂಟ್ ಕಾರ್ಖಾನೆಯಲ್ಲಿ ದುಡಿಯಲು ಕಳಿಸಿದ ಗುತ್ತಿಗೆ ಸಂಸ್ಥೆ ಪರಿಹಾರ ನೀಡಬೇಕೆಂದು ಕಾರ್ಮಿಕರು ಒತ್ತಾಯಿಸಿದ್ದಾರೆ.

# ರನ್ನ ರಥಯಾತ್ರೆಗೆ ಎಲ್ಲೆಡೆ ಅದ್ದೂರಿ ಸ್ವಾಗತ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.19–ಜಿಲ್ಲೆಯ ಮುಧೋಳದಲ್ಲಿ ಫೆಬ್ರವರಿ 22 ರಿಂದ 24 ವರೆಗೆ ಮೂರು ದಿನಗಳ ಕಾಲ ಹಮ್ಮಿಕೊಂಡ ರನ್ನ ವೈಭವ ಹಿನ್ನಲೆಯಲ್ಲಿ ಜಿಲ್ಲೆಯಾದ್ಯಂತ ಸಂಚರಿಸುತ್ತಿರುವ ರನ್ನ ರಥಯಾತ್ರೆಗೆ ಅದ್ದೂರಿ ಸ್ವಾಗತ ದೊರೆಯುತ್ತಿದೆ.

ಈಗಾಗಲೇ ತಾಲೂಕಾ ಮಟ್ಟದ ಒಂದು ರಥ ಫೆ.13 ರಂದು ರನ್ನಬೆಳಗಲಿಯಿಂದ, ಇನ್ನೊಂದು ರಥ ಫೆ.17 ರಂದು ಬಾಗಲಕೋಟೆ ಜಿಲ್ಲಾಡಳಿತದ ಮುಖ್ಯ ಆವರಣದಿಂದ ಹೊರಟು ಜಿಲ್ಲೆಯಾದ್ಯಂತ ಪ್ರತಿಯೊಂದು ತಾಲೂಕುಗಳಿಗೆ ಸಂಚರಿಸಲಿದೆ. ಮತ್ತೊಂದು ರಥ ಫೆ.19 ರಂದು ಬೆಂಗಳೂರಿನಿಂದ ಚಾಲನೆ ದೊರೆತಿದ್ದು, ಈ ರಥ ಸಹ ಪ್ರಮುಖ ಜಿಲ್ಲಾ ಸ್ಥಳಗಳ ಮೂಲಕ ರಾಜ್ಯಾದ್ಯಂತ ಸಂಚರಿಸಿ ಫೆ.22 ರಂದು ರನ್ನ ಬೆಳಗಲಿಗೆ ಆಗಮಿಸಲಿದೆ.

ರನ್ನನ ಗತವೈಭವ ಸಾರುವ ನಿಟ್ಟಿನಲ್ಲಿ ರಾಜ್ಯಾದ್ಯಂತ ಪ್ರತ್ಯೇಕ ಮೂರು ರಥ ಸಂಚರಿಸುತ್ತಿವೆ. ತಾಲೂಕಾಮಟ್ಟದಲ್ಲಿ ಪ್ರತಿಯೊಂದು ಗ್ರಾಮಗಳಿಗೆ ಆಗಮಿಸಿದಾಗ ಗ್ರಾಮದ ಮಹಿಳೆಯರು ಇಳಕಲ್ಲ ಸೀರೆ ಉಟ್ಟು ಕೈಯಲ್ಲಿ ಆರತಿ ಹಾಗೂ ಕುಂಬ ಹೊತ್ತುಕೊಂಡು ಅದ್ದೂರಿಯಾಗಿ ರಥವನ್ನು ಸ್ವಾಗತಿಸಿದರೆ, ಇನ್ನು ಪುರುಷರು ಫೇಟ ಸುತ್ತಿಕೊಂಡು ಹಾಗೂ ರನ್ನನ ಗದ ಪ್ರದರ್ಶನ ಮಾಡುತ್ತಿರುವ ದೃಶ್ಯಗಳು ಕಂಡುಬಂದವು.

ತಾಲೂಕಾ ಮತ್ತು ಜಿಲ್ಲಾ ಮಟ್ಟದ ರಥ ಒಂದೇತರನಾಗಿದ್ದು, ರನ್ನನ ಮೂರ್ತಿ, ರನ್ನನ ಗ್ರಂಥ ಮತ್ತು ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರ ಭಾವಚಿತ್ರ ಸಹ ರಥದಲ್ಲಿ ಕಾಣಬಹುದಾಗಿದೆ. ರಾಜ್ಯ ಮಟ್ಟದ

ರನ್ನನ ರಥ ದೊಡ್ಡ ಗಾತ್ರ ಹೊಂದಿದ್ದು, ಅದರಲ್ಲಿ ಜಿಲ್ಲೆಯ ಜನಪದ ಕಲೆ, ಕಲಾವಿದರು, ಸಾಹಿತಿಗಳು, ಅಮೃತೇಶ್ವರ ದೇವಸ್ಥಾನಗಳ ಭಾವಚಿತ್ರಗಳನ್ನು ಕಾಣಬಹುದಾಗಿದೆ.

# ರಾಷ್ಟ್ರ ಮಟ್ಟದ "ನಮ್ಮ ಸರಸ್ ಮೇಳ-2025" ಆಯೋಜನೆ ಹಿನ್ನೆಲೆ: ಶರಣಬಸವೇಶ್ವರ ಜಾತ್ರೆ ಮೈದಾನಕ್ಕೆ ಡಿ.ಸಿ.ಭೇಟಿ, ಸ್ಥಳ ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.19: ಕಲಬುರಗಿ ನಗರದ ಶ್ರೀ ಶರಣಬಸವೇಶ್ವರ ದೇವಸ್ಥಾನ ಜಾತ್ರೆ ಮೈದಾನದಲ್ಲಿ ಇದೇ ಫೆಬ್ರವರಿ 24 ರಿಂದ ಮಾರ್ಚ್ 5ರ ವರೆಗೆ 10 ದಿನಗಳ ಕಾಲ ಮಹಿಳಾ ಸ್ವ–ಸಹಾಯ ಗುಂಪುಗಳು ತಯ್ಯಾರಿಸಿದ ವಸ್ತುಗಳ ರಾಷ್ಟ್ರ ಮಟ್ಟದ ಬೃಹತ್ ಪ್ರದರ್ಶನ ಮತ್ತು ಮಾರಾಟ ಮೇಳ ನಡೆಯುವುದರಿಂದ ಬುಧವಾರ ಶ್ರೀ ಶರಣಬಸವೇಶ್ವರ ಜಾತ್ರೆ ಮೈದಾನಕ್ಕೆ ಡಿ.ಸಿ. ಬಿ.ಫೌಜಿಯಾ ತರನ್ನುಮ್ ಅವರು ಭೇಟಿ ನೀಡಿ ಸ್ಥಳ ಪರಿಶೀಲಿಸಿದರು.

20 ರಾಜ್ಯಗಳ ಮಹಿಳಾ ಸ್ವ–ಸಹಾಯ ಗುಂಪುಗಳು ಈ ಮಾರಾಟ ಮೇಳದಲ್ಲಿ ಭಾಗಿಯಾಗುವುದರಿಂದ ಎಲ್ಲಾ ರೀತಿಯ ಸಿದ್ಧತೆ ತ್ವರಿತಗತಿಯಲ್ಲಿ ಕೈಗೊಳ್ಳಬೇಕು. ಸ್ಟಾಲ್ ಸ್ಥಾಪನೆ, ಸ್ವಚ್ಛತೆ, ಬಯೋ ಟಾಯಲೆಟ್ ವ್ಯವಸ್ಥೆ ಕಲ್ಪಿಸಬೇಕು. ಸಂಚಾರ ದಟ್ಟಣೆಯಾಗದಂತೆ ನಗರ ಪೊಲೀಸ್ ಮತ್ತು ಸಂಚಾರಿ ಪೊಲೀಸರು ಸಮಾಲೋಚನೆ ನಡೆಸಿ ವಾಹನ ಸಂಚಾರದ ಮಾರ್ಗಗಳು, ವಾಹನಗಳ ಪಾರ್ಕಿಂಗ್ ಸ್ಥಳದ ಕುರಿತು ಖಚಿತಪಡಿಸಿಕೊಳ್ಳಬೇಕೆಂದರು.

ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ, ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಜಗದೇವಪ್ಪ, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಮುರಳೀಧರ ರತ್ನಗಿರಿ ಮತ್ತಿತರಿದ್ದರು.

# ಭೀಕರ ಅಪಘಾತ

## ಒಂದೇ ಕುಟುಂಬದ ಮೂವರು ಸಾವು

ಮಲ್ಲಮ್ಮ ನುಡಿ ವಾರ್ತೆ

ಕಾರವಾರ:ಫೆ.19: ಭೀಕರ ಅಪಘಾತದಲ್ಲಿ ಒಂದೇ ಕುಟುಂಬದ ಮೂವರು ಸಾವನ್ನಪ್ಪಿರುವ ಘಟನೆ ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪುರ ತಾಲೂಕಿನ ಅರಬೈಲ್ ಘಟ್ಟದಲ್ಲಿ ನಡೆದಿದೆ.

ಆರ್ ವೆಂಕಟೇಶ್, ಪತ್ನಿ ಚೈತ್ರಾ ಹಾಗೂ 4 ವರ್ಷದ ಮಗು ಶ್ರೀಹಾನ್ ಮೃತ ದುರ್ದೈವಿಗಳು. ಓವರಟೇಕ್ ಮಾಡುವ ಭರದಲ್ಲಿ ಎದುರಿನಿಂದ ಬರುತ್ತಿದ್ದ ಕಾರಿಗೆ ಲಾರಿ ಡಿಕ್ಕಿ ಹೊಡೆದಿದ್ದು, ಲಾರಿ ಗುದ್ದಿದ ರಭಸಕ್ಕೆ ಕಾರು ಸಂಪೂರ್ಣ ನಜ್ಜುಗುಜ್ಜಾಗಿದೆ. ಕಾರಿನಲ್ಲಿದ್ದ ಮೂವರ ಪೈಕಿ ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿದ್ದು, ಮಗು ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದೆ.

ಕುಟುಂಬಸ್ಥರು ಕೊಪ್ಪಳದಿಂದ ಅಂಕೋಲಾಕ್ಕೆ ಕಡೆಗೆ ಪ್ರವಾಸಕ್ಕೆ ಹೊರಟ್ಟಿದ್ದರು. ಮೃತ ವೆಂಕಟೇಶ್ ತಮ್ಮ ಶ್ರೀಕಾಂತ ರೆಡ್ಡಿ ಕಾರು ಚಲಾಯಿಸುತ್ತಿದ್ದರು. ಚಾಲಕ ಶ್ರೀಕಾಂತ್ ರೆಡ್ಡಿಯ ಎರಡು ಕಾಲಿಗೆ ಗಂಭೀರ ಗಾಯಗಳಾಗಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

# ಹತ್ತು ದಿನದಲ್ಲಿ ಮನೆಗೆ ಬಿ-ಖಾತಾ : ಭರತ್ ರೆಡ್ಡಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ: ರಾಜ್ಯ ಸರಕಾರ ಮುನಿಸಿಪಲ್ ಕಾಯ್ದೆ–2025 ನ್ನು ಜಾರಿಗೊಳಿಸಿದ್ದು, ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 2024 ರ ಸೆಪ್ಟೆಂಬರ್ 10 ರೊಳಗೆ ನಿರ್ಮಾಣಗೊಂಡ ಅನಧಿಕೃತ ಲೇಔಟ್ (ಬಡಾವಣೆ) ಸೈಟು ಹಾಗೂ ಮನೆಗಳಿಗೆ ಬಿ–ಖಾತಾ ತೆರೆದು ನೋಂದಣಿ ಹಾಗೂ ವ್ಯವಹಾರಕ್ಕೆ ಹತ್ತು ದಿನದೊಳಗೆ ಕಾಯಿದೆ ತಿದ್ದುಪಡಿ ಮೂಲಕ ಅವಕಾಶ ಕಲ್ಪಿಸಿದೆ ಎಂದು ನಗರ ಶಾಸಕ ನಾರಾ ಭರತ್ ರೆಡ್ಡಿ ಹೇಳಿದರು.

ಮಹಾನಗರ ಪಾಲಿಕೆಯ ಶಾಸಕರ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದರ ಸಂಪೂರ್ಣ ಸದುಪಯೋಗವನ್ನು ಮಧ್ಯಮ ವರ್ಗ ಹಾಗೂ ಬಡಜನರು ಪಡೆದುಕೊಳ್ಳಬೇಕು ಹೇಳಿದರು. ಮೂರು ತಿಂಗಳೊಳಗೆ ಈ ಪ್ರಕ್ರಿಯೆಯನ್ನು 3 ತಿಂಗಳೊಳಗೆ ಈ ಪ್ರಕ್ರಿಯೆ ಪೂರ್ಣಗೊಳಿಸಬೇಕಿದ್ದು, ಜನರಿಗೆ ತೊಂದರೆಯಾಗದಂತೆ ಪಾಲಿಕೆಯಿಂದ ವಾಲೆಂಟಿಯರ್‌ಗಳನ್ನು ನೇಮಕ ಮಾಡಿ ಜನರಿಂದ ದಾಖಲೆಗಳನ್ನು ಪಡೆದು ಏಳರಿಂದ ಹತ್ತು ದಿನಗಳೊಳಗಾಗಿಯೇ ಬಿ–ಖಾತಾವನ್ನು ಮನೆ ಬಾಗಿಲಿ ತಲುಪಿಸುವ ಕೆಲಸ ಮಾಡುತ್ತೇವೆ ಎಂದರು.



ಮಧ್ಯವರ್ತಿಗಳಿಂದ ಬಿ–ಖಾತಾ ಮಾಡಿಸಿಕೊಳ್ಳಲು ಬಂದರೆ ಅಂಥವರ ಕೆಲಸ ಪಾಲಿಕೆಯಲ್ಲಿ ಆಗುವುದಿಲ್ಲ. ನೇರವಾಗಿ ಜನರೇ ದಾಖಲೆಗಳನ್ನು ತಂದು ಪಾಲಿಕೆಯಲ್ಲಿ ನೋಂದಣಿ ಮಾಡಿಸಿಕೊಂಡು ಬಿ ಖಾತಾ ಪಡೆಯಬೇಕು. ಇಲ್ಲವೇ ಪಾಲಿಕೆಯಿಂದ ನೇಮಿಸಿರುವ ವಾಲೆಂಟಿಯರ್ ಗಳ ಕೈಗೆ ದಾಖಲೆ ಕೊಟ್ಟರೆ 10 ದಿನಗಳೊಳಗಾಗಿಯೇ ಬಿ–ಖಾತಾ ವಾರಸುದಾರರ ಮನೆ ಸೇರಲಿದೆ. ಬಿ–ಖಾತಾ ಮಾಡಿಸಲು ಯಾರಾದರೂ ಹಣ ಕೇಳಿದರೆ ಕೊಡಬಾರದು. ಸಾರ್ವಜನಿಕರು ನೇರವಾಗಿ ಪಾಲಿಕೆ ಕಛೇರಿಗೆ ಭೇಟಿ ನೀಡಿ ದಾಖಲೆ ನೋಂದಣಿ ಮಾಡಿಸಿಕೊಂಡು ಬಿ ಖಾತಾ ಪಡೆಯಬೇಕು ಎಂದರು.

ತಮ್ಮ ತಮ್ಮ ವಾರ್ಡ್ ಗಳಿಗೆ ವಾಲೆಂಟಿಯರ್ ಗಳನ್ನು ನೇಮಿಸುತ್ತೇವೆ ಅಂತವರ ಕೈಗೆ ದಾಖಲೆ ಕೊಟ್ಟು ಬಿ–ಖಾತಾ ಮಾಡಿಸಿಕೊಳ್ಳಿ. ಪಾಲಿಕೆ ಕಛೇರಿಯಲ್ಲಿ ಇದಕ್ಕಾಗಿಯೇ ಟೋಲ್ ಫ್ರೀ ನಂಬರನ್ನು ಇಡಲಾಗುತ್ತದೆ. ಸಾರ್ವಜನಿಕರು ಬಿ– ಖಾತಾ ಪಡೆಯಲು ಆಸ್ತಿಗೆ ಸಂಬಂಧಿಸಿದಂತೆ ಸ್ವತ್ತಿನ ಮಾಲೀಕತ್ವ ಸಾಬೀತುಪಡಿಸುವ 2024ರ ಸೆಪ್ಟೆಂಬರ್ 10ರ ಪೂರ್ವದಲ್ಲಿ ನೋಂದಾಯಿತ ಮಾರಾಟ ಪತ್ರಗಳು,

ದಾನ ಪತ್ರ, ವಿಭಾಗ ಪತ್ರಗಳು, ಹಕ್ಕು ಖುಲಾಸೆ ಪತ್ರಗಳು, ಪ್ರಸ್ತುತ ಸಾಲಿನವರೆಗೆ ಋಣಭಾರ ಪ್ರಮಾಣ ಪತ್ರ, ಚಾಲ್ತಿ ಸಾಲಿನ ಆಸ್ತಿ ತೆರಿಗೆ ಪಾವತಿ ರಸೀದಿ, ಮಾಲೀಕರ ಫೋಟೋ ಮತ್ತು ಸ್ವತ್ತಿನ ಫೋಟೋ, ಮಾಲೀಕರ ಗುರುತಿನ ದಾಖಲೆ ಪ್ರತಿಯೊಂದಿಗೆ ಈ ಎಲ್ಲಾ ದಾಖಲೆಗಳನ್ನು ಪಾಲಿಕೆ ಕಛೇರಿಯಲ್ಲಿ ನೇರವಾಗಿ ಬಂದು ನೊಂದಾಯಿಸಿ ಕೇವಲ ಏಳರಿಂದ ಹತ್ತು ದಿನಗಳೊಳಗಾಗಿ ಬಿ–ಖಾತಾ ಪಡೆಯಬಹುದು ಎಂದರು. ಪಾಲಿಕೆ ಆಯುಕ್ತ ಖಲೀಲ್ ಸಾಬ್, ಮೇಯರ್ ಮುಲ್ಲಂಗಿ ನಂದೀಶ್, ಪಾಲಿಕೆಯ ಸಭಾ ನಾಯಕ ಪಿ.ಗಾದೆಪ್ಪ, ಪಾಲಿಕೆ ಸದಸ್ಯರಾದ

ರಾಮಾಂಜನೇಯ, ಮುಖಂಡರಾದ ಬಾಪೂಜಿನಗರ ಶಿವರಾಜ್, ಡಿ.ಅಯಾಜ್ ಅಹ್ಮದ್ ಇನ್ನಿತರರು ಸುದ್ದಿಗೋಷ್ಠಿಯಲ್ಲಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.